24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 1 | ನವದೆಹಲಿ | ಬೆಲೆ ₹10 | ಜೂನ್ 27 2026, ಶನಿವಾರ

## ಉತ್ತಮವಾಗಿ ಕಾರ್ಯನಿರ್ವಹಿಸದಿದ್ದರೆ ಬೇರೆ ಇಲಾಖೆಗೆ ಎತ್ತಂಗಡಿ: ಅಬಕಾರಿ ಅಧಿಕಾರಿಗಳಿಗೆ ಸಿಎಂ ಎಚ್ಚರಿಕೆ

**ಬೆಂಗಳೂರು, ಜೂ.26: "ಅಬಕಾರಿ ಇಲಾಖೆಯ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಬೇರೆ ಇಲಾಖೆಗೆ ವರ್ಗಾವಣೆ ಮಾಡಲು ಬರುವುದಿಲ್ಲ ಎಂದು ಭಾವಿಸಬೇಡಿ. ಅಗತ್ಯಬಿದ್ದರೆ ವರ್ಗಾವಣೆ ಮಾಡಲು ಬೇಕಾದ ಕಾನೂನು ಬದಲಾವಣೆ ತರಲೂ ಸರ್ಕಾರ ಸಿದ್ಧವಿದೆ," ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.**



ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಶುಕ್ರವಾರ ನಡೆದ ಅಬಕಾರಿ ಇಲಾಖೆಯ ಮಹತ್ವದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಲಾಖೆಯಲ್ಲಿ ವೃತ್ತಿಪರತೆ ಕಾಯ್ದುಕೊಳ್ಳುವಂತೆ ಮತ್ತು ಸರ್ಕಾರದ ಹೆಸರಿಗೆ ಮಸಿ ಬಳಿಯುವ ಕೆಲಸ ಮಾಡದಂತೆ ಕಠಿಣ ಸಂದೇಶ ರವಾನಿಸಿದರು.ಅಧಿಕಾರಿಗಳ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು, "ನೀವುಗಳು ಘನತೆ ಉಳಿಸಿಕೊಂಡರೆ ಇಲಾಖೆಯ ಘನತೆ ಉಳಿಯುತ್ತದೆ, ಇಲಾಖೆಯ ಘನತೆ ಉಳಿದರೆ ಸರ್ಕಾರದ ಘನತೆ ಹೆಚ್ಚುತ್ತದೆ. ಅದನ್ನು ಬಿಟ್ಟು ಸರ್ಕಾರದ ಘನತೆಗೆ ಧಕ್ಕೆ ತರುವ ಕೆಲಸ ಮಾಡಿದರೆ ನಾವು ನೋಡುತ್ತಾ ಕೂರುವುದಿಲ್ಲ. ಸರ್ಕಾರಕ್ಕೆ ಕೆಟ್ಟ ಹೆಸರು ತರುವ ಯಾರನ್ನೂ, ಯಾವ ಪ್ರಯತ್ನವನ್ನೂ ನಾನು ಸಹಿಸುವುದಿಲ್ಲ. ಬಹಳ ಎಚ್ಚರಿಕೆಯಿಂದ ಕೆಲಸ ಮಾಡಿ," ಎಂದು ಖಡಕ್ ಆಗಿ ಹೇಳಿದರು.ಇಲಾಖೆಯ ಆದಾಯ ವೃದ್ಧಿ ಹಾಗೂ ಸುಧಾರಣೆಗೆ ಸಂಬಂಧಿಸಿದಂತೆ ಸಭೆಯಲ್ಲಿ ಕೆಲವು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಲಾಯಿತು. ಇಲಾಖೆಯಲ್ಲಿ ಹೊಸದಾಗಿ ಜಾರಿಗೆ ತರಲಾಗಿರುವ ಎಐಬಿ ಪದ್ಧತಿಯಿಂದಾಗಿ ನಿರೀಕ್ಷಿತ ಪ್ರಮಾಣದಲ್ಲಿ ಉತ್ತಮ ಬೆಳವಣಿಗೆಯಾಗಿದೆ ಎಂದು ಸಿಎಂ ತಿಳಿಸಿದರು. ಆದಾಯ ಹೆಚ್ಚಳದ ಭಾಗವಾಗಿ ಹೊಸದಾಗಿ 574 ಸನ್ನದುಗಳನ್ನು ಇ-ಹರಾಜು ಹಾಕಲು ಸಭೆಯಲ್ಲಿ ನಿರ್ಧರಿಸಲಾಯಿತು. ಅಬಕಾರಿ ಪರವಾನಗಿ ನವೀಕರಣದ ಮೊತ್ತವನ್ನು ಒಟ್ಟಿಗೆ ಪಾವತಿಸಲು ಕಷ್ಟವಾಗುವವರಿಗಾಗಿ, ಆ ಮೊತ್ತವನ್ನು ಎರಡು ಕಂತುಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸಿಕೊಡುವಂತೆ ಅಧಿಕಾರಿಗಳಿಗೆ ಸಿಎಂ ಸೂಚಿಸಿದರು.ಅಕ್ಕಪಕ್ಕದ ರಾಜ್ಯಗಳಲ್ಲಿ ಅಬಕಾರಿ ಇಲಾಖೆಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಮತ್ತು ಅಲ್ಲಿನ ಆದಾಯ ಸಂಗ್ರಹದ ಸ್ವರೂಪ ಹೇಗಿದೆ ಎಂಬ ವರದಿಯನ್ನು ತಾವೂ ಗಮನಿಸಿರುವುದಾಗಿ ಹೇಳಿದ ಮುಖ್ಯಮಂತ್ರಿಗಳು, ಕರ್ನಾಟಕದಲ್ಲೂ ಇಲಾಖೆಗೆ ನೀಡಿರುವ ನಿರ್ದಿಷ್ಟ ತೆರಿಗೆ ಸಂಗ್ರಹದ ಗುರಿಯನ್ನು ತಲುಪಲು ಅಧಿಕಾರಿಗಳು ಮತ್ತು ಸಿಬ್ಬಂದಿ ಶ್ರಮಿಸಬೇಕು ಎಂದು ಕಟ್ಟುನಿಟ್ಟಿನ ಆದೇಶ ನೀಡಿದರು. ಸರ್ಕಾರದ ನಿರೀಕ್ಷೆಗೆ ತಕ್ಕಂತೆ ವೃತ್ತಿಪರತೆ ಪ್ರದರ್ಶಿಸದಿದ್ದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಅವರು ಪುನರುಚ್ಚರಿಸಿದರು.

## ಪಶ್ಚಿಮ ಏಷ್ಯಾ ಬಿಕ್ಕಟ್ಟು ಶಮನ

### ವಾಣಿಜ್ಯ ಎಲ್‌ಪಿಜಿ ಮೇಲಿನ ಎಲ್ಲಾ ನಿರ್ಬಂಧ ಹಿಂಪಡೆದ ಕೇಂದ್ರ

**ನವದೆಹಲಿ, ಜೂ.26:** ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ವಾಣಿಜ್ಯ ಬಳಕೆಯ ಎಲ್‌ಪಿಜಿ ಪೂರೈಕೆಯ ಮೇಲಿದ್ದ ಎಲ್ಲಾ ನಿರ್ಬಂಧಗಳನ್ನು ಹಿಂಪಡೆದಿದೆ. ಇದರಿಂದ ಹೋಟೆಲ್, ರೆಸ್ಟೋರೆಂಟ್, ಕೈಗಾರಿಕೆಗಳು ಹಾಗೂ ಇತರೆ ವಾಣಿಜ್ಯ ಬಳಕೆದಾರರಿಗೆ ಎಲ್‌ಪಿಜಿ ಪೂರೈಕೆ ಮತ್ತೆ ಹಿಂದಿನಂತೆ ಸಾಮಾನ್ಯ ಸ್ಥಿತಿಗೆ ಮರಳಲಿದೆ.

ಪೆಟ್ರೋಲಿಯಂ ಸಚಿವಾಲಯದ ಪ್ರಕಾರ, ದೇಶೀಯ ಎಲ್‌ಪಿಜಿ ಉತ್ಪಾದನೆ ಹೆಚ್ಚಿರುವುದು ಹಾಗೂ ಆಮದು ಎಲ್‌ಪಿಜಿ ಸರಕುಗಳ ಲಭ್ಯತೆ ಸುಧಾರಿಸಿರುವುದರಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಇದರೊಂದಿಗೆ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆಯ ಮೇಲಿದ್ದ ವಲಯವಾರು ನಿರ್ಬಂಧಗಳನ್ನು ಸಂಪೂರ್ಣವಾಗಿ ತೆಗೆದುಹಾಕಲಾಗಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಸಂದರ್ಭದಲ್ಲಿ ದೇಶೀಯ ಅಡುಗೆ ಅನಿಲದ ಲಭ್ಯತೆಯನ್ನು ಕಾಪಾಡಲು ಸರ್ಕಾರ ವಾಣಿಜ್ಯ ಮತ್ತು ಕೈಗಾರಿಕಾ ಬಳಕೆಯ ಎಲ್‌ಪಿಜಿ ಪೂರೈಕೆಗೆ ಮಿತಿಗಳನ್ನು ವಿಧಿಸಿತ್ತು. ಜೊತೆಗೆ ಬಲ್ಕ್ ಎಲ್‌ಪಿಜಿ ಪೂರೈಕೆಯನ್ನೂ ಸ್ಥಗಿತಗೊಳಿಸಲಾಗಿತ್ತು. ಈಗ ಪರಿಸ್ಥಿತಿ ಸುಧಾರಿಸಿರುವುದರಿಂದ ಸಗಟು ಎಲ್‌ಪಿಜಿ ಪೂರೈಕೆಯನ್ನು ಹಿಂದಿನ ಮಟ್ಟದ ಶೇ.50ರಷ್ಟು ಪುನರಾರಂಭಿಸಲು ಸರ್ಕಾರ ಅನುಮತಿ ನೀಡಿದೆ.

ಸರ್ಕಾರದ ಈ ಕ್ರಮದಿಂದ ಹೋಟೆಲ್, ರೆಸ್ಟೋರೆಂಟ್, ಆಹಾರ ಸಂಸ್ಕರಣಾ ಘಟಕಗಳು ಹಾಗೂ ಇತರ ವಾಣಿಜ್ಯ ಸಂಸ್ಥೆಗಳಿಗೆ ಹೆಚ್ಚಿನ ಅನುಕೂಲವಾಗಲಿದ್ದು, ಎಲ್‌ಪಿಜಿ ಪೂರೈಕೆ ಸರಪಳಿ ಮತ್ತೆ ಸಹಜ ಸ್ಥಿತಿಗೆ ಬರಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## "ದೆಹಲಿವಾರ್ತೆ"

### ದಿನಪತ್ರಿಕೆಗೆ 24ರ ಸಂಭ್ರಮ

ಹೊರನಾಡು ಕನ್ನಡ ಪತ್ರಿಕೆ ಎಂಬ ಹೆಮ್ಮೆಗೆ ಪಾತ್ರವಾಗಿರುವ, ರಾಷ್ಟ್ರ ರಾಜಧಾನಿ ನವದೆಹಲಿಯಿಂದ ಪ್ರಕಟವಾಗುವ ಏಕಮಾತ್ರ ಕನ್ನಡ ದಿನಪತ್ರಿಕೆ "ದೆಹಲಿವಾರ್ತೆ", ಓದುಗರ, ಅಭಿಮಾನಿಗಳ ಮತ್ತು ಹಿತೈಷಿಗಳ ಸಹಕಾರದಿಂದ 23 ವರ್ಷಗಳನ್ನು ಪೂರ್ಣಗೊಳಿಸಿ 24ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿರುವುದು ನವದೆಹಲಿಯ ಕನ್ನಡ ಮಾಧ್ಯಮದ ಒಂದು ದಾಖಲೆ. 2003ರಲ್ಲಿ ರಾಷ್ಟ್ರ ರಾಜಧಾನಿ ನವದೆಹಲಿಯಿಂದ ಪ್ರಾರಂಭವಾದ 'ದೆಹಲಿವಾರ್ತೆ' ಕನ್ನಡ ಪತ್ರಿಕೆ ಕರ್ನಾಟಕ ಮತ್ತು ರಾಷ್ಟ್ರ ರಾಜಧಾನಿಗೆ ಕನ್ನಡಿಗರ ನಡುವಿನ ಕೊಂಡಿಯಾಗಿ ಓದುಗರೊಂದಿಗೆ ಬೆಸೆದುಕೊಂಡಿದೆ. ಏಕೆಂದರೆ ರಾಷ್ಟ್ರ ರಾಜಧಾನಿ ನವದೆಹಲಿ ಇರುವುದು ಕನ್ನಡೇತರ ದೂರ ಪ್ರದೇಶದಲ್ಲಿ. ಇಂಥಲ್ಲಿ ಕನ್ನಡ ಪತ್ರಿಕೆಯೊಂದು 23 ವರ್ಷಗಳ ವರ್ಷಗಳವರೆಗೂ ಯಶಸ್ವಿಯಾಗಿ ನಡೆಸಿಕೊಂಡು 24ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿರುವುದು ಕನ್ನಡಿಗರ ಪ್ರೀತಿ, ವಿಶ್ವಾಸ ಅಭಿಮಾನಗಳ ಹೆಮ್ಮೆಯೇ ಕಾರಣ.

ದೆಹಲಿಯಲ್ಲೂ ಸಾಕಷ್ಟು ಕನ್ನಡಿಗರಿದ್ದಾರೆ. ಅವರಿಗೆ ಕರ್ನಾಟಕದ ಸುದ್ದಿಗಳನ್ನು ನೀಡುವುದರೊಂದಿಗೆ ಅಲ್ಲಿನ ಕನ್ನಡಿಗರ ಒಡನಾಡಿಯಾಗಿ. ದೆಹಲಿ ಕನ್ನಡಿಗರ ನಿರಂತರ ಚಟುವಟಿಕೆಗಳನ್ನು ಬಿತ್ತರಿಸುವುದರೊಂದಿಗೆ, ಕರ್ನಾಟಕದ ಅನೇಕ ಸಮಸ್ಯೆಗಳನ್ನು ದೆಹಲಿ ದೊರೆಗಳಿಗೆ ತಲುಪಿಸುವುದೂ ಪತ್ರಿಕೆಯ ಒಂದು ಉದ್ದೇಶವಾದರೆ, ದೆಹಲಿಯಲ್ಲಿ ನಡೆಯುವ ಮಹತ್ತರ ರಾಜಕೀಯ ವಿದ್ಯಮಾನಗಳು, ಅಭಿವೃದ್ಧಿಪರ ಬೆಳವಣಿಗೆಗಳು, ರಾಜಧಾನಿಯ ಮಹತ್ವದ ನಿರ್ಧಾರಗಳನ್ನು ತಕ್ಷಣವೇ ಕರ್ನಾಟಕದ ಜನರಿಗೆ ತಲುಪಿಸುವಲ್ಲಿ 'ದೆಹಲಿವಾರ್ತೆ' ಕನ್ನಡ ದಿನಪತ್ರಿಕೆ ಮಹತ್ವದ ಪಾತ್ರ ವಹಿಸುತ್ತಾ ಬಂದಿದೆ. ಮತ್ತು ಈ ದಿಸೆಯಲ್ಲಿ ಅತ್ಯಂತ ಯಶಸ್ಸಿನ ದಿಟ್ಟ ಹೆಜ್ಜೆಯನ್ನಿರಿಸಿ ಮೆಚ್ಚುಗೆಗೆ ಪಾತ್ರವಾಗಿದೆ. ಪತ್ರಿಕೆಯ ಈ ಪ್ರಾಮಾಣಿಕ ಕಾರ್ಯವನ್ನು ಓದುಗರು ಮತ್ತು ಅಭಿಮಾನಿಗಳು ಮೆಚ್ಚುಕೊಂಡು 23 ವರ್ಷಗಳವರೆಗೂ ಪತ್ರಿಕೆಯನ್ನು ಪೋಷಿಸಿಕೊಂಡು ಬಂದಿದ್ದಾರೆ. ಓದುಗರ ಅಭಿಮಾನ ಮತ್ತು ಹಿತೈಷಿಗಳು ಪತ್ರಿಕೆಯನ್ನು ಬೆಳೆಸಿಕೊಂಡು ಬಂದಿರುವುದಕ್ಕೆ ಈ ಸಂದರ್ಭದಲ್ಲಿ ಪತ್ರಿಕೆಯು ಅನಂತ ಕೃತಜ್ಞತೆಗಳನ್ನು ತಿಳಿಸಬಯಸುತ್ತದೆ.


'ದೆಹಲಿವಾರ್ತೆ' ಕನ್ನಡ ದಿನಪತ್ರಿಕೆ ಯಾವುದೇ ರಾಜಕೀಯ ಪಕ್ಷ ಮತ್ತು ಕೋಮುಗಳೊಂದಿಗೆ ಗುರುತಿಸಿಕೊಳ್ಳದೇ, ಎಲ್ಲರೂ ನಮ್ಮವರು, ಎಲ್ಲರೂ ಕನ್ನಡಿಗರು, ಕನ್ನಡ ಮತ್ತು ಕನ್ನಡಿಗರ ಅಸ್ಮಿತೆಯಾಗಿ, ಕನ್ನಡಿಗರ ಸೇವೆಯನ್ನೇ ಪ್ರಮುಖ ಧ್ಯೇಯವಾಗಿಟ್ಟುಕೊಂಡು ಎಲ್ಲರ ಮೆಚ್ಚುಗೆಗೆ ಪಾತ್ರವಾಗುವ ರೀತಿಯಲ್ಲಿ ಯಶಸ್ವಿಯಾಗಿ ನಡೆದುಕೊಂಡು ಬಂದಿರುವುದು ಈ 23 ವರ್ಷಗಳ ಪತ್ರಿಕೆ ನಡೆದು ಬಂದಿರುವ ಇತಿಹಾಸವೇ ಸಾಕ್ಷಿ.

'ದೆಹಲಿವಾರ್ತೆ' ಕಳೆದ 23 ವರ್ಷಗಳಲ್ಲಿ ಓದುಗರ ಅಭಿಲಾಷೆಗೆ ಅನುಗುಣವಾಗಿ ಪತ್ರಿಕೆಯ ಪುಟವಿನ್ಯಾಸ ಮತ್ತು ಆಕರ್ಷಕ ಮುದ್ರಣದೊಂದಿಗೆ ಪ್ರಕಟಿಸುವ ಮೂಲಕ ಅನೇಕ ಬದಲಾವಣೆಗಳನ್ನೂ ತಂದಿದೆ. ತ್ವರಿತ ಗತಿಯಲ್ಲಿ ರಾಷ್ಟ್ರ, ರಾಜ್ಯ ಮತ್ತು ವಿದೇಶಿ ಸುದ್ದಿಗಳೊಂದಿಗೆ, ವಿಶೇಷ ಲೇಖನಗಳು, ಅಂಕಣಗಳು, ಲೇಖನಗಳು, ರಾಜಕೀಯ ವಿಶ್ಲೇಷಣೆಗಳು, ಕ್ರೀಡೆ ಮತ್ತು ಸಿನಿಮಾ ರಂಜನೆ ಸೇರಿದಂತೆ ಓದುಗರಿಗೆ ಎಲ್ಲ ವೈವಿಧ್ಯಗಳನ್ನು ನೀಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಾ ಬಂದಿದೆ. ಓದುಗರು ಪತ್ರಿಕೆಯ ಈ ಸಾಹಸವನ್ನು ಮೆಚ್ಚಿಕೊಂಡು ಪ್ರೋತ್ಸಾಹಿಸುತ್ತಾ ಬಂದಿರುವುದೂ ಇದೆ.

ರಾಷ್ಟ್ರ ರಾಜಧಾನಿ ದೆಹಲಿಗೆ ಕರ್ನಾಟಕದ ಯಾರೇ ಬಂದರೂ ಅವರಿಗೆ ಮೊದಲು ಕರ್ನಾಟಕದ ಸುದ್ದಿ ನೀಡುವುದು 'ದೆಹಲಿವಾರ್ತೆ' ಪತ್ರಿಕೆ ಮಾತ್ರ. ಹೀಗಾಗಿ ದೆಹಲಿ ಮಾತ್ರವಲ್ಲದೇ ಕರ್ನಾಟಕದವರಿಗೂ 'ದೆಹಲಿವಾರ್ತೆ' ಅಚ್ಚುಮೆಚ್ಚಿನ ಪತ್ರಿಕೆ ಎನಿಸಿಕೊಂಡಿದೆ. 'ದೆಹಲಿವಾರ್ತೆ' ಎಲ್ಲರೂ ಮೆಚ್ಚಿಕೊಳ್ಳುವ ಸಾಹಸ ನಿರಂತರ ಮಾಡಿಕೊಂಡು ಬಂದಿದೆ. ಕಳೆದ ಎರಡು ದಶಕಗಳಿಗೂ ಹೆಚ್ಚಿನ ಕಾಲದಿಂದ ದೂರದ ಕನ್ನಡೇತರರೇ ಹೆಚ್ಚಾಗಿರುವ ರಾಷ್ಟ್ರ ರಾಜಧಾನಿಯಲ್ಲಿ ಕನ್ನಡದ ಅಸ್ಮಿತೆಯನ್ನು ಉಳಿಸಿಕೊಂಡು ಬಂದ ಶ್ರೇಯಸ್ಸು 'ದೆಹಲಿವಾರ್ತೆ' ಪತ್ರಿಕೆಯದು. ಇದೆಲ್ಲಕ್ಕೂ ನಮ್ಮ ಓದುಗ ಅಭಿಮಾನ ಮತ್ತು ಪ್ರೀತಿಯೇ ಕಾರಣ ಎಂಬುದು ಅತ್ಯಂತ ಸಂತಸದ ಸಂಗತಿಯಾಗಿದೆ.

ಒಂದು ಪತ್ರಿಕೆ ದೂರದ ಕನ್ನಡೇತರ ಪ್ರದೇಶದಲ್ಲಿ 23 ವರ್ಷಗಳನ್ನು ಕಳೆಯುವುದೆಂದರೆ ಒಂದು ಅದ್ಭುತ ಪವಾಡವೇ ಸರಿ. 24ರ ಹರೆಯದ 'ದೆಹಲಿವಾರ್ತೆ'ಗೆ ಈಗ ಯವ್ವನದ ಕಾಲ. ಈ ಸಂದರ್ಭದಲ್ಲಿ ಪತ್ರಿಕೆ ಇನ್ನಷ್ಟು ಪ್ರಬುದ್ಧವಾಗಿ, ಸಮೃದ್ಧವಾಗಿ ಓದುಗರ, ಅಭಿಮಾನಿಗಳ ಮತ್ತು ಹಿತೈಷಿಗಳ ಅಭಿಲಾಷೆಗೆ ಅನುಗುಣವಾಗಿ ಹೊರತರುವುದು ನಮ್ಮ ಆಶಯ. ಅದಕ್ಕೆ ಎಲ್ಲ ಹಿತೈಷಿಗಳು, ಓದುಗರಿಂದ ಸಲಹೆ–ಸೂಚನೆಗಳಿಗೆ ಮುಕ್ತ ಅವಕಾಶವಿದೆ. ನಾವು ಹೃತ್ಪೂರ್ವಕವಾಗಿ ನಿಮ್ಮ ಸಲಹೆ–ಸೂಚನೆಗಳನ್ನು ಸ್ವಾಗತಿಸುತ್ತೇವೆ. ನಮ್ಮ ಪತ್ರಿಕೆಯು ಮುಂಬರುವ ದಿನಗಳಲ್ಲಿ ಯಾವ ರೀತಿ ಬೆಳೆಯಬೇಕೆಂದು ನಿರ್ಧರಿಸುವವರು ಓದುಗರು. ಆದ್ದರಿಂದ ನಿಮ್ಮ ಅಭಿಲಾಷೆಯಂತೆ ಓದುಗರ ಮೆಚ್ಚಿನ ಪತ್ರಿಕೆಯಾಗಿ ಹೊರತರುವ ಹೊಣೆಗಾರಿಕೆ ನಮ್ಮದಾಗಿದೆ. ಹಿಂದಿನಂತೆಯೇ ಮುಂದೆಯೂ ಕೂಡ ಪತ್ರಿಕೆಯನ್ನು ಬೆಂಬಲಿಸಿ, ಪೋಷಿಸಿ ಬೆಳೆಸಿಕೊಂಡು ಹೋಗುವುದು ಓದುಗರ ಪ್ರೀತಿಯೇ ಎಂಬುದು ನಮ್ಮ ಅಚಲ ನಂಬಿಕೆ.

'ದೆಹಲಿವಾರ್ತೆ' ನಿಮ್ಮ ಪತ್ರಿಕೆ. ಓದುಗರಾದ ನಿಮ್ಮೆಲ್ಲರ ಸಹಕಾರದಿಂದ 23 ವರ್ಷಗಳವರೆಗೆ ನಡೆದುಕೊಂಡು ಬಂದಿದೆ. ಪತ್ರಿಕೆಯ 24ನೇ ವರ್ಷದ ಈ ಸಂತಸಕ್ಕೆ ಓದುಗರ ಸಂಪೂರ್ಣ ಸಹಕಾರ ಮತ್ತು ಪ್ರೀತಿ–ಅಭಿಮಾನಗಳೇ ಕಾರಣ. ಈ ಸಂದರ್ಭದಲ್ಲಿ ಎಲ್ಲ ಓದುಗ ಅಭಿಮಾನಿ ಗಳಿಗೆ, ಹಿತೈಷಿಗಳಿಗೆ ಮತ್ತು ಪತ್ರಿಕೆಗೆ ಜಾಹಿರಾತುಗಳನ್ನು ನೀಡಿ ಬೆಂಬಲ ನೀಡಿ ಬೆಳೆಸಿದ ಕರ್ನಾಟಕ ಸರ್ಕಾರಕ್ಕೂ ಪತ್ರಿಕೆಯ ವತಿಯಿಂದ ಅನಂತ ಕೃತಜ್ಞತೆಗಳು. ಪತ್ರಿಕೆಯು ನಿಮ್ಮ ಪ್ರೀತಿ, ವಿಶ್ವಾಸವನ್ನು ನಿರಂತರವಾಗಿ ಇದೇ ರೀತಿ ಇರಲೆಂದು ಬಯಸುತ್ತದೆ.



**–ಕೆ.ಆರ್.ರೇಣು,**
ಪ್ರಧಾನ ಸಂಪಾದಕರು.



**ನಿತ್ಯ ಪಂಚಾಂಗ 27.06.2026 ಶನಿವಾರ**

ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ – ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಶುದ್ಧ, ತ್ರಯೋದಶಿ, ಅನುರಾಧ ನಕ್ಷತ್ರ, 4ನೇ ಶನಿವಾರ, ಶನಿ ಪ್ರದೋಷ, ಕೆಂಪೇಗೌಡ ಜಯಂತಿ, ಬೆಂಗಳೂರು ಹೊಸಕೆರೆಹಳ್ಳಿ ದುರ್ಗಾದೇವಿ ವೆಂಕಟೇಶ್ವರ ಉತ್ಸವ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಜಿ.ಎಸ್.ಟಿ ಸಂಗ್ರಹದಲ್ಲಿ ದೇಶದಲ್ಲಿ ಅಗ್ರಸ್ಥಾನಕ್ಕೇರುವ ಮಾರ್ಗ ಶೋಧಿಸಿ: ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ಡಿ.ಕೆ.ಶಿವಕುಮಾರ್ ಆದೇಶ

**ಬೆಂಗಳೂರು, ಜೂ.26:** ಜಿ.ಎಸ್.ಟಿ ಸಂಗ್ರಹದಲ್ಲಿ ರಾಜ್ಯ ದೇಶದಲ್ಲೇ ಎರಡನೇ ಸ್ಥಾನದಲ್ಲಿದ್ದು, ಮೊದಲ ಸ್ಥಾನಕ್ಕೆ ಬರುವ ಮಾರ್ಗಗಳನ್ನು ಶೋಧಿಸಿ ಎಂದು ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿ2ಗಳಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆದೇಶಿಸಿದ್ದಾರೆ.

ಮೇ 2026ರ ವರೆಗೆ ಜಿಎಸ್‌ಟಿ ಸಂಗ್ರಹದಲ್ಲಿ ತೆಲಂಗಾಣ ಶೇ.10 ರಷ್ಟು ಪ್ರಗತಿ ಸಾಧಿಸಿದ್ದರೆ ಕರ್ನಾಟಕ ಶೇ.9 ರಷ್ಟು ಬೆಳವಣಿಗೆ ಕಂಡಿದೆ. ಮಹಾರಾಷ್ಟ್ರ ಶೇ.5, ಗುಜರಾತ್ ಶೇ.5, ತಮಿಳುನಾಡು ಶೇ.7, ಉತ್ತರಪ್ರದೇಶ ಶೇ.8ರಷ್ಟು ಜಿಎಸ್‌ಟಿ ಪ್ರಗತಿ ಸಾಧಿಸಿವೆ ಎಂದರು.

ವಾಣಿಜ್ಯ ತೆರಿಗೆ ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ವಾಣಿಜ್ಯ ತೆರಿಗೆ ಅಧಿಕಾರಿಗಳು ಸರ್ಕಾರದ ಶಕ್ತಿ. ನೀವು ಶಕ್ತಿ ಕೊಡದಿದ್ದರೆ ಸರ್ಕಾರ ನಡೆಸುವುದು ಕಷ್ಟ. ವಾಣಿಜ್ಯ ತೆರಿಗೆ ಇಲಾಖೆಗೆ ಪ್ರಸ್ತುತ ಹಣಕಾಸು ವರ್ಷಕ್ಕೆ ನೀಡಿರುವ ತೆರಿಗೆ ಸಂಗ್ರಹದ ಗುರಿಯನ್ನು ಮೀರಿ ಸಾಧನೆ ತೋರಿಸುತ್ತದೆ ಎಂಬ ವಿಶ್ವಾಸವಿದೆ. ಆರ್ಥಿಕ ಇಲಾಖೆ ಅಧಿಕಾರಿಗಳು, ಆರ್ಥಿಕ ಸಲಹೆಗಾರ ಎಲ್. ಕೆ. ಅತೀಕ್ ಹಾಗೂ ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಇಲಾಖೆಯ ಕಾರ್ಯಕ್ಷಮತೆ ಹೆಚ್ಚಿಸಲು ಹಲವು ಸಲಹೆಗಳನ್ನು ನೀಡಿದ್ದಾರೆ. ಅವುಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಜವಾಬ್ದಾರಿ ಈಗ ನಿಮ್ಮೆಲ್ಲರ ಮೇಲಿದೆ. ಅಧಿಕಾರಿಗಳ ಮೇಲೆ ನನಗೆ ಪೂರ್ತಿ ಭರವಸೆ ಇದೆ. ನೀವೆಲ್ಲಾ ನನ್ನ ನಿರೀಕ್ಷೆ ಈಡೇರಿಸಲು ಶ್ರಮಿಸುತ್ತೀರಿ ಎನ್ನುವ ವಿಶ್ವಾಸವೂ ಇದೆ ಎಂದರು.

ಯಾವುದೇ ಸರಕು ಸಾಗಣೆ ವಾಹನವು ಅಗತ್ಯ ದಾಖಲೆಗಳಿಲ್ಲದೆ ಚೆಕ್‌ಪೋಸ್ಟ್ ಅಥವಾ ರಾಜ್ಯದ ಗಡಿಯನ್ನು ದಾಟಬಾರದು. ತೆರಿಗೆ ಸೋರಿಕೆಗೆ ಯಾವುದೇ ಅವಕಾಶ ಇರಬಾರದು. ಇದರಲ್ಲಿ ಯಾವುದೇ ರೀತಿಯ ರಾಜಿ ಅಥವಾ ನಿರ್ಲಕ್ಷ್ಯಕ್ಕೆ ಅವಕಾಶವಿಲ್ಲ. ರಾಜ್ಯದ ಎಲ್ಲ ವಲಯಗಳಿಂದಲೂ ನನಗೆ



ನನ್ನ ಸಾರ್ವಜನಿಕ ಜೀವನಕ್ಕೆ ಸುಮಾರು ಮೂವತ್ತೆಂಟು ವರ್ಷಗಳ ಅನುಭವವಿದೆ. ಈ ಅವಧಿಯಲ್ಲಿ ಹಲವು ಪ್ರಮುಖ ಖಾತೆಗಳನ್ನು ನಿರ್ವಹಿಸಿದ್ದೇನೆ. ಈಗ ಹಣಕಾಸು ಮತ್ತು ವಾಣಿಜ್ಯ ತೆರಿಗೆ ಇಲಾಖೆಯ ಕಾರ್ಯವೈಖರಿಯನ್ನು ಇನ್ನಷ್ಟು ಆಳವಾಗಿ ಅರ್ಥಮಾಡಿಕೊಳ್ಳುವ ಪ್ರಯತ್ನ ಮಾಡುತ್ತಿದ್ದೇನೆ. ಕೇಳುವುದಕ್ಕೂ, ಕಲಿಯುವುದಕ್ಕೂ ನಾನು ಸದಾ ಸಿದ್ಧನಿದ್ದೇನೆ. ನಿರಂತರ ಕಲಿಕೆಯೇ ಉತ್ತಮ ಆಡಳಿತದ ಮೂಲ ಎಂದು ನಾನು ನಂಬುತ್ತೇನೆ. ಆದ್ದರಿಂದ ಮುಂದಿನ ಸಭೆಯ ವೇಳೆಗೆ ಇಂದಿನ ವರದಿಗಿಂತ ಉತ್ತಮವಾದ ಕಾರ್ಯಕ್ಷಮತೆಯ ವರದಿಯನ್ನು ನಿಮ್ಮಿಂದ ನಿರೀಕ್ಷಿಸುತ್ತೇನೆ.

ನಿರಂತರ ಮಾಹಿತಿ ಬರುತ್ತದೆ. ಚಿಕ್ಕಪೇಟೆಯಿಂದ ಗಾಂಧಿನಗರದವರೆಗೆ, ಗಡಿ ಜಿಲ್ಲೆಗಳಿಂದ ರಾಜ್ಯದ ಎಲ್ಲ ಭಾಗಗಳಲ್ಲೂ ನನ್ನದೇ ಆದ ಸಂಪರ್ಕಗಳಿವೆ. ಅಧಿಕಾರಿಗಳ ಕಾರ್ಯನಿರ್ವಹಣೆಯಲ್ಲಿ ಯಾವುದೇ ಲೋಪ ಅಥವಾ ನಿರ್ಲಕ್ಷ್ಯ ನಡೆದರೂ ಅದು ನನ್ನ ಗಮನಕ್ಕೆ ಬರುತ್ತದೆ. ಆದ್ದರಿಂದ ನನಗೆ ಬರುತ್ತಿರುವ ಮಾಹಿತಿಯೂ ನಿಮ್ಮ ಕಾರ್ಯಕ್ಷಮತೆಯ ವರದಿಯೂ ಒಂದಕ್ಕೊಂದು ಹೊಂದಿಕೆಯಾಗಬೇಕು ಎಂದರು.

ಪಕ್ಕದ ರಾಜ್ಯಗಳ ವಾಣಿಜ್ಯ ತೆರಿಗೆ ಇಲಾಖೆ ಮತ್ತು ಜಾರಿ ಸಂಸ್ಥೆಗಳೊಂದಿಗೆ ಉತ್ತಮ ಸಮನ್ವಯ ಸಾಧಿಸಿ. ಮಾಹಿತಿ ಹಂಚಿಕೆ ಮತ್ತು ಜಂಟಿ ಕಾರ್ಯಾಚರಣೆಗಳ ಮೂಲಕ ತೆರಿಗೆ ಸೋರಿಕೆಯನ್ನು ಪರಿಣಾಮಕಾರಿಯಾಗಿ ತಡೆಯಬೇಕು. ಇಂದು ನಮ್ಮ ಬಳಿ ಸುಮಾರು 12 ಲಕ್ಷ ತೆರಿಗೆದಾರರ ಮಾಹಿತಿಯಿದೆ. ತಂತ್ರಜ್ಞಾನ ಮತ್ತು ದತ್ತಾಂಶ ವಿಶ್ಲೇಷಣೆ ಮೂಲಕ ಅವರನ್ನು 360 ಡಿಗ್ರಿ ದೃಷ್ಟಿಕೋನದಲ್ಲಿ ವಿಶ್ಲೇಷಿಸುವ ಸಾಮರ್ಥ್ಯ ನಿಮಗಿದೆ. ಈ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಂಡರೆ ನಿಮಗೆ ನೀಡಿರುವ ಗುರಿಯನ್ನು ಸಾಧಿಸುವುದಷ್ಟೇ ಅಲ್ಲ, ಅದನ್ನು ಮೀರಿಸುವ ಸಾಮರ್ಥ್ಯವೂ ನಿಮ್ಮಿಂದ ಸಾಧ್ಯವಿದೆ ಎಂದು ಮುಖ್ಯಮಂತ್ರಿ ಹೇಳಿದರು.

ನಮ್ಮ ಉದ್ದೇಶ ಯಾರಿಗೂ ಅನಗತ್ಯ ತೊಂದರೆ ನೀಡುವುದಲ್ಲ. ಪ್ರಾಮಾಣಿಕ ತೆರಿಗೆದಾರರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ತೆರಿಗೆ ಪಾವತಿಸುವ ಪ್ರತಿಯೊಬ್ಬ ನಾಗರಿಕನನ್ನು ಘನತೆ ಮತ್ತು ಗೌರವದಿಂದ ನಡೆಸಿಕೊಳ್ಳಬೇಕು. ಜೊತೆಗೆ ಇಲಾಖೆಯ ಸಿಬ್ಬಂದಿಯನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಬುದ್ಧಿವಂತಿಕೆಯಿಂದ ಕಾರ್ಯನಿರ್ವಹಿಸಿದರೆ ಗುರಿ ಮೀರಿದ ಸಾಧನೆ ಮಾಡಲು ಸಾಧ್ಯ.

ಆದರೆ ತೆರಿಗೆ ವಂಚನೆಗೆ ಮಾತ್ರ ಯಾವುದೇ ಅವಕಾಶ ಇರಬಾರದು. ತೆರಿಗೆ ಸೋರಿಕೆಯನ್ನು ಸಂಪೂರ್ಣವಾಗಿ ತಡೆಯುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು. ಮುಂದಿನ ಪರಿಶೀಲನಾ ಸಭೆ ನಡೆಯುವ ವೇಳೆಗೆ ಇಂದು ನಾನು ನೀಡಿರುವ ಪ್ರತಿಯೊಂದು ಸೂಚನೆಯೂ ಜಾರಿಯಾಗಿರಬೇಕು. ಒಂದೇ ಒಂದು ಸರಕು ಸಾಗಣೆ ವಾಹನ ಕೂಡ ಸೂಕ್ತ ಲೆಕ್ಕಪತ್ರ, ದಾಖಲೆ ಇಲ್ಲದೆ ಚೆಕ್‌ಪೋಸ್ಟ್ ಅಥವಾ ರಾಜ್ಯದ ಗಡಿ ದಾಟಬಾರದು. ಇದು ನಮ್ಮ ಇಲಾಖೆಯ ಕಾರ್ಯವೈಖರಿಯ ಮೂಲ ತತ್ವವಾಗಬೇಕು ಎಂದರು.

ಎಲ್ಲಾ ಜಂಟಿ ಆಯುಕ್ತರುಗಳು ಆಯಾ ವಿಭಾಗಗಳಿಗೆ ಹಂಚಿಕೆ ಮಾಡಲಾದ ತೆರಿಗೆ ಸಂಗ್ರಹಣಾ ಗುರಿಯನ್ನು ಸಾಧಿಸಿ ತೋರಿಸಿ. ತೆರಿಗೆ ರಿಟರ್ನ್‌ಗಳನ್ನು ಸಮಯಕ್ಕೆ ಸರಿಯಾಗಿ ಸಲ್ಲಿಸುವುದು ಹಾಗೂ ತೆರಿಗೆ ರಿಟರ್ನ್ ಸಲ್ಲಿಸದಿರುವುದನ್ನು ಗುರುತಿಸಿ ನಿಗದಿತ ಅವಧಿಯ ಒಳಗೆ ರಿಟರ್ನ್‌ಗಳನ್ನು ಸಲ್ಲಿಸುವಂತೆ ಮಾಡಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು. ನಿಮ್ಮ ಗುರಿ ಮುಟ್ಟಿ. ನಿಮಗೆ ಈಗ ಬರುತ್ತಿರುವ ತೆರಿಗೆಯ ಎರಡರಷ್ಟು ಸಂಗ್ರಹ ಮಾಡುವ ಸಾಮರ್ಥ್ಯ ಇದೆ. ಆದರೆ ಕಾನೂನು ಮೀರಿ, ಶೋಷಣೆ ಮಾಡಿ ಎಂದು ಹೇಳುವುದಿಲ್ಲ ಎಂದರು.

ಪ್ರಾಮಾಣಿಕ ತೆರಿಗೆದಾರರಿಗೆ ಯಾವುದೇ ರೀತಿಯ ತೊಂದರೆ ಆಗಬಾರದು. ಅವರನ್ನು ಸುಲಿಗೆ ಮಾಡಬಾರದು. ನಿಮ್ಮ ತೊಂದರೆಗಳು ಇದ್ದರೆ ಹೇಳಿ, ಅವು ನೈಜ ಇದ್ದರೆ ನಿವಾರಿಸೋಣ. ಪ್ರಾಮಾಣಿಕತೆ, ನಿಷ್ಠೆ, ಶ್ರಮಕ್ಕೆ ನನ್ನ ಬಳಿ ಗೌರವ, ಬೆಲೆ ಇದೆ. ಪ್ರಾಮಾಣಿಕತೆ ಇಲ್ಲದಿದ್ದರೆ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳುವೆ. ಎಲ್ಲಾ ಹಂತಗಳ ಅಧಿಕಾರಿಗಳು ತೆರಿಗೆದಾರರ ನೈಜ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಬೇಕು.

ಕರ್ನಾಟಕದ ಅಭಿವೃದ್ಧಿಗೆ ಅಗತ್ಯವಾದ ಸಂಪನ್ಮೂಲಗಳನ್ನು ಸಂಗ್ರಹಿಸುವ ಈ ಮಹತ್ವದ ಜವಾಬ್ದಾರಿಯನ್ನು ಎಲ್ಲರೂ ಸೇರಿ ಯಶಸ್ವಿಯಾಗಿ ನಿರ್ವಹಿಸೋಣ. ಹೈದರಾಬಾದ್ ಐಐಟಿ ಸಹಯೋಗದಲ್ಲಿ ಜಿ.ಎಸ್.ಟಿ ವಂಚನೆ ಮೇಲೆ ತೀವ್ರ ನಿಗಾ ಇಡಲಾಗಿದೆ. ಇದರಿಂದಾಗಿ ಹಲವು ರೀತಿಯ ಜಿಸ್ಟ್ ವಂಚನೆಗಳನ್ನು ಪತ್ತೆಹಚ್ಚಲಾಗಿದ್ದರೂ ಇದರಲ್ಲಿ ಸಂಪೂರ್ಣ ಪ್ರಗತಿ ಸಾಧಿಸಿ. ನಕಲಿ ರಶೀದಿ ಮತ್ತು ನಕಲಿ ಐಟಿಸಿಗಳು ದೊಡ್ಡ ಸವಾಲಾಗಿದೆ. ಈ ಸವಾಲನ್ನು ಸಮರ್ಥವಾಗಿ ನಿರ್ವಹಿಸುತ್ತಿದ್ದೇವೆ. ನಕಲಿ ಕಂಪನಿಗಳನ್ನು ಪತ್ತೆ ಹಚ್ಚಿ 166 ಕೋಟಿ ಸಂಗ್ರಹಿಸಿದ್ದೇವೆ. ನಕಲಿ ಕಂಪನಿ ಸ್ಥಾಪಿಸಿದವರ ವಿರುದ್ಧ ಕಾನೂನು ಕ್ರಮ ಜರುಗಿಸುವ ಪ್ರಮಾಣ ಹೆಚ್ಚಲಿ.

ತೆರಿಗೆದಾರರಿಗೆ ಅಗತ್ಯ ಸಲಹೆ, ಮಾರ್ಗ ದರ್ಶನ ಮತ್ತು ಸಹಕಾರ ಒದಗಿಸುವುದರ ಜೊತೆಗೆ, ಅವರ ತೆರಿಗೆ ಸಂಬಂಧಿತ ಗೊಂದಲಗಳನ್ನು ಆನ್‌ಲೈನ್‌ನಲ್ಲಿಯೇ ತ್ವರಿತವಾಗಿ ಬಗೆಹರಿಸುವ ಸಮಗ್ರ ವ್ಯವಸ್ಥೆಯನ್ನು ನಾವು ರಾಜ್ಯದಲ್ಲಿ ರೂಪಿಸಿದ್ದೇವೆ. ತೆರಿಗೆದಾರರು ಕಚೇರಿಗಳಿಗೆ ಅಲೆದಾಡುವ ಅಗತ್ಯವಿಲ್ಲದಂತೆ, ಅವರಿಗೆ ಅಗತ್ಯ ಸಲಹೆ ಮತ್ತು ಸಹಕಾರವನ್ನು ನೀಡುವ ಹಾಗೂ ಅವರ ಎಲ್ಲಾ ತೆರಿಗೆ ಸಂಬಂಧಿತ ಗೊಂದಲಗಳನ್ನು ಆನ್‌ಲೈನ್ ನಲ್ಲಿಯೇ ಪರಿಹರಿಸುವ ನಾಗರಿಕ ಸ್ನೇಹಿ ವ್ಯವಸ್ಥೆಯನ್ನು ಜಾರಿಗೆ ತಂದಿದ್ದೇವೆ ಎಂದು ಸಿಎಂ ಹೇಳಿದರು.

ತೆರಿಗೆದಾರರಿಗೆ ಸಲಹೆ, ಸಹಕಾರ ಮತ್ತು ತೆರಿಗೆ ಸಂಬಂಧಿತ ಗೊಂದಲಗಳ ತ್ವರಿತ ಪರಿಹಾರವನ್ನು ಆನ್‌ಲೈನ್‌ನಲ್ಲಿಯೇ ಒದಗಿಸುವ ವ್ಯವಸ್ಥೆಯನ್ನು ರೂಪಿಸಿದ್ದೇವೆ. ಮೈಸೂರು ವಿಭಾಗದಲ್ಲಿ ಕಾರ್ಯಕ್ಷಮತೆ ಕುಸಿತ ಆಗಿರುವುದನ್ನು ಗಂಭೀರವಾಗಿ ಪರಿಗಣಿಸ ಲಾಗಿದೆ. ಕಾರ್ಯಕ್ಷಮತೆ ಕುಸಿದಿರುವುದಕ್ಕೆ ನೆಪ, ಕಾರಣಗಳನ್ನು ಕೊಡುವುದು ಸರಿಯಲ್ಲ. ಫಲಿತಾಂಶ ಮುಖ್ಯ. ಏನೇ ತಾಂತ್ರಿಕ ತೊಂದರೆಗಳಿದ್ದರೂ ಬಗೆಹರಿಸಿಕೊಂಡು ಉತ್ತಮ ಕಾರ್ಯಕ್ಷಮತೆ ನಿರೀಕ್ಷಿಸುತ್ತೇನೆ. ಬಾಕಿ ಇರುವ ಮೇಲ್ಮನವಿಗಳನ್ನು ತ್ವರಿತವಾಗಿ ನಿರ್ವಹಿಸದಿರುವುದನ್ನು ಸಹಿಸಲು ಸಾಧ್ಯವಿಲ್ಲ. ಮೇಲ್ಮನವಿಗಳ ವಿಲೇವಾರಿ ವಿಚಾರದಲ್ಲಿ ಹಿರಿಯ ಅಧಿಕಾರಿಗಳು ಹೆಚ್ಚಿನ ನಿಗಾ ಇಡಬೇಕು. ತೆರಿಗೆದಾರ ಸ್ನೇಹಿಯಾಗಿ ವ್ಯವಸ್ಥೆಯನ್ನು ಇನ್ನಷ್ಟು ಸರಳೀಕರಿಸುವ ಅಗತ್ಯವಿದೆ ಎಂದರು.

## ಅಬಕಾರಿಯಲ್ಲಿ ಭ್ರಷ್ಟಾಚಾರ: ಕಾಂಗ್ರೆಸ್ ಲೂಟಿಗೆ ಕೊನೆಯಿಲ್ಲ- ಪ್ರತಿಪಕ್ಷ ನಾಯಕ ಅಶೋಕ್ ಆರೋಪ



**ಬೆಂಗಳೂರು, ಜೂ.26:** ರಾಜ್ಯದ ಅಬಕಾರಿ ಇಲಾಖೆಯಲ್ಲಿ ನಡೆದಿರುವ ಭ್ರಷ್ಟಾಚಾರದ ಬಗ್ಗೆ ಸಿಬಿಐ ಇಲ್ಲವೇ ನ್ಯಾಯಾಂಗ ತನಿಖೆಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಹಾಕಿರುವ ಅವರು ಕಾಂಗ್ರೆಸ್ ಸರ್ಕಾರದ ಲೂಟಿಗೆ ಕೊನೆಯಿಲ್ಲ, ಹಗರಣಗಳ ಸರಮಾಲೆಗೆ ಅಂತ್ಯವಿಲ್ಲ ಎಂದು ಟೀಕಿಸಿದ್ದಾರೆ. ದಿನಕ್ಕೊಂದು ಹಗರಣ, ದಿನಕ್ಕೊಂದು ಲೂಟಿಯ ದರ್ಶನ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಪ್ರತಿಯೊಂದು ಇಲಾಖೆಯೂ ಭ್ರಷ್ಟಾಚಾರದ ಕೂಪವಾಗಿ ಮಾರ್ಪಟ್ಟಿದೆ. ಎಂದವರು ಕಿಡಿಕಾರಿದ್ದಾರೆ. ಪತ್ರಿಕಾ ವರದಿಯಲ್ಲಿ ಬಹಿರಂಗವಾಗಿರುವಂತೆ, ಅಬಕಾರಿ ಇಲಾಖೆಯಲ್ಲಿ ಲಂಚ ವಸೂಲಿಗಾಗಿಯೇ ಕಾಂಗ್ರೆಸ್ ಸರ್ಕಾರ "ಸಂಘಟಿತ ಸಿಂಡಿಕೇಟ್" ಒಂದನ್ನು ಮುನ್ನಡೆಸುತ್ತಿರುವುದನ್ನು ಜಾರಿ ನಿರ್ದೇಶನಾಲಯ ಎಳೆಎಳೆಯಾಗಿ ಬಯಲಿಗೆಳೆದಿದೆ. ಇದು ಕೇವಲ ಭ್ರಷ್ಟಾಚಾರವಲ್ಲ, ಸರ್ಕಾರದ ಪ್ರಾಯೋಜಿತ ಅಕ್ರಮದೊಂದಿಗೆ ನಡೆಯುತ್ತಿರುವ ವ್ಯವಸ್ಥಿತ ದರೋಡೆ ಎಂದು ಹೇಳಿದ್ದಾರೆ. ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಸ್ವಂತ ಭಾವ, ಬೆಳಗಾವಿ ವಿಭಾಗದ ಹೆಚ್ಚುವರಿ ಆಯುಕ್ತ ವೈ.ಡಿ. ಮಂಜುನಾಥ್ ಮತ್ತು ಅವರ ಸಹಚರರ ಕಡೆಯಿಂದಲೇ 13.3 ಕೋಟಿ ಕಪ್ಪು ಹಣ, ಚಿನ್ನ ಪತ್ತೆಯಾಗಿದೆ.

**ಲಂಚದ ಲೆಕ್ಕದ ಮಾಸ್ಟರ್:** ಯಾರಿಂದ ಎಷ್ಟು ಕಲೆಕ್ಷನ್ ಆಗಿದೆ ಆ ಹಣ ಯಾರಿಗೆಲ್ಲ ತಲುಪಿದೆ ಎಂಬ ಇಂಚಿಂಚು ಮಾಹಿತಿಯಿರುವ ರಹಸ್ಯ ಲಂಚದ ಪುಸ್ತಕ ಈಗ ಇ.ಡಿ ಅಧಿಕಾರಿಗಳ ಕೈಸೇರಿದೆ. ಅಧಿಕಾರಿಗಳೇ ತಮ್ಮ ಕುಟುಂಬಸ್ಥರು ಹಾಗೂ ಆಪ್ತರ ಹೆಸರಿನಲ್ಲಿ ಬೇನಾಮಿ ಲೈಸೆನ್ಸ್ ಪಡೆದು ಇಡೀ ವ್ಯವಸ್ಥೆಯನ್ನು ನುಂಗಿ ನೀರು ಕುಡಿಯುತ್ತಿದ್ದಾರೆ. ಎಂದು ದೂರಿದ್ದಾರೆ. ರಾಜ್ಯದ 14 ಪ್ರಮುಖ ಸ್ಥಳಗಳಲ್ಲಿ ಇ.ಡಿ ಅಧಿಕಾರಿಗಳು ಏಕಕಾಲಕ್ಕೆ ದಾಳಿ ನಡೆಸಿ ಈ ಬ್ರಹ್ಮಾಂಡ ಹಗರಣದ ಬಣ್ಣ ಬಯಲು ಮಾಡಿದ್ದಾರೆ ಎಂದು ಅಶೋಕ್ ಹೇಳಿದ್ದಾರೆ.

## ಟೌನ್‌ಶಿಪ್‌ಗೆ ರೈತರನ್ನು ಒಕ್ಕಲೆಬ್ಬಿಸಲ್ಲ: ಡಿಸಿಎಂ ಪರಂ

**ಬೆಂಗಳೂರು, ಜೂ.26:** ಬಿಡದಿ ಟೌನ್‌ಶಿಪ್ ವಿಚಾರ ದಲ್ಲಿ ರೈತರಿಗೆ ಅನುಕೂಲವಾಗಿ ಸಿಎಂ ಅವರ ನಿರ್ಧಾರ ಬದಲಾಗಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಉಪ ಮುಖ್ಯಮಂತ್ರಿ ಡಾ.ಜಿ ಪರಮೇಶ್ವರ್ ಅವರು, ನಾನು ಮೊದಲೇ ಹೇಳಿದಂತೆ ರೈತರನ್ನು ಒಕ್ಕಲೆಬ್ಬಿಸುವ ಕೆಲಸವನ್ನು ನಾವು ಮಾಡುವುದಿಲ್ಲ. ಒತ್ತಾಯಪೂರ್ವಕ ವಾಗಿ ರೈತರನ್ನು ತೆಗೆದು ಆಚೆ ಹಾಕಿ ನಾವು ಟೌನ್‌ಶಿಪ್ ಕಟ್ಟುವುದರಲ್ಲಿ ಯಾವುದೇ ಅರ್ಥವಿಲ್ಲ. ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಅವರ ಒಪ್ಪಿಗೆಯ ಮೂಲಕ ಅವರ ಜಮೀನನ್ನು ಪಡೆದು ಟೌನ್‌ಶಿಪ್ ಮಾಡಲು ಈಗಾಗಲೇ ಮುಖ್ಯಮಂತ್ರಿ ಗಳು ಸೂಚನೆಯನ್ನು ನೀಡಿದ್ದಾರೆ. ಅವರಿಗೆ ಒಂದು ವೇಳೆ ತಮಗೆ ಕೊಡುವಂತಹ ಪರಿಹಾರ ಸಾಕಾಗುತ್ತಿಲ್ಲ ಎಂದು ಅನಿಸಿದರೆ ಅದನ್ನು ಕೂಡ ಇನ್ನು ಮುಂದೆ ಹೆಚ್ಚು ಮಾಡುವ ಸಾಧ್ಯತೆ ಇದೆ. ಒಟ್ಟಾರೆ ಯಾವುದೇ ಗೊಂದಲ ಇಲ್ಲದೆ ಬಿಡದಿ ಟೌನ್‌ಶಿಪ್ ಮಾಡಬೇಕು ಎನ್ನುವುದು ನಮ್ಮ ಉದ್ದೇಶ ಎಂದರು.

ಎಐ ಹಬ್‌ಗಳಿಗೆ ಹೆಚ್ಚಿನ ನೀರಿನ ಅಗತ್ಯವಿರುವ ಹಿನ್ನೆಲೆ, ಬಿಡದಿ ಪ್ರದೇಶದ ನೀರಿನ ಲಭ್ಯತೆಯನ್ನು ಮುಂದಿನ 40 ವರ್ಷಗಳ ದೃಷ್ಟಿಯಿಂದ ಸರ್ಕಾರ ಬಳಸಿಕೊಳ್ಳುತ್ತಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಎ.ಐ ಸೆಂಟರ್ ಮಾಡುವುದಕ್ಕೆ ಯಾವುದೆಲ್ಲ ಮಾನದಂಡಗಳು ಇವೆ ಎಂಬುದರ ಸ್ಪಷ್ಟ ಮಾಹಿತಿ ಯಾರಿಗೂ ಗೊತ್ತಿಲ್ಲ. ಈಗ ಅದನ್ನು ನಾವು ಬೇರೆ ಬೇರೆ ಕಡೆ ಪತ್ತೆ ಮಾಡುತ್ತಿದ್ದೇವೆ. ಇದು ಎಐ ಹಬ್‌ಗಾಗಿ ಮಾಡುತ್ತಿರುವಂತಹದಲ್ಲ ಎಂದರು. ಬೆಂಗಳೂರಿನ ಮೇಲೆ ಸಂಚಾರದಟ್ಟಣೆ ಸೇರಿದಂತೆ ಅನೇಕ ಒತ್ತಡವಿದೆ. ನೈಸ್ ಪ್ರಾಜೆಕ್ಟ್ ಮಾಡಿದ ಸಂದರ್ಭದಲ್ಲಿ 7 ಟೌನ್‌ಶಿಪ್ ಮಾಡಬೇಕು ಎಂದು ಪ್ರಸ್ತಾವನೆ ಬಂದಿದ್ದವು ಎಂದರು.

## ರಾಮಮಂದಿರ ದೇಣಿಗೆ ಅವ್ಯವಹಾರ ಕುರಿತು ಹರಿಪ್ರಸಾದ್ ಅಸಂಬದ್ಧ ಹೇಳಿಕೆ: ಪ್ರಲ್ಹಾದ್ ಜೋಶಿ ಕಿಡಿ

**ಹುಬ್ಬಳ್ಳಿ, ಜೂ.26:** ರಾಮ ಮಂದಿರದ ದೇಣಿಗೆ ಅವ್ಯವಹಾರದ ವಿಚಾರವಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರನ್ನು ಮೊಹಮ್ಮದ್ ಘಜ್ನಿಗೆ ಹೋಲಿಸಿ ಹೇಳಿಕೆ ನೀಡಿದ್ದ ಕಾಂಗ್ರೆಸ್ ನಾಯಕ ಬಿ.ಕೆ. ಹರಿಪ್ರಸಾದ್ ಅವರಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿರುಗೇಟು ನೀಡಿದ್ದಾರೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿ.ಕೆ. ಹರಿಪ್ರಸಾದ್ ಅವರಿಗೆ ಸಾರ್ವಜನಿಕ ಬದುಕಿನ ಕನಿಷ್ಠ ನೈತಿಕತೆ ಮತ್ತು ಶಿಷ್ಟಾಚಾರ ಇಲ್ಲ. ಕಾಂಗ್ರೆಸ್ ಪಕ್ಷದ ನಾಯಕರಿಗೆ ಯಾವುದೇ ಮೂಲಭೂತ ನೈತಿಕತೆ ಉಳಿದಿಲ್ಲ ಎಂದು ಆಕ್ರೋಶ ಹೊರಹಾಕಿದ್ದಾರೆ.

ಇದೇ ಕಾಂಗ್ರೆಸ್‌ನವರು ಈ ಹಿಂದೆ ಭಾರತದ ಮೇಲೆ ದಾಳಿ ಮಾಡಿದ್ದ ಘಜ್ನಿ, ಘೋರಿಯನ್ನು ಹೊಗಳಿದ್ದರು ಮತ್ತು ಬಾಬ್ರಿ ಮಸೀದಿಯನ್ನು ನಿರ್ಮಿಸಿದ ಬಾಬರ್‌ನನ್ನು ಹಾಡಿ ಹೊಗಳಿದ್ದರು ಎಂದು ಜೋಶಿ ನೆನಪಿಸಿದರು. ಹರಿಪ್ರಸಾದ್ ಸಾರ್ವಜನಿಕ ಜೀವನದಲ್ಲಿ ಸದಾ ಬಾಯಿಗೆ ಬಂದ ಹಾಗೆ ಮಾತನಾಡುತ್ತಾರೆ. ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇವರನ್ನು ಮಂತ್ರಿ ಮಾಡದಿದ್ದಾಗ, ಸಿದ್ದರಾಮಯ್ಯನವರ ಲುಂಗಿಯೊಳಗೆ ಆರ್‌ಎಸ್‌ಎಸ್‌ನ ಖಾಕಿ ಚಡ್ಡಿ ಇದೆ ಎಂದು ತೇಜೋವಧೆ ಮಾಡಿದ್ದರು. ನಾವು ರಾಜಕೀಯವಾಗಿ ಸಿದ್ದರಾಮಯ್ಯನವರನ್ನು ಟೀಕಿಸುತ್ತೇವೆ, ಆದರೆ ಎಂದಿಗೂ ಈ ಮಟ್ಟದ ಕೀಳು ಭಾಷೆ ಬಳಸಿರಲಿಲ್ಲ ಎಂದು ಕುಟುಕಿದರು.

ರಾಜ್ಯದಲ್ಲಿ ಸದ್ಯ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಸಾರ್ವಜನಿಕರ 2ಗಮನವನ್ನು ಬೇರೆಡೆ ಸೆಳೆಯಲು ಮತ್ತು ರಾಷ್ಟ್ರೀಯ ಮಾಧ್ಯಮಗಳಲ್ಲಿ ಪ್ರಚಾರ ಪಡೆಯಲು ಕಾಂಗ್ರೆಸ್ ನಾಯಕರು ಆರ್‌ಎಸ್‌ಎಸ್ ವಿಚಾರವನ್ನು ಮುನ್ನೆಲೆಗೆ ತರುತ್ತಿದ್ದಾರೆ ಎಂದು ಅವರು ಗಿಮಿಕ್ ಎಂದು ಕರೆದರು.



ರಾಮ ಮಂದಿರದ ದೇಣಿಗೆ ಗೋಲ್ಮಾಲ್ ಪ್ರಕರಣದ ಕುರಿತು ಮಾತನಾಡಿದ ಪ್ರಲ್ಹಾದ್ ಜೋಶಿ, ರಾಮ ಮಂದಿರದಲ್ಲಿ ಕೆಲಸ ಮಾಡುತ್ತಿದ್ದ ಸಿಬ್ಬಂದಿಯೇ ಈ ಪಾಪದ ಕೆಲಸ ಮಾಡಿದ್ದು, ಈಗಾಗಲೇ ಅವರನ್ನು ವಶಕ್ಕೆ ಪಡೆಯಲಾಗಿದೆ. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರು ತನಿಖೆ ನಡೆಸಿ ಏನು ಹೇಳಬೇಕೋ ಅದನ್ನು ಸೂಕ್ತವಾಗಿಯೇ ಹೇಳಿದ್ದಾರೆ ಮತ್ತು ಅವರ ಕಠಿಣ ನಿರ್ಧಾರಕ್ಕೆ ನಾನು ಸಂಪೂರ್ಣ ಬದ್ಧನಾಗಿದ್ದೇನೆ. ಹಿಂದೆ ಇದೇ ಕಾಂಗ್ರೆಸ್ನವರು ಕೋರ್ಟ್‌ನಲ್ಲಿ ರಾಮನ ಅಸ್ತಿತ್ವವನ್ನೇ ಪ್ರಶ್ನೆ ಮಾಡಿದ್ದರು, ಆದರೆ ಈಗ ಅವರೇ ರಾಮನ ಬಗ್ಗೆ ಮಾತನಾಡುತ್ತಿರುವುದನ್ನು ನೋಡಿದರೆ ಅವರಿಗೆ ಈಗಲಾದರೂ ಬುದ್ಧಿ ಬಂದಿರುವುದು ಸಂತೋಷದ ವಿಷಯ, ಎಂದು ಲೇವಡಿ ಮಾಡಿದರು.ಇದೇ ವೇಳೆ, ಮಾಜಿ ಸಚಿವ ಸಂತೋಷ್ ಲಾಡ್ ಅವರ ಟೀಕೆಗಳಿಗೆ ಉತ್ತರಿಸಿದ ಅವರು, ಕಾಂಗ್ರೆಸ್‌ನವರು ಸತತ ಸೋಲಿನ ಹತಾಶೆಯಿಂದ ಹೀಗೆ ಮಾತನಾಡುತ್ತಿದ್ದಾರೆ.

ಮೋದಿಯವರನ್ನು ಬೈದರೆ ತಮಗೆ ಮೊದಲ ಹಂತದಲ್ಲೇ ಸಚಿವ ಸ್ಥಾನ ಅಥವಾ ದೊಡ್ಡ ಪದವಿ ಸಿಗುತ್ತದೆ ಎಂಬ ಭ್ರಮೆಯಲ್ಲಿ ಸಂತೋಷ್ ಲಾಡ್ ಇದ್ದಾರೆ. ದೇಶದಲ್ಲಿ ಕಾಂಗ್ರೆಸ್ ಸಂಪೂರ್ಣ ಅಧೋಗತಿಗೆ ಹೋಗಿದೆ ಎಂದರು. ವಿಜಯೇಂದ್ರ ಅಡ್ಡಮತದಾನದ ನೋವಿನಲ್ಲಿದ್ದಾರೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಧರ್ಮಸ್ಥಳಕ್ಕೆ ತೆರಳಿರುವುದರ ಬಗ್ಗೆ ಪ್ರತಿಕ್ರಿಯಿಸಿದ ಜೋಶಿ, ವಿಧಾನಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನದಿಂದಾಗಿ ರಾಜ್ಯಾಧ್ಯಕ್ಷರ ಮನಸ್ಸಿಗೆ ಸಹಜವಾಗಿಯೇ ನೋವಾಗಿದೆ. ಹೀಗಾಗಿ ಅವರು ಧರ್ಮಸ್ಥಳಕ್ಕೆ ಹೋಗಿದ್ದಾರೆ. ದೇವಸ್ಥಾನದಲ್ಲಿ ಆಣೆ–ಪ್ರಮಾಣ ಮಾಡುವುದಕ್ಕಿಂತ ಮುಂಚೆ, ಪಕ್ಷಕ್ಕೆ ದ್ರೋಹಬಗೆದು ಅಡ್ಡಮತದಾನ ಮಾಡಿದವರನ್ನು ಮೊದಲು ಪತ್ತೆ ಹಚ್ಚೋಣ ಎಂದು ನಾನು ಅವರಿಗೆ ಹೇಳಿದ್ದೇನೆ, ಅದಕ್ಕೆ ಅವರೂ ಒಪ್ಪಿಕೊಂಡಿದ್ದಾರೆ. ವಿಜಯೇಂದ್ರ ಅವರು ಈಗಾಗಲೇ ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿ ಮಾಡಿ ಬಂದಿದ್ದಾರೆ. ಅಲ್ಲಿ ಏನೆಲ್ಲಾ ಬೆಳವಣಿಗೆಗಳಾಗಿವೆ ಎಂಬ ಸಂಪೂರ್ಣ ಮಾಹಿತಿ ನನಗಿನ್ನೂ ಲಭ್ಯವಾಗಿಲ್ಲ, ತಿಳಿದುಕೊಂಡು ಮಾತನಾಡುತ್ತೇನೆ ಎಂದರು. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಕಡಿತ ಮಾಡುವ ವಿಚಾರವಾಗಿ ಸಂಬಂಧಪಟ್ಟ ಇಲಾಖೆ ಸೂಕ್ತ ತೀರ್ಮಾನ ತೆಗೆದುಕೊಳ್ಳಲಿದೆ ಹಾಗೂ ದೇಶದಲ್ಲಿ ಕಚ್ಚಾತೈಲ ಸಂಗ್ರಹಣೆಯ ಸಾಮರ್ಥ್ಯವನ್ನು ಗಣನೀಯವಾಗಿ ಹೆಚ್ಚಿಸಿದ್ದು ನಮ್ಮದೇ ಬಿಜೆಪಿ ಸರ್ಕಾರ ಎಂದು ಜೋಶಿ ಸಮರ್ಥಿಸಿಕೊಂಡರು.

## ಸಿಎಂ ವಿರುದ್ಧ ಅಲ್ಲ, ನಮ್ಮ ಹೋರಾಟ: ಕೇವಲ ಬಿಡದಿ ಟೌನ್‌ಶಿಪ್‌ಗೆ ಸೀಮಿತ



**ಬೆಂಗಳೂರು, ಜೂ.26–** ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಹೋರಾಟ ಮಾಡುತ್ತಿಲ್ಲ. ಯೋಜನೆ ವಿರೋಧಿ ಸುತ್ತಿರುವ ರೈತರಿಗೆ ಬೆಂಬಲ ನೀಡಲಾಗುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಇಂದಿಲ್ಲಿ ತಿಳಿಸಿದರು.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ರೈತರು ಪ್ರತಿಭಟನೆ ಮಾಡುತ್ತಿರುವ ಭೈರಮಂಗಲಕ್ಕೆ ಹೋಗುತ್ತಿದ್ದೇನೆ. ಮಧ್ಯಾಹ್ನದವರೆಗೂ ಮುಖ್ಯಮಂತ್ರಿಯವರಿಗಾಗಿ ಅಲ್ಲೇ ಕಾಯುತ್ತೇನೆ. ರೈತರೊಂದಿಗೆ ಚರ್ಚೆ ಮಾಡಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದರು.


ಟೌನ್‌ಶಿಪ್ ವಿಚಾರದಲ್ಲಿ ರಾಜಕೀಯ ಮಾಡುತ್ತಿಲ್ಲ. ರಾಜಕೀಯ ಉದ್ದೇಶಕ್ಕಾಗಿ ಅಭಿವೃದ್ಧಿ ತಡೆಯುವ ಉದ್ದೇಶವೂ ನನಗಿಲ್ಲ ಎಂದು ಸ್ಪಷ್ಟಪಡಿಸಿದರು. ಮುಖ್ಯಮಂತ್ರಿಯವರು ಇಂದು ವಿಧಾನಸೌಧದಲ್ಲಿ ಚರ್ಚೆಗೆ ಬನ್ನಿ ಎಂದು ಆಹ್ವಾನಿಸಿದ್ದರು. ಆದರೆ ಪೂರ್ವನಿಯೋಜಿತ ಕಾರ್ಯಕ್ರಮದಿಂದಾಗಿ ಇಂದು ಸಾಧ್ಯವಾಗುವುದಿಲ್ಲ. ಶನಿವಾರ ಯೋಜನೆಯಿಂದ ಸಂತ್ರಸ್ತರಾಗಿರುವ ರೈತರ ಸಮುಖದಲ್ಲೇ ಚರ್ಚೆ ಮಾಡೋಣ ಎಂದು ಪತ್ರ ಬರೆದಿದ್ದೆ. ಆ ಪತ್ರಕ್ಕೆ ಯಾವುದೇ ಪ್ರತಿಕ್ರಿಯೆ ದೊರೆಯದ ಹಿನ್ನೆಲೆಯಲ್ಲಿ ನಿನ್ನೆ ಮತ್ತೊಂದು ಪತ್ರವನ್ನು ಬರೆಯಲಾಗಿದೆ ಎಂದರು. ಶನಿವಾರ ಬಿಡದಿ ಟೌನ್‌ಶಿಪ್ ವಿರೋಧಿಸುತ್ತಿರುವ ರೈತರೊಂದಿಗೆ ಚರ್ಚೆ ಮಾಡುತ್ತೇನೆ. ಆ ಸಂದರ್ಭದಲ್ಲಿ ಮುಖ್ಯಮಂತ್ರಿಯೂ ಬಂದರೆ ಒಳ್ಳೆಯದು. ಟೌನ್‌ಶಿಪ್ ವಿರೋಧಿಸಿ 470 ಕ್ಕೂ ಹೆಚ್ಚು ದಿನಗಳಿಂದಲೂ ಪ್ರತಿಭಟನೆ ನಡೆಸುತ್ತಿರುವ ರೈತರ ಎದುರಿಗೆ ಕೆಲವು ರೈತರು ಭೂಮಿ ಕೊಡಲು ಸಿದ್ಧ ಎಂದು ಪ್ರತಿಯಾಗಿ ಪ್ರತಿಭಟಿಸುತ್ತಿದ್ದಾರೆ ಎಂದು ಹೇಳಿದರು.ರೈತರು ಭೂಸ್ವಾಧೀನ ಬೇಡ ಎಂದು ಹೇಳುತ್ತಿದ್ದಾರೆ. ಅವರ ಅಹವಾಲಿಗೆ ಸ್ಪಂದಿಸಿ ಬೆಂಬಲ ನೀಡಿದ್ದೇನೆ. ಈ ವಿಚಾರದಲ್ಲಿ ಯಾವುದೇ ಪ್ರತಿಷ್ಠೆ ಇಲ್ಲ. ರೈತರು ಒಪ್ಪಿದರೆ ನಮ ತಕರಾರು ಏನೂ ಇಲ್ಲ. ಧಾರಾಳವಾಗಿ ಯೋಜನೆ ಅನುಷ್ಠಾನ ಮಾಡಬಹುದು. ರೈತರನ್ನು ಹೆದರಿಸಿ, ಬೆದರಿಸಿ ಭೂಸ್ವಾಧೀನ ಮಾಡಬಾರದು. ಪ್ರೀತಿಯಿಂದ ಅವರ ಮನ ಗೆಲ್ಲಬೇಕು. ಬಹುತೇಕ ರೈತರ ವಿರೋಧವಿದ್ದಾಗ ಹಠ ಹಿಡಿದು ಏಕೆ ಟೌನ್‌ಶಿಪ್ ಅನುಷ್ಠಾನ ಮಾಡಬೇಕೆಂದು ಪ್ರಶ್ನಿಸಿದರು.ಭೈರಮಂಗಲದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವುದಾದರೆ ರೈತರನ್ನೇ ವಿಧಾನಸೌಧಕ್ಕೆ ಕರೆಸಿಕೊಳ್ಳಲಿ ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ಅವರ ಹೇಳಿಕೆಗೆ ತಿರುಗೇಟು ನೀಡಿದರು.2006–07 ರಲ್ಲಿ ನಾನು ಮುಖ್ಯಮಂತ್ರಿಯಾಗಿದ್ದಾಗ ಸಿಎಂ ಗೃಹಕಚೇರಿ ಕೃಷ್ಣಾಗೆ 500 ರಿಂದ 600 ರೈತರನ್ನು ಕರೆಸಿಕೊಂಡು 3 ಸಭೆಗಳನ್ನು ಮಾಡಿದ್ದೇನೆ. ಆ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕರು ಟೌನ್‌ಶಿಪ್ ವಿರೋಧಿಸಿ ವಿಧಾನಸಭೆಯಲ್ಲಿ ಏನೇನು ಮಾಡಿದ್ದಾರೋ ಎಂಬ ದಾಖಲೆಗಳಿವೆ. ಅದನ್ನೊಮ್ಮೆ ಮುಖ್ಯಮಂತ್ರಿ ನೋಡಲಿ ಎಂದು ಕುಮಾರಸ್ವಾಮಿ ತಿಳಿಸಿದರು. 2013ರಲ್ಲಿ ಯುಪಿಎ ಸರ್ಕಾರ ಜಾರಿಗೆ ತಂದಿರುವ ಕಾನೂನು ಮೀರಿ ಭೂಸ್ವಾಧೀನ ಮಾಡಿಕೊಳ್ಳಲಾಗುತ್ತಿದೆ. ಅದನ್ನು ರೈತರು ವಿರೋಧಿಸುತ್ತಿದ್ದು, ಅವರ ಹೋರಾಟಕ್ಕೆ ಬೆಂಬಲವಾಗಿ ನ್ಯಾಯಾಲಯದ ಮುಂದೆ ಹೋಗುವುದು ಅನಿವಾರ್ಯವಾಗುತ್ತದೆ. ರೈತರು ಗಲಾಟೆ ಮಾಡುತ್ತಾರೆಯೇ? ಶನಿವಾರ ನಿಷೇಧಾಜ್ಞೆ ಹೇರಲು ಸರ್ಕಾರ ಮುಂದಾಗಿದೆ ಎಂದು ಆರೋಪಿಸಿದರು.

20 ಸಾವಿರ ಕೋಟಿ ರೂ. ಯೋಜನೆಯಲ್ಲಿ ಇದುವರೆಗೆ 19 ಕೋಟಿ ರೂ. ಮಾತ್ರ ಪರಿಹಾರ ನೀಡಿದ್ದಾರೆ. ಅದೂ ಸಣ್ಣ ಪ್ರಮಾಣದಲ್ಲಿ. ಬೆಳೆ ಬೆಳೆಯಲಾಗದ ಭೂಮಿಯನ್ನು ರೈತರು ಕೊಟ್ಟಿದ್ದಾರೆ. ಆದರೆ ಫಲವತ್ತಾದ ಭೂಸ್ವಾಧೀನಕ್ಕೆ ವಿರೋಧಿಸುತ್ತಿದ್ದಾರೆ. ಬೆಂಗಳೂರು ನಗರದ ಸಮಸ್ಯೆಗಳನ್ನು ಮೊದಲು ಸರಿಪಡಿಸಲಿ. ಆನಂತರ ಮತ್ತೊಂದು ಉಪನಗರ ನಿರ್ಮಾಣದ ಕಡೆಗೆ ಗಮನ ಹರಿಸಲಿ ಎಂದರು.

ನಾನು ಕೈಯಲ್ಲಿ ಕಟ್ಟಿರುವುದು ಯಾವ ವಾಚ್ ಎಂಬುದನ್ನು ನೀವೇ ನೋಡಿ. ಇದು ಅಂಬೇಡ್ಕರ್ ಭಾವಚಿತ್ರವಿರುವ ಎಚ್‌ಎಂಟಿ ವಾಚ್. ದುಬಾರಿ ಬೆಲೆಯ ವಾಚ್ ಆಗಿದ್ದರೆ ಅಥವಾ ಹತ್ತಾರು ವಾಚ್‌ಗಳು ನನ್ನ ಬಳಿ ಇದ್ದರೆ ಎಸ್‌ಐಟಿ ಮೂಲಕ ಚೆಕ್ ಮಾಡಿಸಿ, ವಶಪಡಿಸಿಕೊಳ್ಳಲಿ ಎಂದು ಅವರು ಇದೇ ಸಂದರ್ಭದಲ್ಲಿ ವ್ಯಂಗ್ಯವಾಡಿದರು.

## ಮಂಜುನಾಥ್ ಮೇಲಿನ ಇ.ಡಿ ದಾಳಿಗೆ ಕಾರಣ ಸ್ವತಃ ಅರ್ಥೈಸಿಕೊಳ್ಳಲು ಸಾಧ್ಯವಾಗಿಲ್ಲ: ಸತೀಶ್ ಜಾರಕಿಹೊಳಿ ಬೇಸರ

**ಬೆಳಗಾವಿ, ಜೂ.26:** ಭ್ರಷ್ಟಾಚಾರ ಆರೋಪದ ಹಿನ್ನೆಲೆಯಲ್ಲಿ ನನ್ನ ಬಾವ, ಅಬಕಾರಿ ಹೆಚ್ಚುವರಿ ಆಯುಕ್ತ ವೈ. ಮಂಜುನಾಥ ಅವರ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ (ಇ.ಡಿ) ದಾಳಿ ನಡೆಸಿದ್ದಕ್ಕೆ ಕಾರಣ ಏನೆಂದು ಇನ್ನೂ ನನಗೆ ಅರ್ಥವಾಗುತ್ತಿಲ್ಲ' ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು. ಮಂಜುನಾಥ ರಾಜ್ಯ ಸರ್ಕಾರಿ ಉದ್ಯೋಗಿಯಾಗಿದ್ದರು. ಭ್ರಷ್ಟಾಚಾರದ ಆರೋಪಗಳನ್ನು ಪರಿಶೀಲಿಸಲು ಲೋಕಾಯುಕ್ತವಿತ್ತು' ಎಂದು ಇಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಮಂಜುನಾಥ ಮೇಲಿನ ಇ.ಡಿ ದಾಳಿಗೆ ಕಾರಣಗಳನ್ನು ಸ್ವತಃ ಅರ್ಥೈಸಿಕೊಳ್ಳಲು ಸಾಧ್ಯವಾಗಿಲ್ಲ. ಮಂಜುನಾಥ ತನಿಖೆಗಳನ್ನು ಎದುರಿಸಬೇಕಾಗುತ್ತದೆ.



ಆರೋಪಗಳನ್ನು ಕಾನೂನುಬದ್ಧವಾಗಿ ಎದುರಿಸಬೇಕಾಗುತ್ತದೆ. ಭ್ರಷ್ಟಾಚಾರದ ಆರೋಪಗಳಿಗೆ ಸಂಬಂಧಿಸಿ ಲೋಕಾಯುಕ್ತರು ಈ ಹಿಂದೆ ಮಂಜುನಾಥ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ಆದರೆ, ಕರ್ನಾಟಕ ಹೈಕೋರ್ಟ್ ಎಫ್‌ಐಆರ್ ರದ್ದುಗೊಳಿಸಿತ್ತು. ಮಂಜುನಾಥ ತಮ್ಮ ಮೇಲಿನ ಆರೋಪಗಳನ್ನು ಹೇಗೆ ಸಮರ್ಥಿಸಿಕೊಳ್ಳುತ್ತಾರೆ ಎಂಬುದನ್ನು ನೋಡಬೇಕಾಗಿದೆ' ಎಂದರು.

ರಾಜ್ಯ ಸರ್ಕಾರಕ್ಕೆ ಸಂಬಂಧಿಸಿದ ಪ್ರಕರಣದ ತನಿಖೆಗಾಗಿ ರಾಜ್ಯ ಸರ್ಕಾರಿ ಉದ್ಯೋಗಿ ಮೇಲೆ ಇ.ಡಿ ಇಷ್ಟು ದೊಡ್ಡ ಮಟ್ಟದಲ್ಲಿ ದಾಳಿ ಮಾಡಿರುವುದು ಇದೇ ಮೊದಲು. ಇದು ರಾಜಕೀಯ ಪ್ರೇರಿತ ಎಂದು ಈಗಲೇ ಹೇಳಲಾಗದು. ಜಾರಕಿಹೊಳಿ ಕುಟುಂಬದ ಮೇಲೆ ದಾಳಿ ನಡೆಸಲಾಗಿದೆಯೇ ಅಥವಾ ಬೇರೆ ಕಾರಣಗಳಿವೆಯೇ ಎಂದು ಕೆಲವೇ ತಿಂಗಳಲ್ಲಿ ತಿಳಿಯುತ್ತದೆ. 2028 ರಲ್ಲಿ ವಿಧಾನಸಭಾ ಚುನಾವಣೆ ನಡೆಯಲಿದೆ. ಚುನಾವಣೆ ಸಮೀಪಿಸುತ್ತಿದ್ದಂತೆ, ಇಂಥ ದಾಳಿಗಳು ಆರಂಭವಾಗುವುದು ಸಹಜ. ಹೆಚ್ಚಿನ ಕಾಂಗ್ರೆಸ್ ನಾಯಕರು ತಮ್ಮ ಮೇಲೆ ಮತ್ತು ಸಂಬಂಧಿಕರ ಮೇಲೆ ಇ.ಡಿ ದಾಳಿ ನಡೆಸುವ ಭಯದಲ್ಲಿದ್ದಾರೆ ಎಂದು ಹೇಳಿದರು.

ಮಂಜುನಾಥ ಅವರ ಕುಟುಂಬ ಕಳೆದ 30 ವರ್ಷಗಳಿಂದ ಮೈಸೂರಿನಲ್ಲಿ ಬಾರ್ ಮತ್ತು ಇತರೆ ವ್ಯವಹಾರಗಳನ್ನು ಹೊಂದಿದೆ. ಸರ್ಕಾರಿ ಅಧಿಕಾರಿಯಾಗಿ ಅವರು ತಮ್ಮ ಹೆಸರಿನಲ್ಲಿ ಮದ್ಯದ ಬಾರ್ ಪರವಾನಗಿ ಹೊಂದಲು ಸಾಧ್ಯವಿಲ್ಲ. ಅವು ಕುಟುಂಬ ಸದಸ್ಯರ ಹೆಸರಿನಲ್ಲಿ ಇರಬಹುದು ಎಂದು ಅವರು ಹೇಳಿದರು. ಉಪ್ಪು ತಿಂದವರು ನೀರು ಕುಡಿಯಬೇಕಾಗುತ್ತದೆ' ಎಂಬ ಮಾಜಿ ಸಚಿವ ಆರ್.ಬಿ.ತಿಮ್ಮಾಪುರ ಅವರ ಹೇಳಿಕೆ ಕುರಿತಾದ ಪ್ರಶ್ನೆಗೆ, ತಪ್ಪು ಮಾಡಿದವರು ಶಿಕ್ಷೆ ಎದುರಿಸಬೇಕಾಗುತ್ತದೆ. ಭ್ರಷ್ಟಾಚಾರ ಒಂದು ಇಲಾಖೆ ಅಥವಾ ವ್ಯಕ್ತಿಗೆ ಸೀಮಿತವಾಗಿಲ್ಲ. ಮಂಜುನಾಥ ಅವರ ಮೇಲೆ ಇ.ಡಿ ದಾಳಿ ನಡೆದ ಕಾರಣಕ್ಕೆ, ಅವರ ಹೆಸರು ಮುನ್ನೆಲೆಗೆ ಬಂದಿದೆ' ಎಂದು ಹೇಳಿದರು. ತಮ್ಮ ಮತ್ತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಧ್ಯೆ ಭಿನ್ನಾಭಿಪ್ರಾಯ ಹುಟ್ಟಿಕೊಂಡ ಕಾರಣ, ಕೆಪಿಸಿಸಿ ಅಧ್ಯಕ್ಷ ಸ್ಥಾನ ಕೈತಪ್ಪಿದೆ ಎಂಬುದು ಸುಳ್ಳು ಎಂದರು. ಎರಡು ತಿಂಗಳ ಹಿಂದೆ ನನಗೆ ಕೆಪಿಸಿಸಿ ಅಧ್ಯಕ್ಷರಾಗುವ ಅಥವಾ ಸಚಿವರಾಗುವ ಆಯ್ಕೆಯನ್ನು ನೀಡಲಾಯಿತು. ಪಕ್ಷದ ಹೈಕಮಾಂಡ್ ಒಬ್ಬ ವ್ಯಕ್ತಿಗೆ ಒಂದು ಹುದ್ದೆಯ ನಿಯಮ ಅನ್ವಯಿಸಿತು. ನಾನು ಸಚಿವನಾಗಲು ಆಯ್ಕೆ ಮಾಡಿಕೊಂಡೆ' ಎಂದು ಅವರು ಹೇಳಿದರು.'ಬರ ಪರಿಸ್ಥಿತಿ ಮೇಲ್ವಿಚಾರಣೆ ಮಾಡಲು ಪ್ರತಿ ಸಚಿವರಿಗೆ ಮೂರು ಜಿಲ್ಲೆಗಳ ಉಸ್ತುವಾರಿ ವಹಿಸಲಾಗಿದೆ. ನಾನು ಬೆಳಗಾವಿ ಜಿಲ್ಲಾಧಿಕಾರಿಯೊಂದಿಗೆ ಸಭೆ ನಡೆಸಿದ್ದೇನೆ.

ಶೀಘ್ರದಲ್ಲೇ ಧಾರವಾಡ ಮತ್ತು ಹಾವೇರಿ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು' ಎಂದು ಅವರು ಹೇಳಿದರು. ಬಿಡದಿ ಯೋಜನೆಗೆ ಸಂಬಂಧಿಸಿ ಗೊಂದಲಗಳಿದ್ದು, ರೈತರು ತಮ್ಮ ಭೂಮಿ ಸ್ವಾಧೀನಕ್ಕೆ ವಿರೋಧಿಸುತ್ತಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ ಈ ಯೋಜನೆಯು ರೈತರ ಹಿತಾಸಕ್ತಿಗೆ ವಿರುದ್ಧವಾಗಿದೆ. ಅದನ್ನು ನಿಲ್ಲಿಸುವುದಾಗಿ ಭರವಸೆ ನೀಡಿದ್ದಾರೆ. ಆದರೆ, ಶಿವಕುಮಾರ್ ಅವರು ಹಿಂದಿನ ಸರ್ಕಾರದ ಅವಧಿಯಲ್ಲಿ ಇದಕ್ಕೆ ಅನುಮೋದನೆ ನೀಡಲಾಗಿದೆ ಎಂದು ಹೇಳುತ್ತಾರೆ. ಗೊಂದಲವನ್ನು ಪರಿಹರಿಸಬೇಕಾಗಿದೆ' ಎಂದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ವೆನೆಜುವೆಲಾ ಭೂಕಂಪದಲ್ಲಿ ಮೃತಪಟ್ಟವರ ಸಂಖ್ಯೆ 590ಕ್ಕೆ ಏರಿಕೆ, ಭಾರತದಿಂದ ವೈದ್ಯಕೀಯ ನೆರವು

**ನವದೆಹಲಿ/ಕ್ಯಾರಕಾಸ್, ಜೂನ್ 26:** ಭಾರತವು ಶುಕ್ರವಾರ 'ಆಪರೇಷನ್ ಅಮಿಸ್ಟಾಡ್' ಅನ್ನು ಪ್ರಾರಂಭಿಸಿದ್ದು, ಭೂಕಂಪ ಪೀಡಿತ ವೆನೆಜುವೆಲಾಕ್ಕೆ ವಿಶೇಷ ಪ್ಯಾರಾಟ್ರೂಪರ್ ವೈದ್ಯಕೀಯ ತುಕಡಿಯನ್ನು ಕಳುಹಿಸಿದೆ, ರಕ್ಷಣಾಕಾರರು ಕುಸಿದ ಕಟ್ಟಡಗಳ ಅಡಿಯಲ್ಲಿ ಬದುಕುಳಿದವರಿಗಾಗಿ ತೀವ್ರ ಹುಡುಕಾಟವನ್ನು ಮುಂದುವರೆಸಿದ್ದಾರೆ ಮತ್ತು ಲ್ಯಾಟಿನ್ ಅಮೇರಿಕನ್ ರಾಷ್ಟ್ರದ ದಶಕಗಳಲ್ಲಿನ ಅತ್ಯಂತ ಭೀಕರ ನೈಸರ್ಗಿಕ ವಿಕೋಪದಿಂದ ಸಾವನ್ನಪ್ಪಿದವರ ಸಂಖ್ಯೆ 589 ಕ್ಕೆ ಏರಿದೆ. ಬುಧವಾರ ತಡರಾತ್ರಿ ವೆನೆಜುವೆಲಾವನ್ನು ಅಪ್ಪಳಿಸಿದ ಎರಡು ಪ್ರಬಲ ಭೂಕಂಪಗಳಲ್ಲಿ ಕನಿಷ್ಠ 589 ಜನರು ಸಾವನ್ನಪ್ಪಿದ್ದಾರೆ ಮತ್ತು ಇನ್ನೂ 2,980 ಜನರು ಗಾಯಗೊಂಡಿದ್ದಾರೆ ಎಂದು ಹಂಗಾಮಿ ಅಧ್ಯಕ್ಷ ಡೆಲ್ಸಿ ರೊಡ್ರಿಗಸ್ ಶುಕ್ರವಾರದ ನವೀಕರಣದಲ್ಲಿ ತಿಳಿಸಿದ್ದಾರೆ ಎಂದು ರಾಜ್ಯ ಮಾಧ್ಯಮಗಳು ತಿಳಿಸಿವೆ. ತ್ವರಿತ ಮಾನವೀಯ ಪ್ರತಿಕ್ರಿಯೆಯಲ್ಲಿ, ನವದೆಹಲಿ ಶುಕ್ರವಾರ 60 ಪ್ಯಾರಾ ಫೀಲ್ಡ್ ಆಸ್ಪತ್ರೆಯಿಂದ 41 ಸದಸ್ಯರ ಭಾರತೀಯ ಸೇನೆಯ ವೈದ್ಯಕೀಯ ತಂಡವನ್ನು ಉತ್ತರ ವೆನೆಜುವೆಲಾದಲ್ಲಿ ಪರಿಹಾರ ಕಾರ್ಯಾಚರಣೆಗಳನ್ನು ಬೆಂಬಲಿಸಲು ಕಳುಹಿಸಿದೆ, ಅಲ್ಲಿ ಅವಳಿ ಪ್ರಬಲ ಭೂಕಂಪಗಳು ಸಾವಿರಾರು ಜನರನ್ನು ಗಾಯಗೊಳಿಸಿವೆ ಮತ್ತು ಹತ್ತಾರು ಸಾವಿರ ಜನರನ್ನು ನಿರಾಶ್ರಿತರನ್ನಾಗಿ ಮಾಡಿದೆ. "'ಕಂಪಾರ್ಟಿಮೋಸ್ ಸು ಡೋಲರ್. ಎಸ್ಟಾಮೋಸ್ ಕಾನ್ಸ್ಟಡೆಸ್' (ನಾವು ನಿಮ್ಮ ನೋವನ್ನು ಹಂಚಿಕೊಳ್ಳುತ್ತೇವೆ. ನಾವು ನಿಮ್ಮೊಂದಿಗೆ ನಿಲ್ಲುತ್ತೇವೆ)" ಎಂದು ಭಾರತದ ವಿದೇಶಾಂಗ ಸಚಿವಾಲಯವು ಕಾರ್ಯಾಚರಣೆಯನ್ನು ಪ್ರಕಟಿಸುವ ಹೇಳಿಕೆಯಲ್ಲಿ ತಿಳಿಸಿದೆ. ಒಂಬತ್ತು ವೈದ್ಯಕೀಯ ಅಧಿಕಾರಿಗಳು ಮತ್ತು ವಿಶೇಷ ಸಹಾಯಕ ಸಿಬ್ಬಂದಿಯನ್ನು ಒಳಗೊಂಡ ಈ ತಂಡವು ಸುಮಾರು ಆರು ಟನ್ ವೈದ್ಯಕೀಯ ಸಾಮಗ್ರಿಗಳು ಮತ್ತು ಮಾನವೀಯ ನೆರವು ಹೊಂದಿರುವ ಎರಡು ಭಾರತೀಯ ವಾಯುಪಡೆಯ ಅ-17 ವಿಮಾನಗಳಲ್ಲಿ ಹೊರಟಿತು. ಭಾರತದ ಆರೋಗ್ಯ ಮೈತ್ರಿ ಉಪಕ್ರಮದಡಿಯಲ್ಲಿ ಸ್ಥಳೀಯವಾಗಿ ಅಭಿವೃದ್ಧಿಪಡಿಸಲಾದ 'ಭೀಷ್ಮ ಕ್ಯೂಬ್' ಅನ್ನು ನಿಯೋಜನೆಯಲ್ಲಿ ಸೇರಿಸಲಾಗಿದೆ, ಇದು 200 ರೋಗಿಗಳಿಗೆ ಚಿಕಿತ್ಸೆ ನೀಡುವ ಮತ್ತು ಸುಧಾರಿತ ಆಘಾತ ಆರೈಕೆ, ತುರ್ತು ಶಸ್ತ್ರಚಿಕಿತ್ಸೆ ಮತ್ತು ತೀವ್ರ ನಿಗಾ ಬೆಂಬಲವನ್ನು ಒದಗಿಸುವ ಸಾಮರ್ಥ್ಯವನ್ನು ಹೊಂದಿರುವ ವೇಗವಾಗಿ ನಿಯೋಜಿಸಬಹುದಾದ ಮಾಡ್ಯುಲರ್ ಫೀಲ್ಡ್ ಆಸ್ಪತ್ರೆಯಾಗಿದೆ. ಬುಧವಾರ ರಾತ್ರಿ (ಸ್ಥಳೀಯ ಸಮಯ) ದೇಶದ ಉತ್ತರ ಪ್ರದೇಶದಲ್ಲಿ ಸಂಭವಿಸಿದ ಎರಡು ಪ್ರಮುಖ ಭೂಕಂಪಗಳಿಂದ ಉಂಟಾದ ವಿನಾಶದ ಪ್ರಮಾಣವನ್ನು ನಿಭಾಯಿಸಲು ವೆನೆಜುವೆಲಾದ ಅಧಿಕಾರಿಗಳು ಹೆಣಗಾಡುತ್ತಿರುವಾಗ ಈ ಕಾರ್ಯಾಚರಣೆ ನಡೆದಿದೆ. ರಕ್ಷಣಾ ತಂಡಗಳು ಧ್ವಂಸಗೊಂಡ ಸಮುದಾಯಗಳನ್ನು ತಲುಪುತ್ತಿದ್ದಂತೆ ಸಾವುನೋವುಗಳ ಸಂಖ್ಯೆ ಮತ್ತಷ್ಟು ಹೆಚ್ಚಾಗಬಹುದು ಎಂದು ಆರೋಗ್ಯ ಸಚಿವ ಕಾರ್ಲೋಸ್ ಅಲ್ವಾರಾಡೊ ಹೇಳಿದ್ದಾರೆ. ಯುನೈಟೆಡ್ ಸ್ಟೇಟ್ಸ್ ಭೂವೈಜ್ಞಾನಿಕ ಸಮೀಕ್ಷೆಯ ಪ್ರಕಾರ, ಕ್ಯಾರಕಾಸ್ನ ಪಶ್ಚಿಮಕ್ಕೆ ಸುಮಾರು 160 ಕಿಲೋಮೀಟರ್ ದೂರದಲ್ಲಿ 7.2 ತೀವ್ರತೆಯ ಭೂಕಂಪ ಸಂಭವಿಸಿದೆ, ನಂತರ ಕೆಲವೇ ಕ್ಷಣಗಳಲ್ಲಿ 7.5 ತೀವ್ರತೆಯ ಭೂಕಂಪ ಸಂಭವಿಸಿದೆ. ಪೀಡಿತ ಪ್ರದೇಶಗಳಲ್ಲಿ ಸಂಪೂರ್ಣ ವಸತಿ ಕಟ್ಟಡಗಳು ಕುಸಿದು, ಕಾಂಕ್ರೀಟ್ ಮತ್ತು ತಿರುಚಿದ ಉಕ್ಕಿನ ಕೆಳಗೆ ನಿವಾಸಿಗಳನ್ನು ಸಿಲುಕಿಸಿವೆ. ಶುಕ್ರವಾರವೂ ರಕ್ಷಣಾ ಕಾರ್ಯಕರ್ತರು, ಸ್ನಿಫರ್ ನಾಯಿಗಳು, ಭಾರೀ ಯಂತ್ರೋಪಕರಣಗಳು ಮತ್ತು ಸ್ವಯಂಸೇವಕರ ಸಹಾಯದಿಂದ, ಬದುಕುಳಿದವರನ್ನು ಹುಡುಕುವ ಸಮಯದ ವಿರುದ್ಧದ ಓಟದಲ್ಲಿ ಅವಶೇಷಗಳ ಮೂಲಕ ಅಗೆಯುವುದನ್ನು ಮುಂದುವರೆಸಿದರು. ನೂರಾರು ಜನರು ಸಿಲುಕಿಕೊಂಡಿರಬಹುದು ಎಂಬ ಭಯ ಮುಂದುವರಿದಿದ್ದರೂ, ಇನ್ನೂ ಕಾಣೆಯಾದ ಜನರ ಸಂಖ್ಯೆಯನ್ನು ಅಂದಾಜು ಮಾಡಲು ಅಧಿಕಾರಿಗಳು ನಿರಾಕರಿಸಿದರು. "ಮೊದಲ 24 ರಿಂದ 72 ಗಂಟೆಗಳು ನಿರ್ಣಾಯಕವಾಗಿವೆ. ಉಳಿಸಬಹುದಾದ ಹೆಚ್ಚಿನವರನ್ನು ಈ ಸಮಯದೊಳಗೆ ಕಂಡುಹಿಡಿಯಬೇಕು. ಹಿಂದೆ ಪವಾಡಗಳು ಸಂಭವಿಸಿದ್ದರೂ ಮತ್ತು ಒಂದು ವಾರದ ನಂತರವೂ ಜನರು ಹೊರಬಂದಿದ್ದಾರೆ" ಎಂದು ಈ ಹಿಂದೆ ಭೂಕಂಪ ಮತ್ತು ಗಣಿ ಕುಸಿತದ ರಕ್ಷಣಾ ಕಾರ್ಯಗಳಲ್ಲಿ ಭಾಗವಹಿಸಿದ್ದ ಭಾರತೀಯ ವೈದ್ಯರು ಹೇಳಿದರು. ಈ ವಿಪತ್ತು ಹತ್ತಾರು ಸಾವಿರ ಜನರನ್ನು ತಮ್ಮ ಮನೆಗಳಿಂದ ಹೊರಹಾಕುವಂತೆ ಮಾಡಿದೆ. ಕ್ಯಾರಕಾಸ್ ಮತ್ತು ನೆರೆಯ ಪಟ್ಟಣಗಳಲ್ಲಿ, ಸಾರ್ವಜನಿಕ ಉದ್ಯಾನವನಗಳು, ಕ್ರೀಡಾ ಮೈದಾನಗಳು ಮತ್ತು ಬೀದಿಗಳನ್ನು ತಾತ್ಕಾಲಿಕ ಆಶ್ರಯ ತಾಣಗಳಾಗಿ ಪರಿವರ್ತಿಸಲಾಗಿದೆ, ಏಕೆಂದರೆ ನಿವಾಸಿಗಳು ನಂತರದ ಆಘಾತಗಳ ಆತಂಕದ ನಡುವೆ ಹಾನಿಗೊಳಗಾದ ಕಟ್ಟಡಗಳನ್ನು ತಪ್ಪಿಸುತ್ತಿದ್ದಾರೆ. ಉತ್ತರ ದಕ್ಷಿಣ ಅಮೆರಿಕಾದ ವ್ಯಾಪಕ ಭಾಗದಲ್ಲಿ ಭೂಕಂಪಗಳು ಅನುಭವಿಸಿದ್ದು, ಬ್ರೆಜಿಲ್‌ನ ಅಮೆಜಾನ್ ಪ್ರದೇಶದವರೆಗೆ ಕಂಪನಗಳು ವರದಿಯಾಗಿವೆ. ಕ್ಯಾರಕಾಸ್ ಬಳಿಯ ಸೈಮನ್ ಬೊಲಿವರ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಸೇರಿದಂತೆ ಸಾರಿಗೆ ಮತ್ತು ಸಾರ್ವಜನಿಕ ಮೂಲಸೌಕರ್ಯಗಳಿಗೆ ಗಮನಾರ್ಹ ಹಾನಿಯಾಗಿದೆ ಎಂದು ವರದಿಯಾಗಿದೆ, ಇದು ರಚನಾತ್ಮಕ ಪರಿಶೀಲನೆಗಳ ಬಾಕಿ ಇರುವವರೆಗೆ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದೆ. ದೇಶಾದ್ಯಂತ ಶಾಲೆಗಳನ್ನು ಮುಚ್ಚಲಾಗಿದ್ದು, ಹಲವಾರು ಶೈಕ್ಷಣಿಕ ಸೌಲಭ್ಯಗಳನ್ನು ತಾತ್ಕಾಲಿಕ ಆಶ್ರಯ ತಾಣಗಳು ಮತ್ತು ನೆರವು ವಿತರಣಾ ಕೇಂದ್ರಗಳಾಗಿ ಪರಿವರ್ತಿಸಲಾಗಿದೆ. ಭಾರತದ ಹಸ್ತಕ್ಷೇಪವು ಅಂತರರಾಷ್ಟ್ರೀಯ ಮಾನವೀಯ ಬಿಕ್ಕಟ್ಟುಗಳಿಗೆ ಮೊದಲ ಪ್ರತಿಕ್ರಿಯೆ ನೀಡುವ ರಾಷ್ಟ್ರವಾಗಿ ಅದರ ಬೆಳೆಯುತ್ತಿರುವ ಪಾತ್ರವನ್ನು ಒತ್ತಿಹೇಳುತ್ತದೆ. ವೆನೆಜುವೆಲಾದ ಸೈನ್ಯ ಮತ್ತು ವಿಪತ್ತು ನಿಯಂತ್ರಣ ಸಿಬ್ಬಂದಿಯ ಜೊತೆಗೆ, ಮುಖ್ಯ ಸಹಾಯವು ಅಮೆರಿಕದಿಂದ ಬಂದಿದೆ, ಅದು ತನ್ನ ಮೆರೈನ್ ಕಾರ್ಪ್ಸ್‌ನಿಂದ ನಡೆಸಲ್ಪಡುತ್ತಿರುವ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ನಿರ್ದೇಶಿಸಲು ಮೇಜರ್ ಜನರಲ್ ಅನ್ನು ಕಳುಹಿಸಿದೆ. ನೆರೆಯ ಮೆಕ್ಸಿಕೊ ಕೂಡ ಇದೇ ರೀತಿಯಾಗಿ ಪ್ರಯತ್ನಗಳಲ್ಲಿ ಸೇರಲು ಮತ್ತು ವೆನೆಜುವೆಲಾಗೆ ಅಗತ್ಯವಿರುವ ಸಮಯದಲ್ಲಿ ಸಹಾಯ ಮಾಡಲು ರಕ್ಷಣಾ ಕಾರ್ಯಾಚರಣೆಯನ್ನು ಕಳುಹಿಸಿದೆ. ನವದೆಹಲಿಯು ಟರ್ಕಿ, ನೇಪಾಳ ಮತ್ತು ಮ್ಯಾನ್ಮಾರ್‌ನಲ್ಲಿ ಕೈಗೊಂಡ ಇದೇ ರೀತಿಯ ವಿಪತ್ತು-ಪರಿಹಾರ ಕಾರ್ಯಾಚರಣೆಗಳನ್ನು ಅನುಸರಿಸುತ್ತದೆ, ಇದು ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ ಸಾಮರ್ಥ್ಯಗಳ ಮೇಲೆ ಹೆಚ್ಚು ಕೇಂದ್ರೀಕೃತವಾದ ವಿದೇಶಾಂಗ ನೀತಿಯನ್ನು ಪ್ರತಿಬಿಂಬಿಸುತ್ತದೆ. ಅಧಿಕಾರಿಗಳು ಆಪರೇಷನ್ ಅಮಿಸ್ಟಾಡ್ ಅನ್ನು ವಸುಧೈವ ಕುಟುಂಬಕಂ ತತ್ವಕ್ಕೆ ಭಾರತದ ದೀರ್ಘಕಾಲದ ಬದ್ಧತೆಯ ಅಭಿವ್ಯಕ್ತಿ ಎಂದು ಬಣ್ಣಿಸಿದರು - ಜಗತ್ತು ಒಂದು ಕುಟುಂಬ" ಮತ್ತು ಆಳವಾದ ರಾಷ್ಟ್ರೀಯ ದುರಂತದ ಕ್ಷಣದಲ್ಲಿ ವೆನೆಜುವೆಲಾದ ಜನರೊಂದಿಗೆ ಒಗ್ಗಟ್ಟಿನ ಪ್ರದರ್ಶನ. "ಕಳೆದ ವರ್ಷ ಮಾರ್ಚ್



28, 2025 ರಂದು ಇದೇ ರೀತಿಯ ವಿನಾಶಕಾರಿ ಭೂಕಂಪದ ನಂತರ ಮ್ಯಾನ್ಮಾರ್‌ಗೆ ಸಹಾಯ ಮಾಡಲು ನಾವು ಆಪರೇಷನ್ ಬ್ರಹ್ಮವನ್ನು ಪ್ರಾರಂಭಿಸಿದ್ದೇವೆ. ನಾವು ಮಂಡಾಲೆಯಲ್ಲಿ 200 ಹಾಸಿಗೆಗಳ ಕ್ಷೇತ್ರ ಆಸ್ಪತ್ರೆಯನ್ನು ನಿಯೋಜಿಸಿದ್ದೇವೆ ಮತ್ತು 2,500 ಕ್ಕೂ ಹೆಚ್ಚು ರೋಗಿಗಳಿಗೆ ಚಿಕಿತ್ಸೆ ನೀಡಿದ್ದೇವೆ" ಎಂದು ಅಧಿಕಾರಿಗಳು ಗಮನಸೆಳೆದರು. ಮ್ಯಾನ್ಮಾರ್ ಕಾರ್ಯಾಚರಣೆಯ ಸಮಯದಲ್ಲಿ, IAF ಮತ್ತು ಭಾರತೀಯ ನೌಕಾಪಡೆಯು ಪೂರ್ವನಿರ್ಮಿತ ರಚನೆ, ಕುಡಿಯುವ ನೀರು, ಡೇರೆ ಮತ್ತು ಜನರೇಟರ್ ಸೇರಿ 750 ಟನ್‌ಗಳಿಗೂ ಹೆಚ್ಚು ಪರಿಹಾರ ಸಾಮಗ್ರಿಗಳನ್ನು ತಲುಪಿಸಿತು.

## ಸರ್ಕಾರಿ ಹುದ್ದೆಗಳನ್ನು ಹಂತಹಂತವಾಗಿ ಭರ್ತಿ ಮಾಡಲು ಸರ್ಕಾರ ಬದ್ಧ: ಡಿಸಿಎಂ ಡಾ.ಜಿ.ಪರಮೇಶ್ವರ್

**ಬೆಂಗಳೂರು, ಜೂ.26:** ಚುನಾವಣಾ ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಹುದ್ದೆಗಳನ್ನು ಹಂತಹಂತವಾಗಿ ಭರ್ತಿ ಮಾಡಲು ಸರ್ಕಾರ ಬದ್ಧವಾಗಿದೆ" ಎಂದು ಡಿಸಿಎಂ ತಿಳಿಸಿದರು. ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಒಟ್ಟು 72 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಗೆ ಸರ್ಕಾರ ತೀರ್ಮಾನಿಸಿದೆ ಪ್ರಸ್ತುತ ರಾಜ್ಯದಲ್ಲಿ ಸುಮಾರು ಎರಡುವರೆ ಲಕ್ಷ ಹುದ್ದೆಗಳು ಖಾಲಿ ಇದ್ದು, ವಿವಿಧ ತಾಂತ್ರಿಕ ಕಾರಣಗಳಿಂದ ನೇಮಕಾತಿ ಪ್ರಕ್ರಿಯೆ ವಿಳಂಬವಾಗಿತ್ತು. ಈ ಸಮಸ್ಯೆಯ ಪರಿಹಾರಕ್ಕಾಗಿ ಜಸ್ಟಿಸ್ ನಾಗಮೋಹನ್ ದಾಸ್ ಅವರ ನೇತೃತ್ವದಲ್ಲಿ ಸಮಿತಿ ರಚಿಸಿ, ಕೂಲಂಕುಶವಾಗಿ ಪರಿಶೀಲನೆ ನಡೆಸಲಾಗಿದೆ. ಈ ಹಿಂದೆ 24 ಸಾವಿರ ಹುದ್ದೆಗಳನ್ನು ಮಾತ್ರ ತುಂಬಲು ಸರ್ಕಾರ ಸಿದ್ಧತೆ ಮಾಡಿಕೊಂಡಿತ್ತು. ಆದರೆ, ಮುಖ್ಯಮಂತ್ರಿಗಳ ಬದಲಾವಣೆಯ ನಂತರ ಈ ನಿರ್ಧಾರವನ್ನು ಪುನರ್ ಪರಿಶೀಲಿಸಲಾಗಿದ್ದು, ಈಗ ಒಟ್ಟು 72,000 ಹುದ್ದೆಗಳನ್ನು ತುಂಬಲು ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದೆ. ಶಿಕ್ಷಕರು, ವೈದ್ಯರು ಹಾಗೂ ಎಂಜಿನಿಯರ್‌ಗಳು ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ತಕ್ಷಣವೇ ಅಧಿಸೂಚನೆ ಹೊರಡಿಸಲು ಸೂಚಿಸಲಾಗಿದೆ ನೇಮಕಾತಿ ಪ್ರಕ್ರಿಯೆಯ ಮೇಲ್ವಿಚಾರಣೆಗಾಗಿ ಮುಖ್ಯಮಂತ್ರಿಗಳು ಹಿರಿಯ ಅಧಿಕಾರಿಗಳಾದ ಉಮಾ ಮಹದೇವನ್ ಹಾಗೂ ಗೌರವ್ ಗುಪ್ತ ಅವರನ್ನು ನೇಮಕ ಮಾಡಿದ್ದಾರೆ. ನಿರುದ್ಯೋಗಿ ಯುವಕ-ಯುವತಿಯರ ನಿರಂತರ ಮನವಿಗೆ ಸ್ಪಂದಿಸಿ ಈ ಬೃಹತ್ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುತ್ತಿದೆ ಎಂದು ಡಿಸಿಎಂ ಸ್ಪಷ್ಟಪಡಿಸಿದರು. ಬಿಡದಿ ಟೌನ್‌ಶಿಪ್ ನಿರ್ಮಾಣದ ಕುರಿತು ಉದ್ಭವಿಸಿರುವ ಗೊಂದಲಗಳಿಗೆ ತೆರೆ ಎಳೆದ ಡಿಸಿಎಂ, "ರೈತರನ್ನು ಬಲವಂತವಾಗಿ ಒಕ್ಕಲೆಬ್ಬಿಸಿ ಯಾವುದೇ ಯೋಜನೆಯನ್ನು ಜಾರಿಗೊಳಿಸುವುದಿಲ್ಲ" ಎಂದು ಭರವಸೆ ನೀಡಿದರು. ಭೂಮಿ ಕಳೆದುಕೊಳ್ಳುವ ರೈತರಿಗೆ ಸದ್ಯ ನೀಡಿರುವ ಪರಿಹಾರ ಸಾಲದು ಎಂಬ ಆಕ್ಷೇಪಗಳಿದ್ದರೆ, ಅದನ್ನು ಸರ್ಕಾರ ಮತ್ತೊಮ್ಮೆ ಪರಿಶೀಲಿಸಲಿದೆ. ರೈತರಿಗೆ ನ್ಯಾಯಯುತವಾಗಿ ಹೆಚ್ಚಿನ ಪರಿಹಾರದ ಅಗತ್ಯವಿದ್ದರೆ, ಅದನ್ನು ನೀಡಲು ಸರ್ಕಾರ ಸಿದ್ಧವಿದೆ.



ರೈತರ ಸಂಪೂರ್ಣ ಒಪ್ಪಿಗೆ ಪಡೆದ ನಂತರವೇ ಟೌನ್‌ಶಿಪ್ ಯೋಜನೆಯನ್ನು ಮುಂದುವರಿಸ ಲಾಗುವುದು ಎಂದರು. ಬಿಡದಿಯಲ್ಲಿ ಕೃತಕ ಬುದ್ಧಿಮತ್ತೆ ಹಬ್ ಸ್ಥಾಪನೆಯ ಮಾನದಂಡಗಳ ಬಗ್ಗೆ ಇನ್ನು ಸಂಪೂರ್ಣ ಮಾಹಿತಿ ಲಭ್ಯವಾಗಿಲ್ಲ. ಕೇವಲ AI ಹಬ್‌ಗಾಗಿ ಟೌನ್‌ಶಿಪ್ ಮಾಡುತ್ತಿಲ್ಲ, ಬದಲಿಗೆ ಬೆಂಗಳೂರಿನ ಮೇಲಿನ ಜನಸಂಖ್ಯೆ ಮತ್ತು ಸಂಚಾರ ದಟ್ಟಣೆಯ ಒತ್ತಡವನ್ನು ಕಡಿಮೆ ಮಾಡುವುದು ಇದರ ಮುಖ್ಯ ಉದ್ದೇಶವಾಗಿದೆ. ಬೆಂಗಳೂರಿನಲ್ಲಿ ದಿನನಿತ್ಯ ಟ್ರಾಫಿಕ್ ಸಮಸ್ಯೆ ಹೆಚ್ಚಾಗುತ್ತಿದ್ದು, ನಗರದ ಮೇಲೆ ತೀವ್ರ ಒತ್ತಡವಿದೆ. ಬಿಡದಿ, ಕೋಲಾರ ಹಾಗೂ ತುಮಕೂರಿನಂತಹ ಹತ್ತಿರದ ಪಟ್ಟಣಗಳನ್ನು ಉಪನಗರಗಳಾಗಿ ಅಭಿವೃದ್ಧಿಪಡಿಸಿದರೆ ಬೆಂಗಳೂರಿನ ಮೇಲಿನ ಒತ್ತಡ ಗಣನೀಯವಾಗಿ ಕಡಿಮೆಯಾಗಲಿದೆ ಎಂದು ಡಿಸಿಎಂ ಡಾ. ಜಿ. ಪರಮೇಶ್ವರ್ ತಿಳಿಸಿದರು.

## ಕೆಎಸ್‌ಸಿಎ ಕಾರ್ಯದರ್ಶಿಯಿಂದ 9 ವರ್ಷಗಳ ಅಧಿಕಾರಾವಧಿ ಪೂರ್ಣ: ಬಿಸಿಸಿಐನಿಂದ ಅನರ್ಹತೆ

**ಬೆಂಗಳೂರು ಜೂ.26:** ತೀರ್ಪು ನೀಡಿದ ನಂತರ ಬಿಸಿಸಿಐ ಒಂಬುಡ್ಸ್‌ಮನ್ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ (ಕೆಎಸ್‌ಸಿಎ) ಕಾರ್ಯದರ್ಶಿ ಸಂತೋಷ್ ಮೆನನ್ ಅವರನ್ನು ಅನರ್ಹಗೊಳಿಸಿದ್ದಾರೆ, ಅವರು ಗರಿಷ್ಠ ಒಂಬತ್ತು ವರ್ಷಗಳ ಅಧಿಕಾರಾವಧಿಯನ್ನು ಪೂರ್ಣಗೊಳಿಸಿದ್ದಾರೆ ಎಂದು ಘೋಷಿಸಿ, ಹುದ್ದೆಯನ್ನು ಖಾಲಿ ಎಂದು ಘೋಷಿಸಿ, ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ (ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ) ಮತ್ತು ಕೆಎಸ್‌ಸಿಎಯಿಂದ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಿದ್ದಾರೆ. ಕೆಎಸ್‌ಸಿಎ ಸಾಂಸ್ಥಿಕ ಸದಸ್ಯರಾದ ಡಾಲ್ಫಿನ್ ಕ್ರಿಕೆಟರ್ಸ್ ಸಲ್ಲಿಸಿದ ದೂರಿನ ಮೇರೆಗೆ ಬಿಸಿಸಿಐ ಒಂಬುಡ್ಸ್‌ಮನ್ ಆಗಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಮೂರ್ತಿ (ನಿವೃತ್ತ) ಅರುಣ್ ಮಿಶ್ರಾ ಅವರು ಈ ಆದೇಶವನ್ನು ಹೊರಡಿಸಿದ್ದಾರೆ. ಬಿಸಿಸಿಐ ಮತ್ತು ಕೆಎಸ್‌ಸಿಎ ನಿಯಮಗಳ ಅಡಿಯಲ್ಲಿ ಮೆನನ್ ನಿಗದಿಪಡಿಸಿದ ಅಧಿಕಾರಾವಧಿಯ ಮಿತಿಯನ್ನು ಮೀರಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಆದೇಶಕ್ಕೆ ಪ್ರತಿಕ್ರಿಯಿಸಿದ ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್, ಸಂಘವು ಕಾನೂನು ಪರಿಹಾರಗಳನ್ನು ಅನ್ವೇಷಿಸಲಿದೆ ಎಂದು ಹೇಳಿದರು. ಕೆಎಸ್‌ಸಿಎ ಒಂಬುಡ್ಸ್‌ಮನ್‌ನ ತೀರ್ಪನ್ನು ವಿವರವಾಗಿ ಪರಿಶೀಲಿಸುತ್ತಿದೆ ಮತ್ತು ಲಭ್ಯವಿರುವ ಆಯ್ಕೆಗಳ ಕುರಿತು ಕಾನೂನು ಸಲಹೆಯನ್ನು ಪಡೆಯುತ್ತಿದೆ ಎಂದು ಅವರು ಗಮನಿಸಿದರು.



ಮೆನನ್ ಅವರನ್ನು ಅರ್ಹರೆಂದು ಪರಿಗಣಿಸಿದ ಹಿಂದಿನ ಕೆಎಸ್‌ಸಿಎ ಒಂಬುಡ್ಸ್‌ಮನ್ ಆದೇಶವನ್ನು ಪ್ರಸಾದ್ ಉಲ್ಲೇಖಿಸಿದರು, ಸಂಘರ್ಷದ ತೀರ್ಪುಗಳು ಪರಿಶೀಲನೆಯಲ್ಲಿವೆ ಮತ್ತು ಅವುಗಳ ಕಾನೂನು ಪರಿಣಾಮಗಳನ್ನು ನಿರ್ಣಯಿಸಲಾಗುವುದು ಎಂದು ಹೇಳಿದರು.

## ಗುಜರಿಗೆ ಹೋಗಬೇಕಿದ್ದ 9 ಯುದ್ಧವಿಮಾನಗಳ ಖರೀದಿಗೆ ಮುಂದಾದ ಭಾರತ



**ನವದೆಹಲಿ, ಜೂ. 26:** ಬ್ರಿಟನ್‌ನಲ್ಲಿ ಹರಾಜಾಗಿ ಗುಜರಿ ಸೇರಬೇಕಿದ್ದ 9 ರಾಯಲ್ ಏರ್‌ಫೋರ್ಸ್‌ನ ನಿವೃತ್ತ ಯುದ್ಧವಿಮಾನಗಳನ್ನು ಖರೀದಿಸಲು ಭಾರತ ಸರ್ಕಾರ ಮುಂದಾಗಿದೆ. ಮೇಲ್ನೋಟಕ್ಕೆ ಇದು ಹಳೆಯ ವಿಮಾನಗಳ ಖರೀದಿ ಎನಿಸಿದರೂ, ಇದರ ಹಿಂದೆ ಭಾರತೀಯ ವಾಯುಪಡೆಯ ದೊಡ್ಡ ರಕ್ಷಣಾ ತಂತ್ರಗಾರಿಕೆ ಅಡಗಿದೆ ಎಂದು ಉನ್ನತ ರಕ್ಷಣಾ ಮೂಲಗಳು ಅಸಲಿ ಕಾರಣವನ್ನು ಬಿಚ್ಚಿಟ್ಟಿವೆ. ಭಾರತ ಸರ್ಕಾರ ಈ ನಿರ್ಧಾರ ಕೈಗೊಂಡಿರುವುದು ಈ ವಿಮಾನಗಳನ್ನು ಮತ್ತೆ ಯುದ್ಧ ರಂಗಕ್ಕೆ ಇಳಿಸಲು ಅಲ್ಲ! ಬದಲಿಗೆ, ಭಾರತೀಯ ವಾಯುಪಡೆಯಲ್ಲಿ ಸದ್ಯ ಸಕ್ರಿಯವಾಗಿರುವ 120 ಜಾಗ್ವಾರ್ (ಲೋಕಲ್ ಹೆಸರು "ಶಂಶೇರ್") ಯುದ್ಧವಿಮಾನಗಳ ಜೀವಿತಾವಧಿಯನ್ನು ವಿಸ್ತರಿಸಲು. ಜಾಗತಿಕವಾಗಿ ಜಾಗ್ವಾರ್ ವಿಮಾನಗಳ ತಯಾರಿಕೆಯನ್ನು ಸಂಪೂರ್ಣವಾಗಿ ನಿಲ್ಲಿಸಲಾಗಿದೆ. ಹೀಗಾಗಿ ಮಾರುಕಟ್ಟೆಯಲ್ಲಿ ಅವುಗಳ ಇಂಜಿನ್, ಏವಿಯಾನಿಕ್ಸ್ ಮತ್ತು ಹೈಡ್ರಾಲಿಕ್ಸ್‌ನಂತಹ ಪ್ರಮುಖ ಬಿಡಿಭಾಗಗಳು ಎಲ್ಲೂ ಸಿಗುತ್ತಿಲ್ಲ. ಬ್ರಿಟನ್‌ನ ಈ 9 ವಿಮಾನಗಳನ್ನು ಭಾರತಕ್ಕೆ ತಂದು, ಅವುಗಳನ್ನು ಬಿಚ್ಚಿ, ಅವುಗಳೊಳಗಿರುವ ಬಿಡಿಭಾಗಗಳನ್ನು ಭಾರತದ ಸಕ್ರಿಯ 6 ಜಾಗ್ವಾರ್ ಸ್ಕ್ವಾಡ್ರನ್‌ಗಳ ದುರಸ್ತಿಗೆ ಬಳಸಿಕೊಳ್ಳಲಾಗುತ್ತದೆ. ಭಾರತೀಯ ವಾಯುಪಡೆಯಲ್ಲಿ ಯುದ್ಧವಿಮಾನಗಳ ಕೊರತೆ ತೀವ್ರವಾಗಿದೆ. ಇರಬೇಕಾದ 42 ಸ್ಕ್ವಾಡ್ರನ್‌ಗಳ ಬದಲಿಗೆ ಸದ್ಯ ಕೇವಲ 29 ಸ್ಕ್ವಾಡ್ರನ್‌ಗಳು ಮಾತ್ರ ಸಕ್ರಿಯವಾಗಿವೆ. ಸ್ವದೇಶಿ 'ತೇಜಸ್ ಎಂಕ್-1ಎ' ವಿಮಾನಗಳ ಪೂರೈಕೆಯಲ್ಲಿ ವಿಳಂಬವಾಗುತ್ತಿರುವುದರಿಂದ ಹಾಗೂ ಫ್ರಾನ್ಸ್‌ನಿಂದ ಬರಬೇಕಾದ 'ರಫೇಲ್' ವಿಮಾನಗಳ ಒಪ್ಪಂದ ಇನ್ನು ಅಂತಿಮವಾಗದ ಹಿನ್ನೆಲೆಯಲ್ಲಿ, ಹೊಸ ವಿಮಾನಗಳು ಬರುವವರೆಗೆ ಜಗತ್ತಿನ ಏಕೈಕ ಜಾಗ್ವಾರ್ ಆಪರೇಟರ್ ಆಗಿರುವ ಭಾರತಕ್ಕೆ, ತನ್ನಲ್ಲಿರುವ "ಶಂಶೇರ್" ಅನ್ನು ಗಟ್ಟಿಯಾಗಿಟ್ಟುಕೊಳ್ಳಲು ಬ್ರಿಟನ್‌ನ ಈ ವಿಮಾನಗಳು ಸಂಜೀವಿನಿಯಾಗಲಿವೆ

## ಬೀಜಿಂಗ್‌ನ ಎತ್ತರದ ಕಟ್ಟಡಕ್ಕೆ ಸಣ್ಣ ವಿಮಾನ ಡಿಕ್ಕಿ

**ಬೀಜಿಂಗ್, ಜೂ.26:** ಚೀನಾದ ರಾಜಧಾನಿ ಬೀಜಿಂಗ್‌ನಲ್ಲಿ ಶುಕ್ರವಾರ ಮಧ್ಯಾಹ್ನ ಸಂಭವಿಸಿದ ಆಘಾತಕಾರಿ ಘಟನೆಯಲ್ಲಿ, ಒಂದು ಸಣ್ಣ ವಿಮಾನ ನಗರದ ಅತಿ ಎತ್ತರದ ಕಟ್ಟಡಕ್ಕೆ ಡಿಕ್ಕಿ ಹೊಡೆದ ಬಗ್ಗೆ ವರದಿಯಾಗಿದೆ. ಈವರೆಗೆ ಸಾವು-ನೋವುಗಳ ಕುರಿತು ಅಧಿಕೃತ ಮಾಹಿತಿ ಹೊರಬಿದ್ದಿಲ್ಲ. ಸಿಎನ್‌ಎನ್ ವರದಿ ಪ್ರಕಾರ, ಗಗನಚುಂಬಿ ಕಟ್ಟಡದಿಂದ ಜನರನ್ನು ತುರ್ತುವಾಗಿ ಹೊರಗೆ ಸ್ಥಳಾಂತರಿಸಲಾಗಿದ್ದು, ಕಟ್ಟಡದ ಪ್ರವೇಶದ್ವಾರದ ಬಳಿ ಅಗ್ನಿಶಾಮಕ ವಾಹನಗಳು, ಪೊಲೀಸ್ ವಾಹನಗಳು ಹಾಗೂ ಆಂಬ್ಯುಲೆನ್ಸ್‌ಗಳನ್ನು ನಿಯೋಜಿಸಲಾಗಿತ್ತು. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ ವಿಡಿಯೊಗಳಲ್ಲಿ, 109 ಮಹಡಿಗಳಿರುವ ಸಿಐಟಿಐಸಿ ಟವರ್ (ಚೈನಾ ಝುನ್ ಎಂದೂ ಕರೆಯಲಾಗುತ್ತದೆ) ಕಟ್ಟಡದಿಂದ ಅವಶೇಷಗಳು ಕೆಳಗೆ ಬೀಳುತ್ತಿರುವುದು ಕಂಡುಬಂದಿದೆ. ಜೊತೆಗೆ ವಿಮಾನದ ಹಿಂಭಾಗದ ತುಂಡು ಹಾಗೂ ಒಡೆದ ಟ್ಯಾಕ್ಸಿಯ ಗಾಜು ರಸ್ತೆಯಲ್ಲಿ ಬಿದ್ದಿರುವ ದೃಶ್ಯಗಳೂ ವೈರಲ್ ಆಗಿವೆ. ಪೂರ್ವ ಬೀಜಿಂಗ್‌ನಲ್ಲಿರುವ ಈ 108 ಮಹಡಿಗಳ ಕಟ್ಟಡವು ಸರ್ಕಾರಿ ಸ್ವಾಮ್ಯದ ಸಿಐಟಿಐಸಿ ಗ್ರೂಪ್‌ನ ಪ್ರಧಾನ ಕಚೇರಿಯಾಗಿದ್ದು, ಇದು ಬೀಜಿಂಗ್‌ನ ಅತಿ ಎತ್ತರದ ಕಟ್ಟಡವಾಗಿದೆ. ಕಟ್ಟಡದ ಮೇಲಿನ ಮಹಡಿಗಳಲ್ಲಿದ್ದ ಎರಡು ಗಾಜಿನ ಫಲಕಗಳು ಹಾನಿಗೊಳಗಾಗಿವೆ. ಈ ಘಟನೆ ಕುರಿತು ಚೀನಾ ಸರ್ಕಾರದ ಅಧಿಕಾರಿಗಳಿಂದ ತಕ್ಷಣದ ಪ್ರತಿಕ್ರಿಯೆ ಬಂದಿಲ್ಲ.

## ಮುತ್ತತ್ತಿಯಲ್ಲಿ ಬ್ಯಾರಿಕೇಡ್ ಅಳವಡಿಕೆಗೆ ಜಿಲ್ಲಾಧಿಕಾರಿಗೆ ರಾಮಲಿಂಗಾರೆಡ್ಡಿ ಸೂಚನೆ

**ಬೆಂಗಳೂರು ಜೂ.26:** ಬೆಂಗಳೂರು-ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕಿನ ಮುತ್ತತ್ತಿಯ ಕಾವೇರಿ ನದಿಯಲ್ಲಿ ಇನ್ನು ಮುಂದೆ ಸಾರ್ವಜನಿಕರಿಗೆ ಅನುಕೂಲ ವಾಗುವಂತೆ ಬ್ಯಾರಿಕೇಡ್ ಅಳವಡಿಸಬೇಕೆಂದು ಜಿಲ್ಲಾ ಉಸ್ತುವಾರಿ ಹಾಗೂ ಜಲ ಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ಜಿಲ್ಲಾಧಿಕಾರಿಳಿಗೆ ಸೂಚಿಸಿದರು. ಎರಡು ದಿನಗಳ ಹಿಂದೆ ಮುತ್ತತ್ತಿಯಲ್ಲಿ ಈಜಲು ಹೋಗಿ ಒಂದೇ ಕುಟುಂಬದ ಐವರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲಾಧಿಕಾರಿ ಅವರಿಗೆ ದೂರವಾಣಿ ಮೂಲಕ ಮಾತನಾಡಿದ ರಾಮಲಿಂಗಾರೆಡ್ಡಿ ಅವರು ಭವಿಷ್ಯದಲ್ಲಿ ಇಂಥ ಅವಘಡಗಳು ಸಂಭವಿಸದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ನಿರ್ದೇಶನ ನೀಡಿದರು. ನದಿಯಲ್ಲಿ ಸಾರ್ವಜನಿಕರು ಈಜಲು ನಿರ್ದಿಷ್ಟವಾದ ಸ್ಥಳವನ್ನು ಗುರುತಿಸಿ ಅಲ್ಲಿ ಬ್ಯಾರಿಕೇಡ್‌ಗಳನ್ನು ಅಳವಡಿಸಬೇಕು. ಅಲ್ಲದೆ ಇದು ಸುರಕ್ಷಿತ ವಲಯ ಎಂದು ಸಾರ್ವ ಜನಿಕರಿಗೆ ಕಾಣುವಂತೆ ಫಲಕಗಳನ್ನು ಹಾಕಬೇಕು. ಇದನ್ನು ಬಿಟ್ಟು ಎಲ್ಲಿಯೂ ಸಾರ್ವಜನಿಕರಿಗೆ ಈಜಲು ಅನುಮತಿ ನೀಡ ಬಾರದೆಂದು ಕಟ್ಟುನಿಟ್ಟಿನ ಸೂಚನೆ ಕೊಟ್ಟರು. ಪ್ರತಿವರ್ಷ ಮುತ್ತತ್ತಿಯಲ್ಲಿ ಈಜಲು ಹೋಗಿ ಹಲವಾರು ಜನರು ಸಾವನ್ನಪ್ಪುತ್ತಾರೆ. ಇದು



ಅತ್ಯಂತ ನೋವಿನ ಸಂಗತಿ. ಮುಂದೆ ಇಂಥ ಅವಘಡಗಳು ಸಂಭವಿಸಬಾರದು. ಇಂತಹ ಸ್ಥಳಗಳಲ್ಲಿ ಸಾಧ್ಯವಾದರೆ ಗೈಡ್‌ಗಳನ್ನು ನಿಯೋಜನೆ ಮಾಡಿ ಎಂದು ಸೂಚನೆ ನೀಡಿದ್ದಾರೆ.

ಇದೇ ಸಂದರ್ಭದಲ್ಲಿ ಈಜಲು ಹೋಗಿ ಸಾವನ್ನಪ್ಪಿದ ಕುಟುಂಬದವರಿಗೆ ಸಾಂತ್ವಾನ ಹೇಳಿದ ಸಚಿವ ರಾಮಲಿಂಗಾರೆಡ್ಡಿ ಅವರು, ಸದ್ಯದಲ್ಲೇ ಜಿಲ್ಲೆಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕನ ಮಾಡುವುದಾಗಿ ತಿಳಿಸಿದ್ದಾರೆ.

## ಎಲಿವೇಟೆಡ್ ರಸ್ತೆಗಳ ನಿರ್ಮಾಣಕ್ಕೆ ಆಸ್ತಿ ತೆರಿಗೆ ಹೆಚ್ಚಳ: ಆರ್.ಅಶೋಕ್ ಅಸಮಾಧಾನ

**ಬೆಂಗಳೂರು ಜೂ.26 :** ಎಲಿವೇಟೆಡ್ ರಸ್ತೆಗಳ ನಿರ್ಮಾಣಕ್ಕೆ ಆಸ್ತಿ ತೆರಿಗೆ ಹೆಚ್ಚಿಸುವ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡರ ನಿರ್ಧಾರಕ್ಕೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು ಕ್ಯಾಮೆರಾ ಮುಂದೆ ಅಧಿಕಾರಿಗಳನ್ನು ಗದರಿಸುವ ರಿಲೀವ್ಸ್ ಮಂತ್ರಿ ಪರದೆ ಹಿಂದೆ ಜನಸಾಮಾನ್ಯರ ಜೇಬಿಗೆ ಕತ್ತರಿ ಹಾಕುವ ತೆರಿಗೆ ಹಾಕಲು ಹೊರಟಿದ್ದಾರೆ ಎಂದು ಟೀಕಿಸಿ ಇದು ಹೊಸ ಬೆಂಗಳೂರು ಅಭಿವೃದ್ಧಿ ಮಂತ್ರಿ ಕೃಷ್ಣ ಬೈರೇಗೌಡರ ನಿಜವಾದ ಮುಖ ಎಂದು ಲೇವಡಿ ಮಾಡಿದ್ದಾರೆ.

**ಹಳೇಮದ್ರಾಸ್ ರಸ್ತೆ ಎಲಿವೇಟೆಡ್**

"ರಸ್ತೆ ಆದ ಮೇಲೆ ನಿಮ್ಮ ಆಸ್ತಿಯ ಬೆಲೆ ಹೆಚ್ಚಾಗಬಹುದು, ಅಂಗಡಿಗಳ ವ್ಯಾಪಾರ ಹೆಚ್ಚಾಗ ಬಹುದು. ಆದ್ದರಿಂದ ಹೆಚ್ಚಿನ ತೆರಿಗೆ ಕಟ್ಟಿ!" ಇನ್ನೂ ಆದಾಯ ಇಲ್ಲ. ಇನ್ನೂ ಲಾಭ ಇಲ್ಲ. ಆಸ್ತಿ ಮಾರಿಲ್ಲ, ಬಾಡಿಗೆ ಹೆಚ್ಚಿಸಿಲ್ಲ. ಆದರೂ ತೆರಿಗೆ ಮಾತ್ರ ಈಗಲೇ ಕಟ್ಟಬೇಕು ಇದಕ್ಕೆ ಆಸ್ತಿ ತೆರಿಗೆ ಎಂದು ಹೆಸರಿಡುವುದೂ ತಪ್ಪು, ಇದರ ನಿಜವಾದ ಹೆಸರು ಆಂಟಿಸಿಪೇಟರಿ ತೆರಿಗೆ ಭವಿಷ್ಯದಲ್ಲಿ ಆಗಬಹುದಾದ ಲಾಭದ ಮೇಲೆ, ಇಂದೇ ಹೇರುವ ಊಹಾತ್ಮಕ ತೆರಿಗೆ. ಇಂದು ಎಲಿವೇಟೆಡ್ ರಸ್ತೆಗೆ ಆಂಟಿ ಸಿಪೇಟರಿ ತೆರಿಗೆ ". ನಾಳೆ ಮೆಟ್ರೋ ಬಂದರೆ "Metro ಪ್ರೊಕ್ಸಿಮಿಟಿ ತೆರಿಗೆ ಫ್ಲೈಓವರ್ ತೆರಿಗೆ ಬಸ್ ನಿಲ್ದಾಣ ಬಂದರೆ "ಕನೆಕ್ಟಿವಿಟಿ ತೆರಿಗೆ ಈ ತರ್ಕವನ್ನು ಒಪ್ಪಿಕೊಂಡರೆ, ಬೆಂಗಳೂರಿನ ಪ್ರತಿ ಮೂಲಸೌಕರ್ಯ ಯೋಜನೆಯೂ ಜನರ ಮೇಲೆ ಹೊಸ ತೆರಿಗೆಯ ಬರೆ ಎಳೆಯುತ್ತದೆ ಎಂದಿದ್ದಾರೆ

ಅಭಿವೃದ್ಧಿ ಕಾರ್ಯಗಳಿಗೆ ಸಂಪನ್ಮೂಲ ಹೊಂದಿಸುವುದು ಸರ್ಕಾರದ ಜವಾಬ್ದಾರಿ.

ಆದರೆ ಆ ಜವಾಬ್ದಾರಿ ನಿಭಾಯಿಸಲಾಗದೆ, ಇನ್ನೂ ಸಂಭವಿಸಿಲ್ಲದ ಲಾಭದ ಮೇಲೆ ಮುಂಗಡ ತೆರಿಗೆ



ವಿಧಿಸುವುದು ಆಡಳಿತ ವೈಫಲ್ಯವನ್ನು ಜನರ ಜೇಬಿನಿಂದ ಸರಿದೂಗಿಸುವ ಹಗಲು ದರೋಡೆ ಎಂದು ಟೀಕಿಸಿದ್ದಾರೆ. ಕೃಷ್ಣ ಬೈರೇಗೌಡ ಅವರೇ, ರೀಲ್ಸ್‌ನಲ್ಲಿ ಅಧಿಕಾರಿಗಳ ಮೇಲೆ ಕೂಗಾಡುವ ಬದಲು, ಒಂದು ಸಲ ಜನರ ಮುಂದೆ ನಿಂತು ಆತ್ಮಸಾಕ್ಷಿಯ ಉತ್ತರ ಕೊಡಿ-ಈ ಆಂಟಿ ಸಿಪಿಟರಿ ತೆರಿಗೆ ಎಷ್ಟು? ಯಾವಾಗಿನಿಂದ ಇದಕ್ಕೆ ಜನರ ಒಪ್ಪಿಗೆ ಕೇಳಿದ್ದೀರಾ ಎಂದು ಅಶೋಕ್ ಪ್ರಶ್ನಿಸಿದ್ದಾರೆ.

## ವಿದ್ಯುತ್ ಸುರಕ್ಷತೆ ಕುರಿತ ಜಾಗೃತಿಗೆ ಎಸ್ಕಾಂಗಳಿಂದ ಆರ್ಥಿಕ ನೆರವು: ಗೌರವ್ ಗುಪ್ತ

# ಜಾಗೃತಿ ಸಪ್ತಾಹಕ್ಕೆ ಎಸ್ಕಾಂಗಳಿಂದ ಪ್ರತಿ ವಿಭಾಗಕ್ಕೆ 1 ಲಕ್ಷ ಪಾವತಿ

**ಬೆಂಗಳೂರು, ಜೂ. 26:** ವಿದ್ಯುತ್ ಬಳಕೆ ಹೆಚ್ಚಿದಂತೆ ಸುರಕ್ಷತೆ ಕುರಿತು ಜಾಗೃತಿಯೂ ಹೆಚ್ಚಾಗಬೇಕಿದ್ದು, ಈ ನಿಟ್ಟಿನಲ್ಲಿ ವಿದ್ಯುತ್ ಪರಿವೀಕ್ಷಣಾಲಯದಿಂದ ಹಮ್ಮಿಕೊಂಡಿರುವ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹಕ್ಕೆ ವಿದ್ಯುತ್ ಸರಬರಾಜು ಕಂಪನಿಗಳಿಂದ ವಿಭಾಗಾವಾರು 1 ಲಕ್ಷ ರೂ. ನೀಡುವುದಾಗಿ ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಹೇಳಿದ್ದಾರೆ. ಇಂಧನ ಇಲಾಖೆಯ ವಿದ್ಯುತ್ ಪರಿ ವೀಕ್ಷಣಾಲಯದ ವತಿಯಿಂದ ಆಯೋಜಿಸಿರುವ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹವನ್ನು ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವದಲ್ಲಿ ಅತಿ ಹೆಚ್ಚು ಬಳಕೆಯಾಗುವ ಇಂಧನ ವಿದ್ಯುತ್. ವಿದ್ಯುತ್ ಬಳಕೆ ಅತ್ಯಂತ ವೇಗವಾಗಿ ವಿಸ್ತರಣೆಗೊಳ್ಳುತ್ತಿದ್ದು, ಅದಕ್ಕೆ ತಕ್ಕಂತೆ ಜಾಗೃತಿಯೂ ಹೆಚ್ಚಬೇಕು. ಅದಕ್ಕಾಗಿ ಸಾಮೂಹಿಕ ಜವಾಬ್ದಾರಿಯೊಂದಿಗೆ



ಕಾರ್ಯ ನಿರ್ವಹಿಸಬೇಕು," ಎಂದರು. "ವಿದ್ಯುತ್ ಪರಿವೀಕ್ಷಣಾಲಯದಿಂದ ಆಯೋಜಿಸಿರುವ ಈ ಸುರಕ್ಷತಾ ಸಪ್ತಾಹವನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕೈಗೊಳ್ಳಲು ರಾಜ್ಯದ ಎಲ್ಲಾ ಎಸ್ಕಾಂಗಳಿಂದ ಪ್ರತಿ ವಿಭಾಗಾವಾರು 1 ಲಕ್ಷ ರೂ. ಒದಗಿಸಲಾಗುವುದು," ಎಂದು ಸಲಹೆ ಮಾಡಿದರು. "ವಿದ್ಯುತ್ ಅವಘಡಗಳನ್ನು ತಪ್ಪಿಸಲು ಜಾಗೃತಿ ಜತೆಗೆ ಮುಂಜಾಗ್ರತಾ ಕ್ರಮಗಳನ್ನೂ ಕೈಗೊಳ್ಳಬೇಕಾಗುತ್ತದೆ. ಇಂಧನ ಸಚಿವ ಕೆ.ಜೆ.ಜಾರ್ಜ್ ಅವರ ಮಾರ್ಗದರ್ಶನದಲ್ಲಿ ಅದಕ್ಕಾಗಿ ಅಗತ್ಯ ಕಾರ್ಯಯೋಜನೆಗಳನ್ನು ರೂಪಿಸಲಾಗು ವುದು," ಎಂದು ತಿಳಿಸಿದರು. "ರಾಜ್ಯದಲ್ಲಿ ಸರ್ಕಾರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿರುವ ಸಮಸ್ಯೆಗಳನ್ನು ಇತ್ಯರ್ಥಗೊಳಿಸಿ ಪ್ರಕ್ರಿಯೆಯನ್ನು ವ್ಯವಸ್ಥಿತಗೊಳಿಸುವ ಮೂಲಕ ಹೊಸ ನೇಮಕಾತಿಗೆ ಈಗಿನ ಸರ್ಕಾರ ಒತ್ತು ನೀಡಿದೆ. ಸರ್ಕಾರಿ ಇಲಾಖೆಗಳು ಮಾತ್ರವಲ್ಲಗದೆ, ನಿಗಮ- ಮಂಡಳಿಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಮುಖ್ಯಮಂತ್ರಿಗಳಾದ ಡಿ. ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದರು. ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಶಿವಶಂಕರ ಎನ್. ಮಾತನಾಡಿ, "ವಿದ್ಯುತ್ ಸುರಕ್ಷತೆ ಕುರಿತಂತೆ ಸಾರ್ವಜನಿಕರು, ಇಂಧನ ಇಲಾಖೆ ಸಿಬ್ಬಂದಿ ಮತ್ತು ಗುತ್ತಿಗೆದಾರರಲ್ಲಿ ಮೊದಲು ಜಾಗೃತಿ ಮೂಡಿಸಬೇಕಿದೆ. ಈ ನಿಟ್ಟಿನಲ್ಲಿ ವಿದ್ಯುತ್ ಪರಿವೀಕ್ಷಣಾಲಯದ ಅಧಿಕಾರಿಗಳು ಜಿಲ್ಲಾಡಳಿತದ ಜತೆಗೆ ನಿಕಟ ಸಂಪರ್ಕದಲ್ಲಿದ್ದು ಕೆಲಸ ಮಾಡಬೇಕು," ಎಂದು ಸಲಹೆ ಮಾಡಿದರು. ಇದೇ ವೇಳೆ ವಿದ್ಯುತ್ ಸುರಕ್ಷತೆ ಕುರಿತಂತೆ ಪ್ರಮಾಣ ಬೋಧಿಸಲಾಯಿತು. ಜತೆಗೆ ವಿದ್ಯುತ್ ಸುರಕ್ಷತಾ ಸಪ್ತಾಹದ ವೇಳೆ ಸಾರ್ವಜನಿಕರಿಗೆ ಜಾಗೃತಿ ಸಂದೇಶ ಸಾರಲಿರುವ ಎಲ್‌ಇಡಿ ಪರದೆ ಇರುವ ವಾಹನಗಳಿಗೆ ಚಾಲನೆ ನೀಡಲಾಯಿತು.

ವಿದ್ಯುತ್ ಪರಿವೀಕ್ಷಣಾಲಯದ ಮುಖ್ಯ ವಿದ್ಯುತ್ ಪರಿವೀಕ್ಷಣಾಧಿಕಾರಿ ಡಾ. ತೀತಿರ ಎನ್. ಅಪ್ಪಚ್ಚು, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ, ಕೆಪಿಟಿಸಿಎಲ್ ನಿರ್ದೇಶಕ (ಕಾರ್ಯಾಚರಣೆ) ವಿಶ್ವನಾಥ್ ನಾಯಕ್, ರಾಜ್ಯ ಮಾನ್ಯತೆ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ಅಧ್ಯಕ್ಷ ಸಿ.ರಮೇಶ್, ವಿದ್ಯುತ್ ಪರಿ ವೀಕ್ಷಣಾಲಯ ವಿದ್ಯುತ್ ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಎಚ್.ಎಸ್.ವೆಂಕಟೇಶ್ ಮತ್ತಿತರರು ಪಾಲ್ಗೊಂಡಿದ್ದರು.

# ಒಳ್ಳೆಯ ಮಳೆ-ಬೆಳೆ ಆಗಲಿ ಎಂದು ಧರ್ಮಸ್ಥಳದಲ್ಲಿ ವಿಜಯೇಂದ್ರ ಪ್ರಾರ್ಥನೆ

**ಮುಂಬಯಿ, ಜೂ.26:** ರಾಜ್ಯದಲ್ಲಿ ಭೀಕರ ಬರಗಾಲದ ಸನ್ನಿವೇಶವಿದ್ದು ಇದೆಲ್ಲ ನಿವಾರಣೆಯಾಗಿ ಒಳ್ಳೆಯ ಮಳೆ-ಬೆಳೆ ಆಗಲಿ. ಕೃಷಿ ಉತ್ಪನ್ನಗಳಿಗೆ ಉತ್ತಮ ಬೆಲೆ ಸಿಗಲಿ. ಜನರ ಬದುಕು ಹಸನಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇನೆ ಎಂದು ಬಿ.ಜೆ.ಪಿ. ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಹೇಳಿದರು.

ಅವರು ಧರ್ಮಸ್ಥಳದಲ್ಲಿ ದೇವರ ದರ್ಶನ ಮಾಡಿ, ವಿಶೇಷ ಪೂಜೆಯೊಂದಿಗೆ ಪ್ರಾರ್ಥನೆ ಸಲ್ಲಿಸಿದರು. ಬಳಿಕ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆಯವರನ್ನು ಭೇಟಿಯಾಗಿ ಆಶೀರ್ವಾದ ಪಡೆದರು. ನಂತರ ಶ್ರೀಸನ್ನಿಧಿ ಅತಿಥಿಗೃಹದಲ್ಲಿ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.ಕಳೆದ ನಾಲ್ಕು ದಿನಗಳಲ್ಲಿ ದೆಹಲಿಯಲ್ಲಿ ಪಕ್ಷದ ವರಿಷ್ಠರನ್ನು ಭೇಟಿಯಾಗಿ ಮಾತುಕತೆ ನಡೆಸಿ ಮಂಗಳೂರು ಮೂಲಕ ನೇರವಾಗಿ ಧರ್ಮಸ್ಥಳಕ್ಕೆ ಬಂದಿದ್ದೇನೆ.

ಹಿಂದೂಗಳ ರಕ್ಷಣೆ ಮಾಡುವ ಬಿ.ಜೆ.ಪಿ. ನೇತೃತ್ವದ ಒಳ್ಳೆಯ ಸರ್ಕಾರ ಆಡಳಿತಕ್ಕೆ ಬರಲಿ ಎಂದು ಹಾಗೂ ರಾಜ್ಯದ ಸರ್ವತೋಮುಖ ಪ್ರಗತಿಯಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇವೆ. ವಿಧಾನಪರಿಷತ್ ಚುನಾವಣೆಯಲ್ಲಿ ನಮ್ಮ ಇಬ್ಬರು ಅಭ್ಯರ್ಥಿಗಳು ಗೆಲುವು ಪಡೆದಿದ್ದಾರೆ. ಚುನಾವಣೆಯಲ್ಲಿ ಅಡ್ಡಮತದಾನದ ಬಗ್ಗೆ ಲಕ್ಷಾಂತರ ಮಂದಿ ಪಕ್ಷದ ಕಾರ್ಯಕರ್ತರು ನೋವನ್ನು ಅನುಭವಿಸಿದ್ದಾರೆ. ಇದು ಬೇರೆ ಬೇರೆ ಚರ್ಚೆಗಳಿಗೆ ಗ್ರಾಸವಾಗಿತ್ತು. ತಾನು ಧರ್ಮಸ್ಥಳದ ಅಭಿಮಾನಿ ಭಕ್ತನಾಗಿದ್ದು, ಯಾವುದೇ ನೋವಾದಾಗ ಇಲ್ಲಿಗೆ ಬಂದು ಪರಿಹರಿಸಿಕೊಳ್ಳುತ್ತೇನೆ.

ಧರ್ಮಸ್ಥಳದಲ್ಲಿ ಶಾಸಕಾಂಗ ಸಭೆ ನಡೆಯಬೇಕು. ಸತ್ಯಾಸತ್ಯತೆ ಹೊರಬರಬೇಕು ಎಂದು ಹೇಳಿದ್ದೆ, ಹಿರಿಯರ ಸಲಹೆಯಂತೆ ದೆಹಲಿಗೆ ಹೋಗಿ ವರಿಷ್ಠರ ಜೊತೆ ಮಾತನಾಡಿದ್ದೇನೆ. ಅವರ ಸಲಹೆಯಂತೆ ನಿರ್ಧಾರ ಕೈಬಿಟ್ಟು ದೇವರ ಭಕ್ತನಾಗಿ ಪ್ರಾರ್ಥನೆ ಸಲ್ಲಿಸಿದ್ದೇನೆ. ಅಡ್ಡ




ಮತದಾನ ಆದಾಗ ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ತನ್ನ ನಡುವಿನ ಆತ್ಮೀಯತೆ ಹಾಗೂ ವ್ಯವಹಾರದ ಬಗ್ಗೆ ಸಾಕಷ್ಟು ಅಪಪ್ರಚಾರವಾಗಿತ್ತು. ತಮ್ಮ ಮಧ್ಯೆ ಯಾವುದೇ ಅವ್ಯವಹಾರ, ಅಕ್ರಮ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದ ವಿಜಯೇಂದ್ರ, ಮುಖ್ಯಮಂತ್ರಿ ಹಾಗೂ ಕೆ.ಪಿ.ಸಿ.ಸಿ. ಅಧ್ಯಕ್ಷರಾಗಿ ಅವರಿಗೆ ಕೊಡಬೇಕಾದ ಗೌರವವನ್ನು ನಾನು ಕೊಟ್ಟಿದ್ದೇನೆ. ಯಾರು ಅಪಪ್ರಚಾರ ಮಾಡಿದ್ದಾರೊ ಅವರಿಗೆ ದೇವರು ಒಳ್ಳೆದು ಮಾಡಲಿ ಎಂದು ಪ್ರಾರ್ಥಿಸಿದರು.

ರಾಜ್ಯದಲ್ಲಿ ಜನರ ಅನೇಕ ಸಮಸ್ಯೆಗಳು ತಾಂಡವವಾಡುತ್ತಿವೆ. ಭ್ರಷ್ಟ ಕಾಂಗ್ರೆಸ್ ಸರ್ಕಾರದಲ್ಲಿ ಅನ್ಯಾಯ, ಅವ್ಯವಹಾರಗಳು ಅತಿಯಾಗುತ್ತಿವೆ. ಬಿ.ಜೆ.ಪಿ. ಪಕ್ಷದ ಬಗ್ಗೆ ತನಗೆ ಭರವಸೆ ಇದ್ದು ಜನರು ಹಾಗೂ ಬಡವರ ವಿರೋಧಿ ಕಾಂಗ್ರೆಸ್ ಸರ್ಕಾರವನ್ನು ಬುಡ ಸಮೇತ ಕಿತ್ತು ಹಾಕಿ, ಬಿ.ಜೆ.ಪಿ. ಸರ್ಕಾರ ಮತ್ತೆ ಆಡಳಿತಕ್ಕೆ ಬರಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಹಿಂದೆ 17 ಶಾಸಕರು ಯಡಿಯೂರಪ್ಪ ಅವರ ನಾಯಕತ್ವದಲ್ಲಿ ವಿಶ್ವಾಸವಿಟ್ಟು ಪಕ್ಷ ತೊರೆದು ಬಂದಿದ್ದರು. ಆಗ ಒಳ್ಳೆಯ ಸರ್ಕಾರ ಇತ್ತು. ಈಶ್ವರಪ್ಪ ಮರೆತಿರಬಹುದು. ಅನೇಕ ಕಾರ್ಯಕರ್ತರ ಹತ್ಯೆಯಾಗಿತ್ತು. ಅನೇಕರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿ ಬೆದರಿಕೆ ಹಾಕಲಾಗಿತ್ತು. ಅವರು ಗ್ರಾಮೀಣಾಭಿವೃದ್ಧಿ ಸಚಿವರಾಗಿದ್ದಾಗ ಒಳ್ಳೆ ಕೆಲಸ ಮಾಡಿದ್ದರು. ಆಗ ಗುತ್ತಿಗೆದಾರನ ಹತ್ಯೆಯಾಗಿತ್ತು ಎಂದು ನೆನಪಿಸಿದರು. ಈಶ್ವರಪ್ಪ ಶಾಸಕರೂ ಅಲ್ಲ. ಪಕ್ಷದಲ್ಲಿಯೂ ಇಲ್ಲ. ಹಾಗಾಗಿ ಅವರ ಹೇಳಿಕೆ ಮಹತ್ವ ನೀಡುತ್ತಿಲ್ಲ ಎಂದರು.

ಕಾಂಗ್ರೆಸ್‌ಪಕ್ಷ ಹೆಸರುಗಳನ್ನು ತೇಲಿ ಬಿಡುತ್ತಾರೆ. ಇದರಿಂದ ಶಾಸಕರುಗಳಿಗೆ ಬೇಸರವಾಗಿದೆ. ಪಕ್ಷಕ್ಕೆ ದ್ರೋಹ ಬಗೆದವರು ಯಾರು ಎಂಬ ಸತ್ಯ ಇಂದಲ್ಲ ನಾಳೆ ಹೊರ ಬರಲಿದೆ ಎಂದು ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿ ತಾನು ಎಂದೂ ಪಕ್ಷಕ್ಕೆ ದ್ರೋಹ ಮಾಡುವುದಿಲ್ಲ ಎಂದು ಭರವಸೆ ನೀಡಿದರು. ಕೇಂದ್ರದಲ್ಲಿ ತಮ್ಮ ಪಕ್ಷದ ಸರ್ಕಾರ ಇರುವುದರಿಂದ ಸತ್ಯ ಸದ್ಯದಲ್ಲಿಯೇ ಹೊರಬರಲಿದೆ ಎಂದರು.

ಅನಗತ್ಯ ಚರ್ಚೆ ನಿಲ್ಲಿಸಿ ಮುಂದೆ ರಾಜ್ಯಾದ್ಯಂತ ಪ್ರವಾಸ ಮಾಡಿ ತಾನು ಬಿ.ಜೆ.ಪಿ. ಪಕ್ಷದ ಸಂಘಟನೆ ಮತ್ತು ಬಲವರ್ಧನೆ ಮಾಡುವುದಾಗಿ ತಿಳಿಸಿದರು. ಎಸ್.ಟಿ. ಸೋಮಶೇಖರ್ ಗೊಂದಲದ ಹೇಳಿಕೆಗಳನ್ನು ನೀಡುವ ಮೂಲಕ ಸ್ವರಕ್ಷಣೆಯ ಪ್ರಯತ್ನ ಮಾಡುತ್ತಿದ್ದಾರೆ ಎಂದರು. ನನ್ನ ಬಗ್ಗೆ ಏನೇ ಅಪಪ್ರಚಾರ ಮಾಡಿದರೂ ನನಗೆಲ್ಲಾ ಆಕ್ಷೇಪವಿಲ್ಲ. ಹಿರಿಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷದ ಸಂಘಟನೆ ಮಾಡುತ್ತೇನೆ ಎಂದು ಹೇಳಿದರು.

ಡಿಕೆಶಿ ಬಹುಮುಖ ಪ್ರತಿಭೆಯ ಮುಖ್ಯಮಂತ್ರಿ. ರಾಷ್ಟ್ರ ನಾಯಕರಲ್ಲಿ ಎಲ್ಲಾ ವಿಚಾರಗಳನ್ನು ತಿಳಿಸಿದ್ದೇನೆ. ಪಕ್ಷ ಕಟ್ಟಲು ಅಧಿಕಾರ ನೀಡಿದ್ದಾರೆ. ಮುಖ್ಯಮಂತ್ರಿ ಆಗಲು ಅಲ್ಲ. ಏನಿದ್ದರೂ ಸತ್ಯ ಸದ್ಯದಲ್ಲಿಯೆ ಪ್ರಕಟವಾಗಲಿದೆ.

ಬಿಡದಿ ವಿಚಾರದಲ್ಲಿಯೂ ದೆಹಲಿಯಲ್ಲಿ ಚರ್ಚೆ ನಡೆಸಲಾಗಿದೆ. ರೈತನ್ನು ಒಕ್ಕಲೆಬ್ಬಿಸಲು ಬಿಡುವುದಿಲ್ಲ. ಅವರ ಪರ ಹೋರಾಟಕ್ಕಾಗಿ ಪಕ್ಷ ಸಿದ್ಧವಿದೆ ಎಂದರು.

ರಾಜ್ಯದಲ್ಲಿ ಗೃಹಲಕ್ಷಿಮ ಯೋಜನೆಯಲ್ಲಿ ಸಾಕಷ್ಟು ಅವ್ಯವಹಾರವಗಿದೆ. ಸಿ.ಐ.ಜಿ. ವರದಿಯಲ್ಲಿ ಬಂದಿರುವ ಗ್ಯಾರಂಟಿ ಅಧ್ಯಕ್ಷರುಗಳನ್ನು ಬರಕಾಸ್ತುಗೊಳಿಸಿ ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಯೋಜನೆ ಮುಂದುವರಿಸಲಿ. ನೂರಾರು ಕೋಟಿ ರೂ. ಅವ್ಯವಹಾರಕ್ಕೆ ಕಾಂಗ್ರೆಸ್ ಪಕ್ಷವೇ ಕಾರಣ ಎಂದು ವಿಜಯೇಂದ್ರ ಆರೋಪಿಸಿದರು.

ಎಸ್.ಐ.ಆರ್. ಬಗ್ಗೆ ಅಪಪ್ರಚಾರವಾಗುತ್ತಿದೆ. ಪಕ್ಷ ಯಾವ ರೀತಿ ಕೆಲಸ ಮಾಡಬೇಕು ಎಂದು ಕಾರ್ಯಕರ್ತರಿಗೆ ಮಾಹಿತಿ ನೀಡಿದ್ದು ಅವರು ಅದನ್ನು ಗಮನಿಸುತ್ತಾರೆ ಎಂದು ತಿಳಿಸಿದರು.

ಡಿ. ವಿ. ಸದಾನಂದ ಗೌಡ ನನ್ನನ್ನು ಸಂಪರ್ಕಿಸಿದ್ದಾರೆ. ಯಾವುದೇ ವಿಶಿಷ್ಟ ಮಾಹಿತಿ ನೀಡಿಲ್ಲ. ಬೆಂಗಳೂರಿಗೆ ಹೋದ ಮೇಲೆ ಅವರನ್ನು ಹಾಗೂ ಸಿ.ಟಿ. ರವಿ ಅವರನ್ನೂ ಸಂಪರ್ಕಿಸುವುದಾಗಿ ತಿಳಿಸಿದರು. ಸಂಸರದ ಬ್ರಿಜೇಶ್ ಚೌಟ, ಬಿ.ಜೆ.ಪಿ. ಜಿಲ್ಲಾ ಅಧ್ಯಕ್ಷ ಸತೀಶ್ ಕುಂಪಲ, ಶಾಸಕರುಗಳಾದ ವೇದವ್ಯಾಸ ಕಾಮತ್, ಭರತ್ ಶೆಟ್ಟಿ, ಭಾಗೀರಥಿ ಮುರುಳ್ಯ, ಗುರುರಾಜ ಗಂಟಿಹೊಳೆ, ಯಶಪಾಲ್ ಸುವರ್ಣ, ರಾಜೇಶ್ ನಾಯಕ್, ಸುರೇಶ್ ಶೆಟ್ಟಿ ಗುರ್ಮೆ, ಕಿರಣ್ ಕೊಡ್ಗಿ, ಕೆ. ಪ್ರತಾಪಸಿಂಹನಾಯಕ್, ಕಿಶೋರ್ ಕುಮಾರ್ ಮತ್ತು ಪಕ್ಷದ ಕಾರ್ಯಕರ್ತರಾದ ಜಯಂತ್ ಕೋಟ್ಯಾನ್ ಹಾಗೂ ಶ್ರೀನಿವಾಸ ರಾವ್ ಧರ್ಮಸ್ಥಳ ಉಪಸ್ಥಿತರಿದ್ದರು.ಶಾಸಕ ಹರೀಶ್ ಪೂಂಜ ಸ್ವಾಗತಿಸಿದರು.



# NCERT ಹೊಸ ಪಠ್ಯದಲ್ಲಿ ಮೊದಲ ಬಾರಿಗೆ SIR ಸೇರ್ಪಡೆ

**ನವದೆಹಲಿ,ಜೂ.26:** ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿಯು ಪ್ರಸಕ್ತ ಶೈಕ್ಷಣಿಕ ವರ್ಷಕ್ಕಾಗಿ ಬಿಡುಗಡೆ ಮಾಡಿರುವ ಪಠ್ಯಪುಸ್ತಕದಲ್ಲಿ ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಮೊದಲ ಬಾರಿಗೆ ವಿವರವಾಗಿ ಅಳವಡಿಸಲಾಗಿದೆ.

9ನೇ ತರಗತಿಯ ಹೊಸ ಸಾಮಾಜಿಕ ವಿಜ್ಞಾನ ಅಂಡರ್‌ಸ್ಟ್ಯಾಂಡಿಂಗ್ ಸೊಸೈಟಿ: ಇಂಡಿಯಾ ಆಂಡ್ ಬಿಯಾಂಡ್ (Understanding Society: India and Beyond) ಹೆಸರಿನ ಈ ಹೊಸ ಪುಸ್ತಕದಲ್ಲಿ, ಭಾರತೀಯ ಪ್ರಜಾಪ್ರಭುತ್ವ ಎದುರಿಸಿದ ತುರ್ತು ಪರಿಸ್ಥಿತಿ ಮತ್ತು ವಿಶೇಷ ತೀವ್ರ ಪರಿಷ್ಕರಣೆ ಪಠ್ಯವನ್ನು ಸೇರಿಸಲಾಗಿದೆ.

ಚುನಾವಣೆಗಳು ಎಂಬ ಅಧ್ಯಾಯದಲ್ಲಿ ವಿಶೇಷ ತೀವ್ರ ಪರಿಷ್ಕರಣೆಯ ಬಗ್ಗೆ ಉಲ್ಲೇಖಿಸಲಾಗಿದೆ. ಚುನಾವಣಾ ಆಯೋಗವು ಈ ಪ್ರಕ್ರಿಯೆಯ ಮೂಲಕ ಯಾವೊಬ್ಬ ಅರ್ಹ ನಾಗರಿಕನೂ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಮತ್ತು ಯಾವುದೇ ಅನರ್ಹ ವ್ಯಕ್ತಿ ಪಟ್ಟಿಯಲ್ಲಿ ಸೇರದಂತೆ ನೋಡಿಕೊಳ್ಳುತ್ತದೆ. ವಿಶೇಷವಾಗಿ 18 ವರ್ಷ ತುಂಬಿದ, ಜಾಗೃತಿಯ ಕೊರತೆಯಿಂದಾಗಿ ಮತದಾರರ ಪಟ್ಟಿಗೆ ಹೆಸರು ಸೇರಿಸದ ಯುವ ಮತದಾರರನ್ನು ಗುರುತಿಸಿ ಸೇರ್ಪಡೆಗೊಳಿಸಲು ಈ ವ್ಯವಸ್ಥೆ ಸಹಕಾರಿಯಾಗಿದೆ ಎಂದು ಪಠ್ಯದಲ್ಲಿ ಉಲ್ಲೇಖಿಸಿದೆ.

ಮರಣ ಹೊಂದಿದವರು, ವಾಸಸ್ಥಳ ಬದಲಾಯಿಸಿದವರು, ನಕಲಿ ಹೆಸರುಗಳು ಹಾಗೂ ಪತ್ತೆಯಾಗದ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ಇದು ನೆರವಾಗುತ್ತದೆ. ಸಾರ್ವಜನಿಕರಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಕಾಶ ನೀಡಿ, ನಂತರವೇ ಅಂತಿಮ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತದೆ ಎಂದು ತಿಳಿಸಲಾಗಿದೆ.

ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಾಗಿ ಭಾರತೀಯ ಚುನಾವಣಾ ಆಯೋಗವು ಮಾಹಿತಿ ಮತ್ತು ಸಂವಹನ ತಂತ್ರಜ್ಞಾನವನ್ನು ಬಳಸುತ್ತಿರುವುದನ್ನು ಉಲ್ಲೇಖಿಸಲಾಗಿದೆ. 2024ರ ಸಾರ್ವತ್ರಿಕ ಚುನಾವಣೆಯ ವೇಳೆಗೆ ಭಾರತದಲ್ಲಿ 96.8 ಕೋಟಿಗೂ ಹೆಚ್ಚು ನೋಂದಾಯಿತ ಮತದಾರರಿದ್ದರು ಎಂಬ ಅಂಕಿ-ಅಂಶಗಳನ್ನು ನೀಡಲಾಗಿದೆ. ಭಾರತದಲ್ಲಿ ಮಹಿಳೆಯರಿಗೆ ಮೊದಲಿನಿಂದಲೇ ಸಮಾನ ಮತದಾನದ ಹಕ್ಕು ನೀಡಲಾಗಿರುವುದನ್ನು ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿ ಹಾಗೂ ಗುಜರಾತ್-ಮಹಾರಾಷ್ಟ್ರದ ಮಹಿಳಾ ಸ್ನೇಹಿ ಪಂಚಾಯತ್‌ಗಳ ಉದಾಹರಣೆಗಳನ್ನು ನೀಡಲಾಗಿದೆ. ಎಲೆಕ್ಟ್ರಾನಿಕ್ ಮತ ಯಂತ್ರಗಳು ಮತದಾರರ ಪರಿಶೀಲಿಸಬಹುದಾದ ಪೇಪರ್ ಆಡಿಟ್ ಟ್ರಯಲ್ ಸ್ಲಿಪ್‌ಗಳು, ಮಾದರಿ ನೀತಿ ಸಂಹಿತೆ ಮತ್ತು ಮತದಾರರ ಜಾಗೃತಿ ಅಭಿಯಾನಗಳ ಬಗ್ಗೆ ಉಲ್ಲೇಖಿಸಲಾಗಿದೆ.

ಭಾರತದಲ್ಲಿ ತುರ್ತು ಪರಿಸ್ಥಿತಿ ಘೋಷಣೆಯಾಗಿ 50 ವರ್ಷಗಳು ಪೂರೈಸುತ್ತಿರುವ ಸಂದರ್ಭದಲ್ಲೇ ಎನ್‌ಸಿಇಆರ್‌ಟಿ ಪುಸ್ತಕದಲ್ಲಿ ತುರ್ತು ಪರಿಸ್ಥಿತಿ ವಿಷಯ ಸೇರ್ಪಡೆಯಾಗಿದೆ. ಈ ಹಿಂದೆ 12ನೇ ತರಗತಿಯ ರಾಜ್ಯಶಾಸ್ತ್ರ ಪುಸ್ತಕಕ್ಕೆ ಮಾತ್ರ ಸೀಮಿತವಾಗಿದ್ದ ಈ ವಿಷಯವನ್ನು, ಈಗ 9ನೇ ತರಗತಿಯ ಪ್ರಜಾಪ್ರಭುತ್ವ ಅಧ್ಯಾಯದ ಅಡಿಯಲ್ಲಿ ಭಾರತದಲ್ಲಿ ಪ್ರಜಾಸತ್ತಾತ್ಮಕ ಆಚರಣೆಗಳಿಗೆ ಇರುವ ಸವಾಲುಗಳು ಎಂಬ ವಿಷಯದಡಿ ಸೇರಿಸಲಾಗಿದೆ.

## ಸಂಸದರ ಬೆನ್ನಲ್ಲೇ 14-16 ಶಾಸಕರು ಏಕನಾಥ್ ಶಿಂಧೆ ಬಣ ಸೇರ್ಪಡೆ

# ಆಪರೇಷನ್ ಟೈಗರ್ ವದಂತಿ ತಳ್ಳಿಹಾಕಿದ ಉದ್ಧವ್ ಬಣ

**ಮುಂಬೈ,ಜೂ.26:** ಆರು ಮಂದಿ ಸಂಸದರ ಬೆನ್ನಲ್ಲೇ 14 ಶಾಸಕರು ಶಿವಸೇನೆ ಉದ್ಧವ್ ಠಾಕ್ರೆ ಬಣದಿಂದ ಡಿಸಿಎಂ ಏಕನಾಥ್ ಶಿಂಧೆ ಬಣ ಸೇರ್ಪಡೆಯಾಗುವ ಸಾಧ್ಯತೆಗಳಿದೆ ಎಂದು ಮೂಲಗಳು ತಿಳಿಸಿದೆ. ಆದರೆ ಆರೋಪಗಳನ್ನು ಉದ್ಧವ್ ಬಣ ನಿರಾಕರಿಸಿದೆ.

ಆಪರೇಷನ್ ಟೈಗರ್ 2 ಹೆಸರಿನಲ್ಲಿ ಶಾಸಕರನ್ನು ಸೆಳೆಯುವ ಪ್ರಯತ್ನ ನಡೆದಿದ್ದು 20 ಶಾಸಕರ ಪೈಕಿ 14 -16 ಮಂದಿ ಏಕನಾಥ್ ಶಿಂಧೆ ಬಣದ ಜೊತೆಗೆ ಸಂಪರ್ಕದಲ್ಲಿದ್ದಾರೆ ಎನ್ನಲಾಗಿದೆ. ಶಿವಸೇನೆಯ ಮೂರರಿಂದ ನಾಲ್ಕು ಶಾಸಕರು ಕೆಲವು ದಿನಗಳ ಹಿಂದೆ ಏಕನಾಥ್ ಶಿಂಧೆ ಅವರನ್ನು ಭೇಟಿಯಾಗಿ 12ರಿಂದ 14 ಶಾಸಕರ ಗುಂಪು ಅವರ ಬಣಕ್ಕೆ ಸೇರಲು ಸಿದ್ಧರಿದ್ದಾರೆ ಎಂದು ತಿಳಿಸಿದ್ದರು ಎಂದು ವರದಿಯಾಗಿದೆ. ಈ ಭೇಟಿಯ ಬಗ್ಗೆ ಎರಡೂ ಕಡೆಯಿಂದ ಅಧಿಕೃತ ದೃಢೀಕರಣ ಬಂದಿಲ್ಲ.



ಮಹಾ ವಿಕಾಸ್ ಅಘಾಡಿ ತನ್ನ ಶಾಸಕರ ಸಭೆ ನಡೆಸಿದ ಕೆಲವೇ ದಿನಗಳಲ್ಲಿ ಈ ಬೆಳವಣಿಗೆ ಸಂಭವಿಸಿದೆ. ಮೈತ್ರಿಕೂಟದ 60 ಶಾಸಕರಲ್ಲಿ ಕೇವಲ 37 ಶಾಸಕರು ಮಾತ್ರ ಸಭೆಗೆ ಹಾಜರಾಗಿದ್ದರು. ವೈಯಕ್ತಿಕ ಬದ್ಧತೆಗಳು ಮತ್ತು ಪೂರ್ವ ನಿಗದಿತ ಕಾರ್ಯಕ್ರಮಗಳಿಂದಾಗಿ ಹಲವಾರು ಶಾಸಕರು ಗೈರುಹಾಜರಾಗಿದ್ದರು ಎಂದು ಎಂವಿಎ ನಂತರ ಸ್ಪಷ್ಟಪಡಿಸಿತು. ಹಲವಾರು ಶಾಸಕರ ಅನುಪಸ್ಥಿತಿಯು ಆಪರೇಷನ್ ಟೈಗರ್ ಸುತ್ತಲಿನ ಊಹಾಪೋಹಗಳಿಗೆ ಮತ್ತಷ್ಟು ಉತ್ತೇಜನ ನೀಡಿದೆ, ಶಿವಸೇನೆಯ 20 ಶಾಸಕರಲ್ಲಿ 14ರಿಂದ 16 ಮಂದಿ ತಮ್ಮ ಸಂಪರ್ಕದಲ್ಲಿದ್ದಾರೆ ಎಂದು ಶಿಂಧೆ ಬಣ ಈಗ ಹೇಳಿಕೊಂಡಿದೆ.


ಆದಾಗ್ಯೂ, ಶಿಂಧೆ ಮತ್ತು ಅವರ ನಾಯಕರು ಶಾಸಕರನ್ನು ಭೇಟಿಮಾಡಲು ಪ್ರಯತ್ನಿಸುತ್ತಿಲ್ಲ ಎಂದು ಒತ್ತಾಯಿಸುತ್ತಿದ್ದಾರೆ, ಶಾಸಕರು ಸ್ವಯಂಪ್ರೇರಣೆಯಿಂದ ಅವರನ್ನು ಸಂಪರ್ಕಿಸುತ್ತಿದ್ದಾರೆ ಎಂದು ಹೇಳುತ್ತಿದ್ದಾರೆ. ಮುಂಬರುವ ದಿನಗಳಲ್ಲಿ ಇನ್ನಷ್ಟು ಶಾಸಕರು ಬಣಕ್ಕೆ ಸೇರಬಹುದು ಎಂಬ ಸುಳಿವು ಕೂಡ ನೀಡಿದ್ದಾರೆ. ಈ ಹೇಳಿಕೆಗಳಿಗೆ ಪ್ರತಿಕ್ರಿಯೆ ನೀಡಿದ ಶಿವಸೇನೆ (ಯುಬಿಟಿ) ನಾಯಕ ಸಂಜಯ್ ರಾವತ್, ಪಕ್ಷದ ಎಲ್ಲಾ ಶಾಸಕರು ಉದ್ಧವ್ ಠಾಕ್ರೆ ಅವರೊಂದಿಗೆ ಸಂಪರ್ಕದಲ್ಲಿದ್ದಾರೆ ಮತ್ತು ವಿಭಜನೆಯ ವರದಿಗಳನ್ನು ಸುಳ್ಳು ಎಂದರು. ಎಂವಿಎ ಸಭೆಗೆ ಗೈರುಹಾಜರಾದ ಶಾಸಕರು ವೈಯಕ್ತಿಕ ಕಾರಣಗಳಿಂದಾಗಿ ತಮ್ಮ ಅನುಪಸ್ಥಿತಿಯ ಬಗ್ಗೆ ನಾಯಕತ್ವಕ್ಕೆ ಮುಂಚಿತವಾಗಿ ತಿಳಿಸಿದ್ದರು ಎಂದು ಅವರು ಹೇಳಿದರು.

# ಶ್ರೀರಾಮ ಮಂದಿರಾ ದೇಣಿಗೆ ದುರ್ಬಳಕೆ ಆರೋಪ ಎಂಟು ಮಂದಿ ವಿರುದ್ಧ ಎಫ್‌ಐಆರ್, ಬಂಧನ

**ಅಯೋಧ್ಯೆ, ಜೂ.26:** ಅಯೋಧ್ಯೆ ಶ್ರೀರಾಮ ಮಂದಿರಾದ ದೇಣಿಗೆ ದುರ್ಬಳಕೆ ಪ್ರಕರಣದ ತನಿಖೆ ತೀವ್ರ ಸ್ವರೂಪ ಪಡೆದುಕೊಂಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಟು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಟ್ರಸ್ಟ್ ಸದಸ್ಯ ಕೃಷ್ಣಮೋಹನ್ ಅವರ ದೂರಿನ ಮೇರೆಗೆ, ಶ್ರೀರಾಮಜನ್ಮಭೂಮಿ ಪೊಲೀಸ್ ಠಾಣೆಯಲ್ಲಿ ರಾಮಶಂಕರ್ ಯಾದವ್ ಅಲಿಯಾಸ್ ಟಿನ್ನು ಯಾದವ್, ಅನುಕಲ್ಪ್ ಮಿಶ್ರಾ, ಅವಿನಾಶ್ ಶುಕ್ಲಾ, ಕರುಣೇಶ್ ಪಾಂಡೆ, ಲವಕುಶ್ ಮಿಶ್ರಾ, ರಾಮಶಂಕರ್ ಮಿಶ್ರಾ, ಸುಭಾಷ್ ಶ್ರೀವಾಸ್ತವ ಮತ್ತು ಮನೀಶ್‌ಕುಮಾರ್ ಯಾದವ್ ಸೇರಿದಂತೆ 8 ಜನರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಮುಖ್ಯಮಂತ್ರಿ ಯೋಗಿ ಆದಿತ್ಯನಾಥಗೆ ಎಸ್‌ಐಟಿ ವರದಿ ಸಲ್ಲಿಸಿದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದ್ದು ದೇಣಿಗೆ ದುರ್ಬಳಕೆ ತನಿಖೆ ಮತ್ತೊಂದು ಸ್ವರೂಪ ಪಡೆದಂತಾಂಗಿದೆ. ಸದ್ಯ ಬಂಧಿತರ ವಿರುದ್ಧ ಕಳ್ಳತನ, ಕ್ರಿಮಿನಲ್



ನಂಬಿಕೆ ಉಲ್ಲಂಘನೆ ಮತ್ತು ಕ್ರಿಮಿನಲ್ ಪಿತೂರಿ ಸೇರಿದಂತೆ ವಿವಿಧ ಆರೋಪಗಳ ಮೇಲೆ ಭಾರತೀಯ ದಂಡ ಸಂಹಿತೆ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಸದ್ಯ ಬಂಧಿತರಲ್ಲಿ ಹೆಸರಿಸಲಾದ ಹೆಚ್ಚಿನ ಜನರು ದೇಣಿಗೆ ಎಣಿಕೆ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. ರಾಮಶಂಕರ್ ಯಾದವ್ ಅಲಿಯಾಸ್ ಟಿನ್ನು ಯಾದವ್, ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಚಂಪತ್ ರಾಯ್ ಅವರ ಚಾಲಕ ಎಂದು ಹೇಳಲಾಗಿದೆ. ಆದಾಗ್ಯೂ, ಟಿನ್ನು ಈ ಹಿಂದೆ ಮಾಧ್ಯಮಗಳಿಗೆ ಮಾತನಾಡುವಾಗ ದೇಣಿಗೆ ಮತ್ತು ಕಾಣಿಕೆಗಳನ್ನು ಎಣಿಸುವಲ್ಲಿ ಯಾವುದೇ ಪಾತ್ರವನ್ನು ನಿರಾಕರಿಸಿದ್ದರು, ಕೆಲವು ಅಸೂಯೆ ಪಟ್ಟ ಜನರು ತಮ್ಮ ಹೆಸರನ್ನು ಎತ್ತುತ್ತಿದ್ದಾರೆ ಎಂದು ಹೇಳಿದ್ದರು.

ಬಂಧಿತರ ಪೈಕಿ ಟಿನ್ನು ಯಾದವ್ ಅತ್ಯಂತ ಪ್ರಭಾವಿ ಚಂಪತ್ ರಾಯ್ ಅವರ ಆಪ್ತತೆಯನ್ನು ಬಳಸಿದ್ದಾನೆ ಎನ್ನಲಾಗಿದೆ. ಆದರೆ ಇದರಲ್ಲಿ ಚಂಪತ್ ರಾಯ್ ಅಥವಾ ಇತರೆ ಸದಸ್ಯರ ಪಾತ್ರ ಇದೆಯೇ ಎನ್ನುವ ಬಗ್ಗೆ ಇನ್ನು ಸ್ಪಷ್ಟವಾಗಿಲ್ಲ.. ಚುನಾವಣೆ ಮುನ್ನ ಬಂದಿರುವ ಆರೋಪವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು ಈ ಹಗರಣದ ತಪ್ಪಿಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾಗಿದೆ.

### ಚಂಪತ್‌ರಾಯ್ ರಾಜೀನಾಮೆ

**ರಾಮಮಂದಿರಾ ದೇಣಿಗೆ ಕಳ್ಳತನ ಪ್ರಕರಣ ಸಂಬಂಧ ಟ್ರಸ್ಟ್‌ಪ್ರಧಾನ ಕಾರ್ಯದರ್ಶಿ ಹುದ್ದೆಗೆ ಚಂಪತ್ ರಾಯ್ ರಾಜೀನಾಮೆ ನೀಡಿದ್ದಾರೆ. ನೈತಿಕ ಹೊಣೆಗಾರಿಕೆ ಮೇಲೆ ರಾಜೀನಾಮೆ ನೀಡಿದ್ದಾರೆ. ವಿಶ್ವ ಹಿಂದೂ ಪರಿಷತ್ ನಾಯಕರಾದ ಚಂಪತ್ ರಾಯ್ ಫೆಬ್ರವರಿ 2020 ರಿಂದ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಜೊತೆಗೆ ಸದಸ್ಯ ಅನಿಲ್ ಮಿಶ್ರಾ ಕೂಡಾ ರಾಜೀನಾಮೆ ನೀಡಿದ್ದಾರೆ.**

## ಸನಾತನದ ಭಾವನೆ ನೋಯಿಸಲು ಬಿಡುವುದಿಲ್ಲ

# ಕಾಣಿಕೆ ಹಣದಲ್ಲಿ ಅಕ್ರಮ ಎಸಗಿದವರನ್ನು ಬಿಡುವುದಿಲ್ಲ: ಮುಖ್ಯಮಂತ್ರಿ ಯೋಗಿ ಎಚ್ಚರಿಕೆ

**ಲಖನೌ,ಜೂ.26:** ರಾಮಭಕ್ತರ ಅಗ್ನಿಪರೀಕ್ಷೆ ಮಾಡಬೇಡಿ, ಭಕ್ತರು ತಮ್ಮ ನಂಬಿಕೆ ಮತ್ತು ಭಕ್ತಿಯಿಂದ ಕಾಣಿಕೆ ನೀಡುತ್ತಾರೆ ಆ ಹಣದಲ್ಲಿ ಅಕ್ರಮ ಎಸಗುವವರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಎಚ್ಚರಿಸಿದ್ದಾರೆ. ಪ್ರಕರಣವನ್ನು ರಾಜಕೀಯಗೊಳಿಸುವ ಪ್ರಯತ್ನಗಳ ವಿರುದ್ಧವೂ ಅವರು ಆಕ್ಷೇಪ ವ್ಯಕ್ತಪಡಿಸಿದರು.

ಡಿಯೋರಿಯಾದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಯೋಗಿ ಆದಿತ್ಯನಾಥ, ಪ್ರಕರಣ ಸಂಬಂಧ ವಿಶೇಷ ತನಿಖಾ ತಂಡ ರಚಿಸಲಾಗಿದ್ದು, ಪ್ರಕರಣದಲ್ಲಿ ಎಂಟು ಮಂದಿಯನ್ನು ಬಂಧಿಸಲಾಗಿದೆ. ಸನಾತನ'ದ ಭಾವನೆಗಳನ್ನು ನೋಯಿಸಲು ಯಾರಿಗೂ ಅವಕಾಶ ನೀಡುವುದಿಲ್ಲ ಎಂದರು.

ವಿರೋಧ ಪಕ್ಷಗಳನ್ನು ಟೀಕಿಸಿದ ಅವರು, ಈ ವಿಷಯವನ್ನು ಮತ್ತೆ ಎತ್ತಲು ಪ್ರಯತ್ನಿಸುತ್ತಿರುವವರು, ರಾಮ ಮಂದಿರವನ್ನು ವಿರೋಧಿಸಿದ ಅದೇ ಜನರು. ಅವರು ಭಗವಾನ್ ರಾಮನೇ ಇಲ್ಲ ಎಂದು ಹೇಳಿಕೊಂಡರು ಮತ್ತು ದೇವಾಲಯದ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ನಿರಂತರವಾಗಿ ವಾದಿಸುತ್ತಿದ್ದರು.



ಅವರು ರಾಮಭಕ್ತರ ಮೇಲೆ ಗುಂಡುಗಳನ್ನು ಹಾರಿಸಿದರು ಮತ್ತು ರಾಮ ನವಮಿಯಂದು ಗಲಭೆಗಳಿಗೆ ಕಾರಣರಾಗಿದ್ದರು ಎಂದು ಅವರು ಹೇಳಿದರು. ಇಂತಹ ಜನರು ಕೆಟ್ಟ ಉದ್ದೇಶ ಹೊಂದಿರುವುದರಿಂದ ಈ ವಿಷಯವನ್ನು ಎತ್ತುತ್ತಿದ್ದಾರೆ. ಅದಕ್ಕಾಗಿ ಹೇಳುತ್ತಿದ್ದೇನೆ ರಾಮಭಕ್ತರ ಅಗ್ನಿಪರೀಕ್ಷೆಯನ್ನು ತೆಗೆದುಕೊಳ್ಳಬೇಡಿ. ನಿಮ್ಮ ಬಳಿ ಪುರಾವೆಗಳಿದ್ದರೆ, ಅದನ್ನು ಎಸ್‌ಐಟಿಗೆ ಒಪ್ಪಿಸಿ. ಈ ವಿಷಯವನ್ನು ರಾಜಕೀಯಗೊಳಿಸುವುದನ್ನು ತಪ್ಪಿಸಿ ಎಂದು ಹೇಳಿದರು.




**ನವದೆಹಲಿಯಲ್ಲಿ ಶುಕ್ರವಾರ ನಡೆದ NCORD ಯ 10ನೇ ಉನ್ನತ ಮಟ್ಟದ ಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾದಕವಸ್ತುಗಳ ಪಿಡುಗಿನಿಂದ ರಾಷ್ಟ್ರವನ್ನು ರಕ್ಷಿಸಲು ಮಾದಕ ವಸ್ತುಗಳ ನಿಯಂತ್ರಣದ ಕುರಿತಾದ ವಿಷನ್ ಡಾಕ್ಯುಮೆಂಟ್ ಬಿಡುಗಡೆ ಮಾಡಿದರು.**

## ಕಾರ್ಮಿಕರ, ಸಾಮಾಜಿಕ ಭದ್ರತೆ, ಕೌಶಲ್ಯಾಭಿವೃದ್ಧಿ, ಪರಿಣಾಮಕಾರಿ ಆಡಳಿತದ ಕುರಿತು ಸಮಗ್ರ ಚರ್ಚೆ

# ಸಂಸದರು-ಶಾಸಕರಿಗಾಗಿ ಎನ್‌ಎಫ್‌ಸಿಆರ್‌ಸಿ ಕಾರ್ಯಾಗಾರ

**ನವದೆಹಲಿ, ಜೂ,26:** ದೆಹಲಿ ಮೂಲದ ಸಾರ್ವಜನಿಕ ನೀತಿ ಸಂಶೋಧನಾ ಸಂಸ್ಥೆಯಾದ ನೇಷನ್ ಫಸ್ಟ್ ಪಾಲಿಸಿ ರಿಸರ್ಚ್ ಅಂಡ್ ಚೇಂಜ್ ಫೌಂಡೇಶನ್ ನಿಂದ ಸಂಸದರು ಹಾಗೂ ಶಾಸಕರಿಗಾಗಿ ನವದೆಹಲಿಯ ಇಂಡಿಯಾ ಹ್ಯಾಬಿಟಾಟ್ ಸೆಂಟರ್‌ನ ಗುಲ್ ಮೊಹರ್ ಸಭಾಂಗಣದಲ್ಲಿ ವಿಶೇಷ ಕಾರ್ಯಾಗಾರ ಆಯೋಜಿಸಲಾಗಿತ್ತು.

ಸಾಮಾಜಿಕ ಭದ್ರತೆ, ಕೌಶಲ್ಯಾಭಿವೃದ್ಧಿ ಸುಧಾರಣೆಗಳು ಹಾಗೂ ಶಾಸಕರ ಪರಿಣಾಮಕಾರಿ ಸಾರ್ವಜನಿಕ ಸಂವಹನ ತಂತ್ರಗಳ ಕುರಿತು ನಡೆದ ಈ ಕಾರ್ಯಾಗಾರದಲ್ಲಿ ಲೋಕಸಭೆ, ರಾಜ್ಯಸಭೆ ಹಾಗೂ ವಿವಿಧ ರಾಜ್ಯ ವಿಧಾನಸಭೆಗಳ ಸುಮಾರು 70 ಮಂದಿ ಜನಪ್ರತಿನಿಧಿಗಳು ಮತ್ತು ನೀತಿ ತಜ್ಞರು ಭಾಗವಹಿಸಿದರು.

ಸಾರ್ವಜನಿಕ ಪ್ರತಿನಿಧಿಗಳಿಗೆ ಪರಿಣಾಮಕಾರಿ ಆಡಳಿತ, ನೀತಿ ರೂಪಣೆ ಮತ್ತು ಜನಸೇವೆಯಲ್ಲಿ ಉಪಯುಕ್ತವಾಗುವ ಆಡಳಿತಾತ್ಮಕ ಸಾಧನಗಳನ್ನು ಪರಿಚಯಿಸುವುದು ಕಾರ್ಯಾಗಾರದ ಪ್ರಮುಖ




ಉದ್ದೇಶವಾಗಿತ್ತು.

ವಿಕಸಿತ ಭಾರತ-2047 ಗುರಿಗೆ ಕಾರ್ಮಿಕ ಸುಧಾರಣೆ ಅಗತ್ಯ ಎನ್‌ಎಫ್‌ಸಿಆರ್‌ಸಿ ಅಧ್ಯಕ್ಷ ತರುಣ್ ಚುಗ್ ಮಾತನಾಡಿ, ಸ್ವಾವಲಂಬಿ ಭಾರತ ನಿರ್ಮಾಣದ ಗುರಿ ಸಾಧನೆಗೆ ಕಾರ್ಮಿಕರ ಕಲ್ಯಾಣ, ಉದ್ಯೋಗಕ್ಕೆ ಸಿದ್ಧವಾಗಿರುವ ಕೌಶಲ್ಯಯುತ ಮಾನವ ಸಂಪನ್ಮೂಲ, ಡಿಜಿಟಲ್ ಕೌಶಲ್ಯಾಭಿವೃದ್ಧಿ ಹಾಗೂ ಸಾಮಾಜಿಕ ಭದ್ರತೆಯ ವಿಸ್ತರಣೆ ಅತ್ಯಂತ ಮಹತ್ವದ್ದಾಗಿದೆ. ಸಂಶೋಧನೆ ಆಧಾರಿತ ನೀತಿ ಚರ್ಚೆಗಳ ಮೂಲಕ ಶಾಸಕರ ಸಾಮರ್ಥ್ಯವನ್ನು ಹೆಚ್ಚಿಸಲು ಎನ್‌ಎಫ್‌ಸಿಆರ್‌ಸಿ ಬದ್ಧವಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಹರಿಯಾಣ ವಿಧಾನಸಭೆಯ ಸಭಾಧ್ಯಕ್ಷ ಹರವಿಂದರ್ ಕಲ್ಯಾಣ್, ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸಲು ಜ್ಞಾನಾಧಾರಿತ ಚರ್ಚೆಗಳು ಮತ್ತು ಸಾಕ್ಷ್ಯಾಧಾರಿತ ನೀತಿ ರೂಪಣೆ ಅಗತ್ಯ. ಇಂದಿನ ಆಡಳಿತಾತ್ಮಕ ಸವಾಲುಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಜನಪ್ರತಿನಿಧಿಗಳಿಗೆ ಸಮಕಾಲೀನ ಆಡಳಿತ ಜ್ಞಾನ ಮತ್ತು ಸಂಸ್ಥೆಗಳ ಅರಿವು ಅಗತ್ಯವಾಗಿದೆ ಎಂದು ಹೇಳಿದರು.

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ಹಾಗೂ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಮಾತನಾಡಿ, "ಸಾಮಾಜಿಕ ಭದ್ರತೆಯ ಸಾರ್ವತ್ರೀಕರಣ ಮತ್ತು ಕಾರ್ಮಿಕರ ಔಪಚಾರಿಕೀಕರಣ: ಹೊಸ ಕಾರ್ಮಿಕ ವ್ಯವಸ್ಥೆ" ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದರು.

# ಬೈರಮಂಗಲಕ್ಕೆ ಹೋಗಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮಯ ನಿಗದಿ ಮಾಡಿಲ್ಲ

**ಬೆಂಗಳೂರು,ಜೂ.26:** ಬಿಡದಿ ಟೌನ್‌ಶಿಪ್ ವಿವಾದದ ಹಿನ್ನೆಲೆಯಲ್ಲಿ ಬೈರಮಂಗಲದಲ್ಲಿ ನಾಳೆ ನಡೆಯಬೇಕೆಂದು ನಿರೀಕ್ಷಿಸಲಾಗಿದ್ದ ಬಹಿರಂಗ ಚರ್ಚೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಜರಾಗುವ ಸಾಧ್ಯತೆಗಳು ಕ್ಷೀಣವಾಗಿವೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ನಾನು ಬೈರಮಂಗಲದಲ್ಲಿ ಮಧ್ಯಾಹ್ನದವರೆಗೂ ಕಾಯುತ್ತೇನೆ, ಮುಖ್ಯಮಂತ್ರಿಗಳು ಬಂದರೆ ಸಂತೋಷ ಎಂದು ಘೋಷಿಸಿದ್ದರೂ, ಶನಿವಾರದ ಅಧಿಕೃತ ಕಾರ್ಯಕ್ರಮಗಳ ಪ್ರಕಾರ ಶಿವಕುಮಾರ್ ಅವರಿಗೆ ಬೈರಮಂಗಲಕ್ಕೆ ಸಮಯವೇ ನಿಗದಿಯಾಗಿಲ್ಲ.

ಮುಖ್ಯಮಂತ್ರಿಯವರ ದಿನಚರಿಯಲ್ಲಿ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಕಾರ್ಯಕ್ರಮಗಳು, ಪ್ರತಿಮೆಗಳಿಗೆ ಮಾಲಾರ್ಪಣೆ, ಸ್ಮಾರಕ ಅನಾವರಣ, ಹಸಿರು ಅಭಿಯಾನ ಉದ್ಘಾಟನೆ, ಸಾರ್ವಜನಿಕ ಸಭೆ ಸೇರಿದಂತೆ ಬೆಳಿಗ್ಗೆಯಿಂದ ಸಂಜೆವರೆಗೂ ನಿರಂತರ ಕಾರ್ಯಕ್ರಮಗಳು ನಿಗದಿಯಾಗಿವೆ. ಜೊತೆಗೆ ಉಪರಾಷ್ಟ್ರಪತಿಯನ್ನು ಬರಮಾಡಿಕೊಳ್ಳುವ ಕಾರ್ಯಕ್ರಮ ಹಾಗೂ ಸಂಜೆ ರಾಜ್‌ದೀಪ್ ಸರ್ದೇಸಾಯಿ ಅವರ ಭೇಟಿ ಕೂಡಾ ಅವರ ವೇಳಾಪಟ್ಟಿಯಲ್ಲಿ ಸೇರಿದೆ.

ಈ ಹಿನ್ನೆಲೆಯಲ್ಲಿ ಬೈರಮಂಗಲದಲ್ಲಿ ನಡೆಯಬೇಕೆಂದು ನಿರೀಕ್ಷಿಸಲಾಗಿದ್ದ ಚರ್ಚೆ ನಡೆಯುವ ಸಾಧ್ಯತೆಗಳು ಕಡಿಮೆ. ಕುಮಾರಸ್ವಾಮಿ ರೈತರ ಮಧ್ಯೆ ನಿಂತು ಚರ್ಚೆ ಮಾಡಲು ಸಿದ್ಧತೆ ತೋರಿದ್ದರೆ, ಶಿವಕುಮಾರ್ ವಿಧಾನಸೌಧವೇ ಸೂಕ್ತ ವೇದಿಕೆ ಎಂದು ಹೇಳಿ ಆಹ್ವಾನ ನೀಡಿದ್ದರು.




ಆದರೆ ನಾಳಿನ ಅಧಿಕೃತ ಕಾರ್ಯಕ್ರಮಗಳು ಅವರ ಹಾಜರಾತಿಗೆ ಅಡ್ಡಿಯಾಗುತ್ತಿದ್ದು, ರಾಜ್ಯದ ಜನರ ಕುತೂಹಲ ಇನ್ನಷ್ಟು ಹೆಚ್ಚಾಗಿದೆ.

ಬಿಡದಿ ಟೌನ್‌ಶಿಪ್ ವಿವಾದ ಈಗ ರಾಜಕೀಯ ಮುಖಾಮುಖಿ ರೂಪ ಪಡೆದುಕೊಂಡಿದ್ದು, ಬೈರಮಂಗಲವೇ ವೇದಿಕೆ ಆಗುತ್ತದೆಯೇ ಅಥವಾ ವಿಧಾನಸೌಧವೇ ವೇದಿಕೆ ಆಗುತ್ತದೆಯೇ ಎಂಬ ಪ್ರಶ್ನೆ ರಾಜ್ಯದ ಜನರ ಗಮನ ಸೆಳೆದಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಶನಿವಾರದ ಅಧಿಕೃತ ಕಾರ್ಯಕ್ರಮಗಳು ಈಗಾಗಲೆ ನಿಗದಿಯಾಗಿವೆ. ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಅಂಗವಾಗಿ ಅವರು ಬೆಳಿಗ್ಗೆಯಿಂದಲೇ ವಿವಿಧ ಸ್ಥಳಗಳಲ್ಲಿ ಭಾಗವಹಿಸಲಿದ್ದಾರೆ.

ಬೆಳಗ್ಗೆ 9 ಗಂಟೆಗೆ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರಿಂದ ದಿನದ ಕಾರ್ಯಕ್ರಮ ಆರಂಭವಾಗಲಿದೆ. ನಂತರ ಯಲಹಂಕದ ಹೊಯ್ಸಳ ಕ್ರೀಡಾಂಗಣ, ವಿಧಾನಸೌಧ ಪೂರ್ವ ದಿಕ್ಕು ಸೇರಿದಂತೆ ಹಲವು ಸ್ಥಳಗಳಲ್ಲಿ ಕೆಂಪೇಗೌಡರ ಪ್ರತಿಮೆಗಳಿಗೆ ಮಾಲಾರ್ಪಣೆ ನಡೆಯಲಿದೆ.

ಬೆಳಗ್ಗೆ 11 ಗಂಟೆಯಿಂದ 11.45ರವರೆಗೆ ಎಸ್.ಎಂ. ಕೃಷ್ಣ ದಶಪಥ ರಸ್ತೆಯ ಲೋಕಾರ್ಪಣೆ, ಕೆಂಪೇಗೌಡರ ಸ್ಮಾರಕ ಅನಾವರಣ, ಹಸಿರು ಅಭಿಯಾನ ಉದ್ಘಾಟನೆ ಹಾಗೂ 7 ಪುರಜ್ಯೋತಿಗಳ ಸ್ವೀಕಾರ ಕಾರ್ಯಕ್ರಮ ನಡೆಯಲಿದೆ. ನಂತರ 11.45ಕ್ಕೆ ಸಾರ್ವಜನಿಕ ಸಭೆ ಆರಂಭವಾಗಲಿದೆ.

ಸಂಜೆ 5.15ಕ್ಕೆ ಉಪ ರಾಷ್ಟ್ರಪತಿಯನ್ನು ಬರಮಾಡಿಕೊಳ್ಳುವ ಕಾರ್ಯಕ್ರಮ ನಿಗದಿಯಾಗಿದೆ. ಸಂಜೆ 7ಕ್ಕೆ ಇಂಡಿಯಾ ಟುಡೇ ಪತ್ರಕರ್ತ ರಾಜ್‌ದೀಪ್ ಸರ್ದೇಸಾಯಿ ಅವರ ಭೇಟಿ ಕೂಡಾ ಕಾರ್ಯಕ್ರಮದಲ್ಲಿ ಸೇರಿದೆ. ಜೊತೆಗೆ ಬೆಳಿಗ್ಗೆ 11ಕ್ಕೆ ಭಾರತ್ ಜೋಡೋ ಭವನದಲ್ಲಿ INTUC ರಾಷ್ಟ್ರೀಯ ಮಹಾಸಭೆ ಮತ್ತು ರಾಜ್ಯ ಅಧಿವೇಶನದಲ್ಲಿ ಭಾಗವಹಿಸುವುದೂ ಮುಖ್ಯಮಂತ್ರಿಯವರ ದಿನಚರಿಯಲ್ಲಿ ಇದೆ.

ಈ ನಿಗದಿಯಾದ ವೇಳಾಪಟ್ಟಿಯಿಂದಾಗಿ ಬೈರಮಂಗಲದಲ್ಲಿ ನಡೆಯಬೇಕೆಂದು ನಿರೀಕ್ಷಿಸಲಾಗಿದ್ದ ಬಿಡದಿ ಟೌನ್‌ಶಿಪ್ ಕುರಿತ ಬಹಿರಂಗ ಚರ್ಚೆಗೆ ಅವರು ಹಾಜರಾಗುವ ಸಾಧ್ಯತೆಗಳು ಕಡಿಮೆ.

## ಪ್ರಿಯಾಂಕ್ ಖರ್ಗೆಗೆ ತಮ್ಮ ಕುಟುಂಬದ ಭೂ ವ್ಯವಹಾರಗಳಿಗೆ ಸಂಬಂಧಿಸಿದ ದಾಖಲೆ ಬಹಿರಂಗಪಡಿಸಲು ಹಿಂಜರಿಕೆ: ಬಿಜೆಪಿ

**ಬೆಂಗಳೂರು, ಜೂ.26:** ಭೂ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ತೀವ್ರ ವಾಗ್ದಾಳಿ ನಡೆಸಿದ್ದು, ಎಲ್ಲ ವಿಚಾರಗಳಲ್ಲೂ ದಾಖಲೆಗಳನ್ನು ಕೇಳುವ ಖರ್ಗೆ ಅವರು ಈಗ ತಮ್ಮ ಕುಟುಂಬಕ್ಕೆ ಸಂಬಂಧಿಸಿದ ಭೂ ವ್ಯವಹಾರಗಳ ದಾಖಲೆ ಗಳನ್ನು ಬಹಿರಂಗಪಡಿಸಲು ಹಿಂಜರಿಯುತ್ತಿದ್ದಾರೆ ಎಂದು ಆರೋಪಿಸಿದೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಬೆಂಗಳೂರು, ಕಲಬುರಗಿ ಹಾಗೂ ಬನಶಂಕರಿ ಸೇರಿದಂತೆ ಹಲವು ಪ್ರದೇಶಗಳಲ್ಲಿ ಏರೋಸ್ಪೇಸ್, ರಕ್ಷಣಾ ಕ್ಷೇತ್ರ, ಪಾಲಿ ಸಂಶೋಧನೆ ಸೇರಿದಂತೆ ವಿವಿಧ ಉದ್ದೇಶಗಳನ್ನು ಉಲ್ಲೇಖಿಸಿ, ಟ್ರಸ್ಟ್ ಹಲವು ಎಕರೆ ಮೌಲ್ಯಯುತ ಸರ್ಕಾರಿ ಹಾಗೂ ಕೈಗಾರಿಕಾ ಭೂಮಿಯನ್ನು ಪಡೆದು ಕೊಂಡಿದೆ. ಈ ಭೂ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಅನುಮಾನಗಳಿದ್ದು, ಈ ಕುರಿತು ತನಿಖೆ ನಡೆಯಬೇಕು ಎಂದು ಒತ್ತಾಯಿಸಿದೆ.

ಎಲ್ಲದಕ್ಕೂ ದಾಖಲೆ ಕೇಳುವ ಪ್ರಿಯಾಂಕ್ ಖರ್ಗೆ ಅವರು ತಮ ಕುಟುಂಬದ ಭೂ ವ್ಯವಹಾರಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸಾರ್ವಜನಿಕರ ಮುಂದೆ ಇಡಲು ಏಕೆ ಹಿಂದೇಟು ಹಾಕುತ್ತಿದ್ದಾರೆ ಎಂದು ಪ್ರಶ್ನಿಸಿದೆ.

ಅದೇ ವೇಳೆ, ಜಾರಿ ನಿರ್ದೇಶನಾಲಯ ತನಿಖೆ ಎದುರಿಸುವ ವಿಚಾರದಲ್ಲೂ ಬಿಜೆಪಿ ಖರ್ಗೆ ಅವರನ್ನು ಗುರಿಯಾಗಿಸಿಕೊಂಡಿದೆ. ದಾಖಲೆಗಳು ಸರಿಯಾಗಿದ್ದರೆ ಇಡಿ ಬಗ್ಗೆ ಭಯ ಏಕೆ? ಲೆಕ್ಕ ಕೊಡಿ.

ರಾಜ್ಯದ ಗೃಹ ಸಚಿವರಾಗಿರುವ ನಿಮಗೂ ಸಾರ್ವಜನಿಕರ ಮುಂದೆ ಹೊಣೆಗಾರಿಕೆ ಇರಬೇಕಲ್ಲವೇ? ಎಂದು ತೀವ್ರವಾಗಿ ಟೀಕಿಸಿದೆ. ಭ್ರಷ್ಟಾಚಾರದ ಆರೋಪಗಳಿಂದ ಪಾರದರ್ಶಕವಾಗಿ ಹೊರಬರಲು ಪ್ರಿಯಾಂಕ್ ಖರ್ಗೆ ಅವರು ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಬಹಿರಂಗಪಡಿಸಬೇಕು ಎಂದೂ ಇದೇ ವೇಳೆ ಆಗ್ರಹಿಸಿದೆ.



ಬೆಂಗಳೂರಿನ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಶುಕ್ರವಾರ ಹಿರಿಯ ಕಿರಿಯ ನಾಗರಿಕ ವೇದಿಕೆ ಮತ್ತು ಶಿರಡಿ ಸಾಯಿಬಾಬ ಸೇವಾ ಟ್ರಸ್ಟ್ ಹಾಗೂ ದಾಸಮ್ಮ ತಿಮ್ಮಯ್ಯ ಟ್ರಸ್ಟ್ ವತಿಯಿಂದ ಪೌರಕಾರ್ಮಿಕರ ಮಕ್ಕಳಿಗೆ ನೋಟ್‌ಪುಸ್ತಕ ವಿತರಿಸಲಾಯಿತು. ಮುಖ್ಯ ಅತಿಥಿಗಳಾಗಿ ಗಜೇಂದ್ರ ಉಪಸ್ಥಿತರಿದ್ದರು ಈ ಕಾರ್ಯಕ್ರಮದ ಪ್ರಾಯೋಜಕರು ಉದ್ಯಮಿ ಮುನಿಮಾರಪ್ಪ ಮಾರ್ಗದರ್ಶನದಲ್ಲಿ ಯಶಸ್ವಿಯಾಗಿ ನೆರವೇರಿತು. ಸಂಘದ ಅಧ್ಯಕ್ಷ ಮುದ್ದಿರೇಗೌಡರು ಮತ್ತು ಪ್ರಧಾನ ಕಾರ್ಯದರ್ಶಿ ಪಿ ಮುನಿಕೃಷ್ಣ ಮತ್ತು ಪದಾಧಿಕಾರಿಗಳ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

## ಬಂಡೀಪುರ-ನಾಗರಹೊಳೆ ಜಂಗಲ್ ಸಫಾರಿ ಪೂರ್ಣ ಪ್ರಮಾಣದಲ್ಲಿ ಆರಂಭಕ್ಕೆ ಸರ್ಕಾರದ ನಿರ್ಧಾರ




**ಬೆಂಗಳೂರು, ಜೂ.26:** ತಜ್ಞರು ಮತ್ತು ಅಧಿಕಾರಿಗಳ ತಾಂತ್ರಿಕ ಸಮಿತಿಯ ವರದಿ ಶಿಫಾರಸ್ಸಿನ ಅನ್ವಯ ಬಂಡೀಪುರ ಮತ್ತು ನಾಗರ ಹೊಳೆ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಜಂಗಲ್ ಸಫಾರಿ (ಉದ್ಯಾನ ಪ್ರವಾಸ) ಪುನರಾರಂಭಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಈ ಬಗ್ಗೆ ತಾಂತ್ರಿಕ ಸಮಿತಿಯ ವರದಿಯನ್ನು ಅಂಗೀಕರಿಸಲಾಗಿದ್ದು, ವೈಜ್ಞಾನಿಕ ಮೌಲ್ಯಮಾಪನದ ನಂತರ ಪರಿಣಾಮಕಾರಿ ಸಾಗಣೆ ಸಾಮರ್ಥ್ಯದ ಆಧಾರದ ಮೇಲೆ ಜಂಗಲ್ ಸಫಾರಿಗೆ ಹಸಿರು ನಿಶಾನೆ ನೀಡಲಾಗಿದೆ. ಸಮಿತಿಯ ಶಿಫಾರಸಿನ ಪ್ರಕಾರ ನಿಯಂತ್ರಿತ ರೀತಿಯಲ್ಲಿ ಜಂಗಲ್ ಸಫಾರಿ ನಡೆಸಲು ಸೂಚನೆ ನೀಡಲಾಗಿದೆ. ಕರ್ನಾಟಕವು ಪರಿಸರ ಪ್ರವಾಸೋದ್ಯಮದಲ್ಲಿ ಅಪಾರ ಸಾಮರ್ಥ್ಯ ಹೊಂದಿದ್ದು, ಸದಾ ಸುಸ್ಥಿರ ಪ್ರವಾಸೋದ್ಯಮ ಮಾದರಿ ಪಾಲಿಸಿಕೊಂಡು ಬಂದಿದೆ. ಇದು ಸ್ಥಳೀಯ ಉದ್ಯೋಗ ಮತ್ತು ಜೀವನೋಪಾಯದ ಅವಕಾಶಗಳ ಸೃಷ್ಟಿಗೆ ಸಹಾಯ ಮಾಡುತ್ತದೆ ಹಾಗೂ ಸ್ಥಳೀಯ ಆರ್ಥಿಕತೆಯನ್ನು ಉತ್ತೇಜಿಸಲು ನೆರವಾಗುತ್ತದೆ.

## ಬಿಡಿಎ ಸಸಿ ನೆಡುವ ಕಾರ್ಯಕ್ರಮ ಇಂದು ಮುಂಜಾನೆ ಮೆಟ್ರೋ ಸೇವೆ

**ಬೆಂಗಳೂರು, ಜೂ.26:** ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ವತಿಯಿಂದ 2026ರ ಜೂನ್ 27ರ ಶನಿವಾರ, ಬೆಂಗಳೂರಿನ ವಿವಿಧ ಭಾಗಗಳಲ್ಲಿ ಆಯೋಜಿಸಲಾಗಿರುವ ಬಿಡಿಎ ಸಸಿ ನೆಡುವ ಕಾರ್ಯಕ್ರಮ ಹಾಗೂ ವಾಕ್‌ಥಾನ್‌ನಲ್ಲಿ ಭಾಗವಹಿಸುವ ಸಾರ್ವಜನಿಕರ ಅನುಕೂಲಕ್ಕಾಗಿ ವಿಶೇಷ ಮುಂಜಾನೆ ಮೆಟ್ರೋ ಸೇವೆ ಒದಗಿಸಲಾಗುತ್ತಿದೆ.

ಈ ಕಾರ್ಯಕ್ರಮಗಳಲ್ಲಿ ಭಾಗವಹಿಸುವವರು ಸುಲಭವಾಗಿ ತಮ್ಮ ಗಮ್ಯಸ್ಥಾನವನ್ನು ತಲುಪುವ ಉದ್ದೇಶದಿಂದ, ನಮ್ಮ ಮೆಟ್ರೋ ಎಲ್ಲಾ ಮಾರ್ಗಗಳ ಎಲ್ಲಾ ಟರ್ಮಿನಲ್ ನಿಲ್ದಾಣಗಳಿಂದ ಬೆಳಿಗ್ಗೆ 4:00 ಗಂಟೆಗೆ ರೈಲು ಸಂಚಾರವನ್ನು ಆರಂಭಿಸಲಿದೆ. ಇದು ಸಾಮಾನ್ಯ ಶನಿವಾರದ ಬೆಳಿಗ್ಗೆ 5:00 ಗಂಟೆಯ ಸೇವೆಗಿಂತ ಒಂದು ಗಂಟೆ ಮುಂಚಿತವಾಗಿರುತ್ತದೆ.

ಸಾರ್ವಜನಿಕರು ಈ ವಿಶೇಷ ಮುಂಜಾನೆ ಮೆಟ್ರೋ ಸೇವೆಯನ್ನು ಸದುಪಯೋಗಪಡಿಸಿಕೊಂಡು, ಬಿಡಿಎ ಸಸಿ ನೆಡುವ ಕಾರ್ಯಕ್ರಮ ಹಾಗೂ ವಾಕ್‌ಥಾನ್‌ನಲ್ಲಿ ಉತ್ಸಾಹದಿಂದ ಭಾಗವಹಿಸುವಂತೆ ಹಾಗೂ ಸುರಕ್ಷಿತ, ಸುಗಮ ಮತ್ತು ಪರಿಸರಸ್ನೇಹಿ ಮೆಟ್ರೋ ಸೇವೆಯನ್ನು ಬಳಸುವಂತೆ ಬಿಎಂಆರ್‌ಸಿಎಲ್ ವಿನಂತಿಸಿಕೊಳ್ಳುತ್ತದೆ.

ಪ್ರಯಾಣಿಕರು ತಮ್ಮ ಪ್ರಯಾಣವನ್ನು ಅದಕ್ಕೆ ಅನುಗುಣವಾಗಿ ಯೋಜಿಸಿಕೊಳ್ಳುವಂತೆ ಕೋರಲಾಗಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಜೂ.29ರಂದು ಬೃಹತ್ ಅಭಿನಂದನಾ ಸಮಾರಂಭ

## ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಸಾವಿರಾರು ವಿದ್ಯುತ್ ನೌಕರರ ಸಮಾಗಮ



**ಬೆಂಗಳೂರು, ಜೂನ್ 26:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ (ಕೆಪಿಟಿಸಿಎಲ್) ನೌಕರರ ಸಂಘ ಹಾಗೂ ವಿವಿಧ ನೌಕರರ ಸಂಘ–ಸಂಘಟನೆಗಳ ಒಕ್ಕೂಟದ ಆಶ್ರಯದಲ್ಲಿ, ಸಂಘದ ಅಧ್ಯಕ್ಷ ಕೆ. ಬಲರಾಮ್ ಅವರ ನೇತೃತ್ವದಲ್ಲಿ, ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನಾ ಸಮಾರಂಭವನ್ನು ಜೂ.29ರಂದು ಬೆಳಗ್ಗೆ 10.00 ಗಂಟೆಗೆ ಬೆಂಗಳೂರಿನ ಅರಮನೆ ಮೈದಾನದ ತ್ರಿಪುರ ವಾಸಿನಿ (ಗೇಟ್ ಸಂಖ್ಯೆ–2) ಯಲ್ಲಿ ಅದ್ದೂರಿಯಾಗಿ ಆಯೋಜಿಸಲಾಗಿದೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಸಂಘದ ಅಧ್ಯಕ್ಷ ಶ್ರೀ ಕೆ. ಬಲರಾಮ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಅಭಿವೃದ್ಧಿ, ಮೂಲಸೌಕರ್ಯಗಳ ಬಲವರ್ಧನೆ, ವಿದ್ಯುತ್ ಕ್ಷೇತ್ರದ ಪ್ರಗತಿ ಹಾಗೂ ಜನಪರ ಆಡಳಿತಕ್ಕೆ ನೀಡುತ್ತಿರುವ ನಾಯಕತ್ವವನ್ನು ಗೌರವಿಸಿ ಅಭಿನಂದಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್, ಕರ್ನಾಟಕದ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳ (ಎಸ್ಕಾಂ) ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರು, ಕೆಪಿಟಿಸಿಎಲ್ ಹಾಗೂ ಎಸ್ಕಾಂಗಳ ಹಿರಿಯ ಅಧಿಕಾರಿಗಳು, ವಿವಿಧ ನೌಕರರ ಸಂಘಗಳ ಪದಾಧಿಕಾರಿಗಳು ಮತ್ತು ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸುವ ಸಾವಿರಾರು ವಿದ್ಯುತ್ ಅಧಿಕಾರಿಗಳು ಹಾಗೂ ನೌಕರರು ಭಾಗವಹಿಸಲಿದ್ದಾರೆ.

ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಲಾಗುವುದು. ಇದೇ ವೇಳೆ ವಿದ್ಯುತ್ ಕ್ಷೇತ್ರದ ಬಲವರ್ಧನೆ, ಖಾಸಗೀಕರಣಕ್ಕೆ ಅವಕಾಶ ನೀಡದೆ ಸರ್ಕಾರಿ ಸ್ವಾಮ್ಯದ ವಿದ್ಯುತ್ ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸುವುದು, ನೌಕರರ ಕಲ್ಯಾಣ, ಗ್ರಾಹಕ ಸೇವೆಯ ಗುಣಮಟ್ಟ ವೃದ್ಧಿ ಹಾಗೂ ವಿದ್ಯುತ್ ಕ್ಷೇತ್ರದ ಭವಿಷ್ಯದ ಅಭಿವೃದ್ಧಿ ಕುರಿತಂತೆ ಮಹತ್ವದ ವಿಚಾರ ವಿನಿಮಯ ನಡೆಯಲಿದೆ ಎಂದು ಅವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕೆಪಿಟಿಸಿಎಲ್ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಶಿವರಾಂ, ಖಜಾಂಚಿ ವರದರಾಜ, ಕರ್ನಾಟಕ ವಿದ್ಯುತ್ ಮಂಡಳಿ ಇಂಜಿನಿಯರ್‌ಗಳ ಅಸೋಸಿಯೇಷನ್‌ನ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್ ದೇಸಾಯಿ ಸೇರಿದಂತೆ ವಿವಿಧ ನೌಕರರ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಚಿಕ್ಕಮಗಳೂರಿನಲ್ಲಿ ಶುಕ್ರವಾರ ಅಶುರಾ ಆಚರಿಸಲು ಶಿಯಾ ಮುಸ್ಲಿಮರು ಮೊಹರಂ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

## ಇಂದಿನಿಂದ ಎರಡು ದಿನಗಳ ಕಾಲ ಉಪರಾಷ್ಟ್ರಪತಿ ಕರ್ನಾಟಕ ಭೇಟಿ

**ನವದೆಹಲಿ, ಜೂ.26:** ಉಪ ರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ನಾಳೆಯಿಂದ ಎರಡು ದಿನಗಳ ಕಾಲ ಕರ್ನಾಟಕಕ್ಕೆ ಭೇಟಿ ನೀಡಲಿದ್ದಾರೆ.ಈ ಭೇಟಿಯ ಸಮಯದಲ್ಲಿ, ಉಪರಾಷ್ಟ್ರಪತಿಗಳು ಶನಿವಾರ ಬೆಂಗಳೂರಿನಲ್ಲಿ ನಡೆಯಲಿರುವ ನಾಡಪ್ರಭು ಕೆಂಪೇಗೌಡರ 517 ನೇ ಜನ್ಮ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ. ಭಾನುವಾರ, ಉಪರಾಷ್ಟ್ರಪತಿಗಳು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಮತ್ತು ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನದ ಆಚರಣೆಯ ಭಾಗವಾಗಿ ಆಯೋಜಿಸ ಲಾಗಿರುವ ನಶ ಮುಕ್ತ ಭಾರತ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

## ಮಂಗಳೂರಿನ ಲೇಡಿ ಗೋಷನ್ ಸರ್ಕಾರಿ ಆಸ್ಪತ್ರೆಯಲ್ಲಿ ತಾಯಿ ಎದೆಹಾಲು ಬ್ಯಾಂಕ್: 8265 ತಾಯಂದಿರಿಂದ 508 ಲೀಟರ್ ಎದೆಹಾಲು ಸಂಗ್ರಹ

**ಬೆಂಗಳೂರು,ಜೂ.26:** ಮಂಗಳೂರಿನ ಲೇಡಿ ಗೋಷನ್ ಸರ್ಕಾರಿ ಆಸ್ಪತ್ರೆಯಲ್ಲಿ ತಾಯಿಯ ಮಮತೆಯಷ್ಟೇ ಪವಿತ್ರವಾದ ಕ್ರಾಂತಿಕಾರಿ ಯೋಜನೆ ನಿಶ್ಯಬ್ದವಾಗಿ ನಡೆಯುತ್ತಿದೆ. 'ಅಮೃತ ಘಟಕ' ಎಂದು ಕರೆಯಲ್ಪಡುವ ಈ 'ಹ್ಯೂಮನ್ ಮಿಲ್ಕ್ ಬ್ಯಾಂಕ್' (ತಾಯಿಯ ಎದೆಹಾಲಿನ ಬ್ಯಾಂಕ್), ಅದೆಷ್ಟೋ ನವಜಾತ ಶಿಶುಗಳ ಪಾಲಿಗೆ ಸಂಜೀವಿನಿಯಾಗಿ ಪರಿಣಮಿಸಿದೆ. ಅವಧಿಪೂರ್ವ ಜನನ, ತೂಕ ಕಡಿಮೆ ಅಥವಾ ತಾಯಿಯ ಅನಾರೋಗ್ಯದಿಂದ ಅಮೃತ ಸಮಾನವಾದ ಎದೆ ಹಾಲಿನಿಂದ ವಂಚಿತರಾಗುವ ಕಂದಮ್ಮಗಳಿಗೆ ಮಂಗಳೂರಿನ ಲೇಡಿ ಗೋಷನ್ ಸರ್ಕಾರಿ ಆಸ್ಪತ್ರೆಯಲ್ಲಿರುವ ಅಮೃತ ಘಟಕ ಆಶಾಕಿರಣವಾಗಿದ್ದು, ಈ ಭಾಗದಲ್ಲಿ ಶಿಶು ಮರಣ ಪ್ರಮಾಣ ತಗ್ಗಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಿದೆ.

ಕಾರಣಾಂತರಗಳಿಂದ ತೀವ್ರ ನಿಗಾ ಘಟಕದಲ್ಲಿ ದಾಖಲಾಗುವ ಶಿಶುಗಳಿಗೆ ತಾಯಿಯ ಹಾಲು ಅತ್ಯಂತ ನಿರ್ಣಾಯಕ. ಅನೇಕ ಸಂದರ್ಭಗಳಲ್ಲಿ ತಾಯಿ ಮಗುವಿಗೆ ಎದೆಹಾಲು ನೀಡಲು ಸಾಧ್ಯವಾಗುವುದಿಲ್ಲ. ಇಂತಹ ಸಂದಿಗ್ಧ ಪರಿಸ್ಥಿತಿಯನ್ನು ಸುಧಾರಿಸುವುದು ಮತ್ತು ಯಾವುದೇ ನವಜಾತ ಶಿಶುವು ತಾಯಿಯ ಎದೆಹಾಲಿನ ಕೊರತೆಯಿಂದ ಬಳಲಬಾರದು ಎಂಬ ಉದ್ದೇಶದಿಂದ 2022ರ ಫೆಬ್ರವರಿ 9 ರಂದು ಲೇಡಿ ಗೋಷನ್ ಆಸ್ಪತ್ರೆಯಲ್ಲಿ ಈ ಘಟಕ ಸ್ಥಾಪಿಸಲಾಗಿದೆ.

ಈ ಘಟಕದಲ್ಲಿ ದಾನಿ ತಾಯಂದಿರಿಂದ ಸಂಗ್ರಹಿಸಿದ ಸುರಕ್ಷಿತ ಮತ್ತು ಪೌಷ್ಠಿಕಾಂಶಯುಕ್ತ ಹಾಲನ್ನು ಒದಗಿಸುವುದೇ ಈ ಬ್ಯಾಂಕಿನ ಮೂಲ ಧ್ಯೇಯವಾಗಿದೆ. ಈ ಬ್ಯಾಂಕಿನ ಕಾರ್ಯಚಟುವಟಿಕೆ ಸಂಪೂರ್ಣವಾಗಿ ವೈಜ್ಞಾನಿಕ ಮತ್ತು ಸುರಕ್ಷತಾ ಮಾನದಂಡಗಳನ್ನು ಆಧರಿಸಿದೆ. ತಮ್ಮ ಮಗುವಿಗೆ ಹಾಲುಣಿಸಿದ ನಂತರವೂ ಹೆಚ್ಚುವರಿ ಹಾಲು ಉತ್ಪತ್ತಿಯಾಗುವ ಆರೋಗ್ಯವಂತ ತಾಯಂದಿರು ಸ್ವಯಂಪ್ರೇರಿತರಾಗಿ ಇಲ್ಲಿ ಹಾಲನ್ನು ದಾನ ಮಾಡಬಹುದಾಗಿದೆ. ಎದೆಹಾಲನ್ನು ದಾನ ಮಾಡುವುದಕ್ಕೆ ಬರುವ ತಾಯಿಯ ಸಂಪೂರ್ಣ ಆರೋಗ್ಯ ತಪಾಸಣೆ ನಡೆಸಲಾಗುತ್ತದೆ. ಈ ಮೂಲಕ ಸಂಗ್ರಹಿಸಿದ ಹಾಲನ್ನು ವೈಜ್ಞಾನಿಕವಾಗಿ ಪಾಶ್ಚರೀಕರಣ ಪ್ರಕ್ರಿಯೆಗೆ ಒಳಪಡಿಸಲಾಗುತ್ತದೆ.


ಈ ಪ್ರಕ್ರಿಯೆಯಲ್ಲಿ ಹಾಲನ್ನು ನಿರ್ದಿಷ್ಟ ತಾಪಮಾನದಲ್ಲಿ ಬಿಸಿ ಮಾಡಿ ತಂಪಾಗಿಸಲಾಗುತ್ತದೆ. ಇದರಿಂದ ಹಾಲು ಶಿಶುವಿನ ಬಳಕೆಗೆ ಅತ್ಯಂತ ಸುರಕ್ಷಿತವಾಗುತ್ತದೆ. ಪಾಶ್ಚರೀಕರಿಸಿದ ಹಾಲನ್ನು –20 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲಿ ಶೈತ್ಯೀಕರಿಸಿ ಸಂರಕ್ಷಿಸಲಾಗುತ್ತದೆ. ಈ ರೀತಿ ಶೇಖರಿಸಿದ ಹಾಲನ್ನು 6 ತಿಂಗಳವರೆಗೆ ಅದರ ಪೌಷ್ಠಿಕಾಂಶಗಳು ನಷ್ಟವಾಗದಂತೆ ಕಾಪಾಡಬಹುದು. ಈ ಹಾಲನ್ನು ವೈದ್ಯರ ಸಲಹೆಯ ಮೇರೆಗೆ, ಅವಧಿಪೂರ್ವವಾಗಿ ಜನಿಸಿದ, ಕಡಿಮೆ ತೂಕದ, ಅನಾರೋಗ್ಯದಿಂದ ಬಳಲುತ್ತಿರುವ, ತಾಯಿಗೆ ಹಾಲುಣಿಸಲು




ಸಾಧ್ಯವಾಗದ ಶಿಶುಗಳಿಗೆ ನೀಡಲಾಗುತ್ತದೆ. ಘಟಕ ಆರಂಭವಾದ ದಿನದಿಂದ ಸುಮಾರು 8265 ಮಂದಿ ತಾಯಂದಿರು 508 ಲೀಟರ್ ಎದೆಹಾಲು ದಾನ ಮಾಡಿದ್ದು 366 ಶಿಶುಗಳಿಗೆ ನೆರವಾಗಿದೆ. ಮಂಗಳೂರಿನ ಲೇಡಿ ಗೋಷನ್ ಆಸ್ಪತ್ರೆಯ 'ಅಮೃತ ಘಟಕ'ವು ದಾನಿ ತಾಯಂದಿರ ಉದಾರತೆ, ವೈದ್ಯಕೀಯ ಸಿಬ್ಬಂದಿಯ ಪರಿಶ್ರಮ ಮತ್ತು ವೈಜ್ಞಾನಿಕ ತಂತ್ರಜ್ಞಾನದ ಸಮ್ಮಿಲನದಿಂದಾಗಿ ಒಂದು ಯಶಸ್ವಿ ಮಾದರಿಯಾಗಿ ಹೊರಹೊಮ್ಮಿದೆ. ಇದು ನೂರಾರು ಕುಟುಂಬಗಳಲ್ಲಿ ಸಂತಸದ ನಗು ಮೂಡಿಸಿದ್ದು, ಭವಿಷ್ಯದಲ್ಲಿ ಇನ್ನಷ್ಟು ಶಿಶುಗಳ ಬಾಳಿಗೆ ಬೆಳಕಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಈ ಕುರಿತು ಫಲಾನುಭವಿ ಮೋಹಿನಿ ಮಾತನಾಡಿ, ಅವಧಿಗೂ ಮುನ್ನ ಹುಟ್ಟಿದ್ದ ಮಗುವಿನ ತೂಕವು ಕಡಿಮೆ ಇತ್ತು. ಎದೆಹಾಲು ಇರಲಿಲ್ಲ. ಹಾಗಾಗಿ ಚಿಂತೆಗೊಳಗಾಗಿದ್ದ ನಮಗೆ ಈ ಘಟಕ ವರದಾನವಾಯಿತು ಎಂದು ಹೇಳಿದರು. ಮತ್ತೋರ್ವ ಫಲಾನುಭವಿ ರಿಯಾನ ಮರಿಯಾ ಮಾತನಾಡಿ, ಹೆರಿಗೆ ಬಳಿಕ ಮಗುವಿಗೆ ಎದೆಹಾಲಿನ ಕೊರತೆ ಉಂಟಾದಾಗ ಹ್ಯೂಮನ್ ಮಿಲ್ಕ್ ಬ್ಯಾಂಕ್ ನೆರವಿಗೆ ಬಂದಿದ್ದು, ಇದೊಂದು ಸಾಮಾಜಿಕ ಅಂದೋಲನವಾಗಬೇಕಿದೆ ಎಂದರು.

ಲೇಡಿ ಗೋಷನ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ದುರ್ಗಾಪ್ರಸಾದ್ ಮಾತನಾಡಿ, ಪ್ರಸ್ತುತ ನಮ್ಮ ಲೇಡಿಗೋಷನ್ ಹೆರಿಗೆ ಆಸ್ಪತ್ರೆಯಲ್ಲಿ ಮಾಸಿಕ 500– 600 ಹೆರಿಗೆ ಆಗುತ್ತದೆ. ಇದರಲ್ಲಿ ಶೇಕಡಾ 32 ರಷ್ಟು ಅಪರಿಪಕ್ವತೆ ಇರುವ ಕಡಿಮೆ ತೂಕದ ಮಕ್ಕಳು ಜನಿಸುತ್ತಾರೆ. ತಾಯಿ ಮತ್ತು ಮಕ್ಕಳ ಸಾವಿನ ಪ್ರಮಾಣವನ್ನು ಶೂನ್ಯಕ್ಕೆ ತರುವ ಉದ್ದೇಶದಿಂದ ಎದೆಹಾಲು ಸಂಗ್ರಹಿಸಿ ನವಜಾತಶಿಶುಗಳಿಗೆ ನೀಡಲಾಗುತ್ತಿದೆ ಎಂದರು. ಆಸ್ಪತ್ರೆಯ ಮಕ್ಕಳ ತಜ್ಞೆ ಡಾ. ಮನಿಷಾ ಮಾತನಾಡಿ, ಅವಧಿ ಪೂರ್ವ ಹುಟ್ಟುವ ಮಕ್ಕಳ ತಾಯಿಗೆ ಸರಿಯಾಗಿ ಎದೆ ಹಾಲು ಇರುವುದಿಲ್ಲ. ಮಗು ತಾಯಿಯ ಹೊಟ್ಟೆಯಲ್ಲಿ ಇರಬೇಕಾದ ಸಮಯವನ್ನು ಆಸ್ಪತ್ರೆಯ ಎನ್‌ಐಸಿಯುವಿನಲ್ಲಿ ನೀಡಬೇಕಾಗುತ್ತದೆ. ಅಂತಹ ಸಮಯದಲ್ಲಿ ಸಂಗ್ರಹಿಸಿದ ಎದೆಹಾಲನ್ನು ನೀಡಲಾಗುತ್ತಿದೆ. ಆಸ್ಪತ್ರೆಯ ಎನ್‌ಐಸಿಐ ಘಟಕದ ಅಧಿಕಾರಿ ಜಯಲಕ್ಷ್ಮೀ ಮಾತನಾಡಿ, ಮಿಲ್ಕ್ ಬ್ಯಾಂಕ್ ಸ್ಥಾಪನೆಗೂ ಮುನ್ನ ಅವಧಿ ಪೂರ್ವ ಜನಿಸಿದ ಮಕ್ಕಳಿಗೆ ಫಾರ್ಮುಲ ಫೀಡ್ ಕೊಟ್ಟರೆ ಅದರಿಂದ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿತ್ತು. ಇದೀಗ ಮಿಲ್ಕ್ ಬ್ಯಾಂಕ್‌ನಲ್ಲಿ ಸಿಗುವ ತಾಯಿ ಹಾಲು ಎನ್‌ಐಸಿಯುವಿನಲ್ಲಿರುವ ಮಕ್ಕಳಿಗೆ ಮಹತ್ವದ ಪಾತ್ರ ವಹಿಸುತ್ತಿದೆ ಎಂದರು.

## ಪ್ರೇಕ್ಷಕರ ಮನಸೆಳೆದ ಸಂತಕವಿ ಕನಕದಾಸರ ಪದ್ಯಗಳ ನೃತ್ಯರೂಪಕ



**ಕಲಬುರಗಿ, ಜೂ. 26 :** ನೃತ್ಯ, ಸಂಗೀತ ಹಾಗೂ ನಾಟಕಗಳು ಅತ್ಯಂತ ಪರಿಣಾಮಕಾರಿ ಮಾಧ್ಯಮ ಗಳಾಗಿದ್ದು, 'ಮುತ್ತು ಬಂದಿದೆ ಕೇರಿಗೆ' ಸಂಗೀತ–ನೃತ್ಯರೂಪಕ ಜನರ ಮೇಲೆ ಉತ್ತಮ ಪ್ರಭಾವ ಬೀರುವಂತಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣ ಕುಮಾರ ಎಂ.ವೈ. ಪಾಟೀಲ ಹೇಳಿದರು.

ನಗರದ ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಂಘ ಹಾಗೂ ಕಲಬುರಗಿ ಆರ್ಟ್ ಥಿಯೇಟರ್‌ಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ "ಮುತ್ತು ಬಂದಿದೆ ಕೇರಿಗೆ" ಸಂತಕವಿ ಕನಕದಾಸರ ಕುರಿತ ಸಂಗೀತ–ನೃತ್ಯ ರೂಪಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತ, ಕನಕದಾಸರ ವೈಚಾರಿಕ ಸಾಹಿತ್ಯ ಸಮಾಜದಲ್ಲಿ ಪರಿವರ್ತನೆ ತರಬಲ್ಲ ಶಕ್ತಿಯನ್ನು ಹೊಂದಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಮಾತನಾಡಿ, ಭಾಷೆ ಹಾಗೂ ತತ್ವದ ದೃಷ್ಟಿಯಿಂದ ಕನಕದಾಸರು ಕನ್ನಡ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ ಎಂದರು. 12ನೇ ಶತಮಾನದ ವಚನಕಾರರ ನಂತರ ಜಾತಿ ಮತ್ತು ವರ್ಗ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತಿದ ಪ್ರಮುಖ ಚಿಂತಕರಾಗಿ ಕನಕದಾಸರನ್ನು ಅವರು ಬಣ್ಣಿಸಿದರು.ಮುಖ್ಯ ಅತಿಥಿಯಾಗಿ ಆಗಮಿಸಿದ್ದ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಹಾಜರಿದ್ದರು.

# ಆಯುಕ್ತ ವೈ. ಮಂಜುನಾಥ್ ನಿವಾಸದ ಮೇಲೆ ಇಡಿ ದಾಳಿ: ರಾಜಕೀಯ ಅಧಿಕಾರಿ ವಲಯದಲ್ಲಿ ತೀವ್ರ ಸಂಚಲನ



**ಬೆಳಗಾವಿ, ಜೂ.26:** ವಿಭಾಗದ ಅಬಕಾರಿ ಇಲಾಖೆ ಹೆಚ್ಚುವರಿ ಆಯುಕ್ತ ವೈ. ಮಂಜುನಾಥ್ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ ನಡೆಸಿರುವ ಭರ್ಜರಿ ದಾಳಿ ಇಡೀ ರಾಜ್ಯ ರಾಜಕೀಯ ಹಾಗೂ ಅಧಿಕಾರಿ ವಲಯದಲ್ಲಿ ತೀವ್ರ ಸಂಚಲನ ಮೂಡಿಸಿದೆ.

ಸತತ 25 ಗಂಟೆಗಳ ಕಾಲ ನಡೆದ ಈ ದಾಳಿಯಿಂದಾಗಿ ಸಚಿವ ಸತೀಶ್ ಜಾರಕಿಹೊಳಿ ಅವರ ತಂಗಿ ಗಂಡನೇ ಆಗಿರುವ ಈ ವೈ.ಮಂಜುನಾಥ್ ಯಾರು? ಅವರ ಹಿನ್ನೆಲೆ ಏನು ಎಂಬ ಕುತೂಹಲ ಎಲ್ಲರಲ್ಲೂ ಮೂಡಿದೆ. ಆ ವಿವರ ಇಲ್ಲಿದೆ.ವೈ. ಮಂಜುನಾಥ್ ಮೂಲತಃ ಬಳ್ಳಾರಿ ಜಿಲ್ಲೆಯ ಹರಪನಹಳ್ಳಿ ತಾಲೂಕಿನ ಅರಸಿಕೇರಿ ಗ್ರಾಮದವರು. ಇವರು ಮಾಜಿ ಸಂಸದ ದೇವೇಂದ್ರಪ್ಪ ಅವರ ಪುತ್ರ. ಸುಮಾರು 15 ವರ್ಷಗಳ ಹಿಂದೆ ಗೋಕಾಕ್‌ನ ಪ್ರಭಾವಿ ಜಾರಕಿಹೊಳಿ ಮನೆತನದ ಕೊನೆಯ ಮಗಳು, ಅಂದರೆ ಸಚಿವ ಸತೀಶ್ ಜಾರಕಿಹೊಳಿ ಅವರ ತಂಗಿಯನ್ನು ಮದುವೆಯಾಗುವ ಮೂಲಕ ಜಾರಕಿಹೊಳಿ ಕುಟುಂಬದ ಅಳಿಯನಾದರು.ಮಂಜುನಾಥ್ ತಮ್ಮ ಉನ್ನತ ವ್ಯಾಸಂಗವನ್ನು ಮೈಸೂರಿನಲ್ಲಿ ಮುಗಿಸಿದ್ದರು. ವೃತ್ತಿ ಜೀವನದ ಆರಂಭದಲ್ಲಿ ಇವರು ಪೊಲೀಸ್ ಇಲಾಖೆಯಲ್ಲಿ ಪಿಎಸ್‌ಐ ಆಗಿ ಕೆಲಸಕ್ಕೆ ಸೇರಿದ್ದರು. ಆ ಬಳಿಕ ಕೆಎಎಸ್ ಪರೀಕ್ಷೆ ಪಾಸ್ ಮಾಡಿ, ಅಬಕಾರಿ ಇಲಾಖೆಗೆ ಹೆಜ್ಜೆಯಿಟ್ಟರು. 2012–13ರ ಅವಧಿಯಲ್ಲಿ ಮೈಸೂರು ಜಿಲ್ಲೆಯ ಅಬಕಾರಿ ಡಿಸಿಯಾಗಿ ಕಾರ್ಯ ನಿರ್ವಹಿಸಿದ್ದರು.

2015ರಲ್ಲಿ ಬೆಳಗಾವಿಗೆ ವರ್ಗಾವಣೆಯಾಗಿ ಬಂದ ಮಂಜುನಾಥ್, ಕಳೆದ 11 ವರ್ಷಗಳಿಂದ ಅದೇ ಭಾಗದಲ್ಲಿ ಆಧಿಪತ್ಯ ಸ್ಥಾಪಿಸಿದ್ದಾರೆ. ಅಲ್ಲೇ ಹಂತ ಹಂತವಾಗಿ ಪ್ರಮೋಷನ್ ಪಡೆಯುತ್ತಾ ಸದ್ಯ ಬೆಳಗಾವಿ ವಿಭಾಗದ ಅಬಕಾರಿ ಇಲಾಖೆಯ ಹೆಚ್ಚುವರಿ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

**ರಾಜ್ಯಾದ್ಯಂತ ಬೇನಾಮಿ ಬಾರ್‌ಗಳು:** ಮಂಜುನಾಥ್ ಅವರು ತಮ್ಮ ಪ್ರಭಾವ ಬಳಸಿ ಸಂಬಂಧಿಕರು ಹಾಗೂ ಆಪ್ತರ ಹೆಸರಿನಲ್ಲಿ ಬೆಳಗಾವಿ, ಮೈಸೂರು, ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಹಲವು ಬಾರ್ ಲೈಸೆನ್ಸ್‌ಗಳನ್ನು ಹೊಂದಿದ್ದಾರೆ ಎನ್ನಲಾಗಿದೆ.ಲಂಚ ಹಾಗೂ ಹವಾಲಾ ದಂಧೆ: ಹೊಸ ಬಾರ್ ಲೈಸೆನ್ಸ್ ನೀಡಲು ಹಾಗೂ ಹಳೆಯ ಲೈಸೆನ್ಸ್ ನವೀಕರಿಸಲು ಕೋಟ್ಯಂತರ ರೂಪಾಯಿ ಲಂಚ ಪಡೆದ ಆರೋಪ ಇವರ ಮೇಲಿದೆ.

ಹೀಗೆ ಬಂದ ಅಕ್ರಮ ಹಣವನ್ನು ವಿದೇಶದಲ್ಲಿ ಹೂಡಿಕೆ ಮಾಡಿರುವುದು ಹಾಗೂ ಹವಾಲಾ ದಂಧೆಯಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಇಡಿ ಇವರ ಆಸ್ತಿ ಕೋಟೆಯನ್ನು ಬೇಟೆಯಾಡಿದೆ.ಸದ್ಯ 25 ಗಂಟೆಗಳ ಇಡಿ ದಾಳಿ ಮುಕ್ತಾಯವಾಗಿದ್ದು, ಕೆಜಿಗಟ್ಟಲೆ ಚಿನ್ನ ಹಾಗೂ ಬೇನಾಮಿ ಆಸ್ತಿ ಪತ್ರಗಳು ಪತ್ತೆಯಾಗಿವೆ. ಜಾರಕಿಹೊಳಿ ಕುಟುಂಬದ ನಿಕಟ ಸಂಬಂಧಿಯಾಗಿರುವುದರಿಂದ ಈ ದಾಳಿ ಸದ್ಯ ಸ್ಯಾಂಡಲ್ ವುಡ್ ನಗರಿ ಮತ್ತು ರಾಜಕೀಯ ವಲಯದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ.

# ಬಾಲ್ಯವಿವಾಹ ನಿರ್ಮೂಲನೆಗೆ ಆರು ಕಿಶೋರಿ ಕೇಂದ್ರಗಳ ಆರಂಭ: ರಾಯಚೂರು ಸಿಇಓ

**ರಾಯಚೂರು, ಜೂ. 26:** ಬಾಲ್ಯವಿವಾಹ, ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಜಿಲ್ಲೆಯಾದ್ಯಂತ ಪೈಲಟ್ ಮಾದರಿಯಲ್ಲಿ 6 ಕಿಶೋರಿ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಸಿಇಓ ಈಶ್ವರಕುಮಾರ ಕಾಂದೂ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಾಮಾಜಿಕ ಪಿಡುಗಾಗಿರುವ ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸುವುದು,

ದೈಹಿಕ ಸದೃಢತೆಗೆ ಕ್ರೀಡಾ ಚಟುವಟಿಕೆ ಗಳಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸುವುದು, ಶಿಕ್ಷಣದ ಮಹತ್ವ ತಿಳಿಸುವುದು, ಮುಟ್ಟಿನ ನಿರ್ವಹಣೆ ಕುರಿತು ಅರಿವು ಮೂಡಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಕಾರದಲ್ಲಿ 6 ಕಿಶೋರಿ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಹೇಳಿದರು.

ಕಿಶೋರಿ ಕೇಂದ್ರಗಳಲ್ಲಿ ಮಾನಸಿಕ ರೋಗ ತಜ್ಞರು, ಸ್ತ್ರೀರೋಗ ತಜ್ಞರು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮ ಕುರಿತು ಮಾಹಿತಿ ಒದಗಿಸಲಿದ್ದಾರೆ. ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಹಲವಾರು ಕ್ರಮಗಳನ್ನು ಕೈಗೊಂಡರೂ ಪ್ರಕರಣಗಳು ವರದಿಯಾಗುತ್ತಿವೆ. ಮುಖ್ಯವಾಗಿ ಬಾಲ್ಯವಿವಾಹದಿಂದ ಇಡೀ ಸಾಮಾಜಿಕ ಜೀವನ ಅಸ್ತವ್ಯಸ್ತವಾಗುತ್ತದೆ. ಬಡತನ, ಅನಕ್ಷರತೆ ಸೇರಿ ವಿವಿಧ ಕಾರಣಗಳಿಂದ ಹದಿಹರೆಯದಲ್ಲೇ ಮಕ್ಕಳು ಮದುವೆಯ ಬಂಧನಕ್ಕೆ ಒಳಗಾಗಿ, ದೈಹಿಕ ಮತ್ತು ಮಾನಸಿಕವಾಗಿ ಕುಗ್ಗುತ್ತಾರೆ. ಬಾಲ್ಯವಸ್ಥೆಯಲ್ಲಿಯೇ ಗರ್ಭಿಣಿಯಾಗುವುದರಿಂದ ಅವಧಿ ಪ್ರಸವಪೂರ್ವ, ಅಪೌಷ್ಠಿಕ ಮಕ್ಕಳ ಜನನ, ರಕ್ತಹೀನತೆ ಸೇರಿ ವಿವಿಧ ಸಮಸ್ಯೆಗಳಿಂದ ಬಳಲುತ್ತಾರೆ. ಇವುಗಳು ದೇಶದ ಅಭಿವೃದ್ಧಿಯನ್ನು ಕುಂಠಿತಗೊಳಿಸುತ್ತವೆ ಎಂದರು. ರಾಜೀವ್ ಗಾಂಧಿ ವಸತಿ ನಿಗಮದ ಪ್ರಧಾನ ವ್ಯವಸ್ಥಾಪಕ ಉಸ್ಮಾನ್ ಪಾಷಾ ಮಾತನಾಡಿ, ನಿಗಮದ ನಿರ್ಮಾಣ ಹಂತದ ಮನೆಗಳನ್ನು ಪೂರ್ಣಗೊಳಿಸಲು ಫಲಾನುಭವಿಗಳಿಗೆ ತಿಳಿಸಬೇಕು. ಹಳೆ ಗುರಿಯನ್ನು ಪೂರ್ಣಗೊಳಿಸಿದರೆ ಮಾತ್ರ ಹೊಸ ಪ್ರಸ್ತಾವಗಳನ್ನು ಸಲ್ಲಿಸಲು ಸುಲಭವಾಗಲಿದೆ ಎಂದು ತಿಳಿಸಿದರು.



ರಾಯಚೂರು ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ ಅವರ ಅಧ್ಯಕ್ಷತೆಯಲ್ಲಿ ನಡೆದ ಬಾಲ್ಯ ವಿವಾಹ ನಿಮೂಲನೆ ಕುರಿತ ಸಭೆಯಲ್ಲಿ ಪಾಲ್ಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿ

**ಪ್ರಶಸ್ತಿ ಪ್ರದಾನ:** ಮಸ್ಕಿ ತಾಲೂಕಿನ ಹಿರೇದಿನ್ನಿ ಪಿಡಿಒ ಲಕ್ಷ್ಮಣ, ರಾಯಚೂರು ತಾಲ್ಲೂಕಿನ ಕಲ್ಮಲಾ ಪಿಡಿಒ ಮದ್ದುರಾಜ್ ಅವರಿಗೆ ಉತ್ತಮ ಪಿಡಿಒ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಜಿ.ಪಂ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಯೋಜನಾ ನಿರ್ದೇಶಕ ಶರಣಬಸವರಾಜ್, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ, ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ವಿವಿಧ ತಾ.ಪಂಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಇಲಾಖೆಯ ಎಂಜಿನಿಯರ್, ಸಹಾಯಕ ನಿರ್ದೇಶಕರು, ಅಧಿಕಾರಿಗಳು ಹಾಜರಿದ್ದರು.

# ಜ್ಞಾನಸುಧಾ ವಿದ್ಯಾಲಯದಲ್ಲಿ ಯೋಗಾಸನ ಸ್ಪರ್ಧೆ



**ಬೀದರ, ಜೂ. 26:** ಅಂತರ ರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ತಾಲ್ಲೂಕಿನ ಮಾಮನಕೇರಿ ಸಮೀಪದ ಜ್ಞಾನಸುಧಾ ವಿದ್ಯಾಲಯ ದಲ್ಲಿ ದೊಡ್ಡ ಪ್ರಮಣದಲ್ಲಿ ಮೂರು ಪ್ರತ್ಯೇಕ ವಿಭಾಗಗಳಲ್ಲಿ ಯೋಗಾಸನ ಸ್ಪರ್ಧೆ ನಡೆಯಿತು.

ಸಬ್ ಜೂನಿಯರ್ ವಿಭಾಗದ ಸ್ಪರ್ಧೆಯಲ್ಲಿ 1 ರಿಂದ 4ನೇ ತರಗತಿ, ಜೂನಿಯರ್ ವಿಭಾಗದಲ್ಲಿ 5 ರಿಂದ 7ನೇ ತರಗತಿ ಹಾಗೂ ಸಿನಿಯರ್ ವಿಭಾಗದ ಸ್ಪರ್ಧೆಯಲ್ಲಿ 8 ರಿಂದ 10ನೇ ತರಗತಿ ವಿದ್ಯಾರ್ಥಿಗಳು ಪಾಲ್ಗೊಂಡರು.

ಸಬ್ ಜೂನಿಯರ್ ವಿಭಾಗದ ಸ್ಪರ್ಧೆಯಲ್ಲಿ ಶೌರ್ಯ ಡಾ. ಸಿದ್ಧಾರ್ಥ (ಪ್ರಥಮ), ಶಾಂತ್ವಿ ಡಾ. ಉಮೇಶ್ (ದ್ವಿತೀಯ), ಆರುಷಿ ಪ್ರವೀಣ್ (ತೃತೀಯ), ಚಿರಾಯು ಜಯಪ್ರಕಾಶ್, ಶಿವಾಂಜಯ್ ಡಾ. ಶ್ರೀಕಾಂತರೆಡ್ಡಿ (ಸಮಧಾನಕರ ಬಹುಮಾನ) ಸ್ಥಾನ ಗಳಿಸಿದರು. ಜೂನಿಯರ್ ವಿಭಾಗದ ಸ್ಪರ್ಧೆಯಲ್ಲಿ ಆರ್ಯ ಮೂರ್ತಿ ರವಿಚಂದ್ರ (ಪ್ರಥಮ), ಅಮೃತಾ ಸಂದೀಪಕುಮಾರ (ದ್ವಿತೀಯ), ಬಿ. ಸಾನ್ವಿ ಸಂತೋಷಕುಮಾರ (ತೃತೀಯ), ವರುಣ ತೇಜ್ ಸಂಜೀವಕುಮಾರ (ಸಮಧಾನಕರ ಬಹುಮಾನ) ಸ್ಥಾನ ಪಡೆದರು. ಸಿನಿಯರ್ ವಿಭಾಗದ ಸ್ಪರ್ಧೆಯಲ್ಲಿ ರೇವಣಸಿದ್ದೇಶ್ವರ ರಾಜಕುಮಾರ (ಪ್ರಥಮ), ಕಾರ್ತಿಕ ವಿಠಲ (ದ್ವಿತೀಯ), ಖುಷಿ ಮಹೇಶ್ (ತೃತೀಯ), ಸಾಚಿ ಮಹಾದೇವ (ಸಮಧಾನಕರ ಬಹುಮಾನ) ಸ್ಥಾನ ಗಳಿಸಿದರು.

ಯೋಗದಿಂದ ಉತ್ತಮ ಆರೋಗ್ಯ ಕಾಯ್ದುಕೊಳ್ಳಲು ಸಾಧ್ಯವಿದೆ. ಏಕಾಗ್ರತೆಯೂ ವೃದ್ಧಿಸುತ್ತದೆ. ಹೀಗಾಗಿ ವಿದ್ಯಾರ್ಥಿಗಳು ನಿತ್ಯ ಯೋಗ ಮಾಡಬೇಕು ಎಂದು ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಜ್ಞಾನಸುಧಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಪೂರ್ಣಿಮಾ ಜಿ. ಹೇಳಿದರು.

ವಿಶ್ವಕ್ಕೆ ಯೋಗ ಪರಿಚಯಿಸಿದ ಹಿರಿಮೆ ಭಾರತದ್ದು. ಯೋಗ ಮಾನಸಿಕ ಒತ್ತಡ ನಿವಾರಣೆಗೆ ದಿವ್ಯ ಔಷಧ ಎಂದು ಜ್ಞಾನಸುಧಾ ಸಮೂಹ ಸಂಸ್ಥೆಯ ನಿರ್ದೇಶಕ ಮುನೇಶ್ವರ ಲಾಖಾ ತಿಳಿಸಿದರು.

# ಅಡ್ಡ ಮತದಾನಕ್ಕೆ ಸಂಬಂಧ ಸತ್ಯಶೋಧನಾ ಸಮಿತಿಯ ಸಂಪೂರ್ಣ ವರದಿ ಸಿದ್ಧ: ಸಿ.ಟಿ.ರವಿ

**ಚಿಕ್ಕಮಗಳೂರು, ಜೂ.26:** ಕರ್ನಾಟಕ ರಾಜಕೀಯದಲ್ಲಿ ಭಾರಿ ಸಂಚಲನ ಮೂಡಿಸಿರುವ ವಿಧಾನ ಪರಿಷತ್ ಚುನಾವಣೆಯ ಅಡ್ಡ ಮತದಾನಕ್ಕೆ ಸಂಬಂಧಿಸಿದಂತೆ ಬಿಜೆಪಿ ರಚಿಸಿದ್ದ ಸತ್ಯಶೋಧನಾ ಸಮಿತಿಯು ತನ್ನ ಸಂಪೂರ್ಣ ವರದಿಯನ್ನು ಸಿದ್ಧಪಡಿಸಿದೆ.

ಈ ವರದಿಯನ್ನು ಸದ್ಯ ಅತ್ಯಂತ ಗೋಪ್ಯವಾಗಿ ಸೀಲ್ಡ್ ಕವರ್‌ನಲ್ಲಿ ಇಡಲಾಗಿದೆ ಎಂದು ಸತ್ಯಶೋಧನಾ ಸಮಿತಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ,ವರದಿ ಸಲ್ಲಿಕೆಯ ಪ್ರಕ್ರಿಯೆಯ ಬಗ್ಗೆ ಮಾಹಿತಿ ನೀಡಿದರು. ಸದ್ಯ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ದೆಹಲಿ ಪ್ರವಾಸದಲ್ಲಿದ್ದು, ಅವರು ಬೆಂಗಳೂರಿಗೆ ಮರಳಿದ ತಕ್ಷಣ ಸಮಿತಿಯ ಮೂವರು ಸದಸ್ಯರು ಒಟ್ಟಾಗಿ ಹೋಗಿ ವರದಿಯನ್ನು ಹಸ್ತಾಂತರಿಸಲಿದ್ದಾರೆ. ಈ ವರದಿಯನ್ನು ಯಾವ ಆಧಾರದ ಮೇಲೆ ಮತ್ತು ಹೇಗೆ ಸಿದ್ಧಪಡಿಸಲಾಗಿದೆ ಎಂಬ ಸಂಪೂರ್ಣ ವಿವರಣೆಯನ್ನು ನೀಡಿದ ಬಳಿಕವಷ್ಟೇ ಅದನ್ನು ಪಕ್ಷದ ಮುಖಂಡರಿಗೆ ಅಧಿಕೃತವಾಗಿ ಒಪ್ಪಿಸಲಾಗುತ್ತದೆ. ವರದಿ ಸಿದ್ಧತೆಗಾಗಿ ಪಕ್ಷದ ಹಲವು ಪ್ರಮುಖ ವ್ಯಕ್ತಿಗಳು ಮತ್ತು ನಾಯಕರೊಂದಿಗೆ ಸುದೀರ್ಘ ಚರ್ಚೆ ನಡೆಸಲಾಗಿದ್ದು, ಲಭ್ಯವಾದ ನಿಖರ ಮಾಹಿತಿಯನ್ನು ಆಧರಿಸಿಯೇ ವರದಿಯನ್ನು ಸಿದ್ಧಪಡಿಸಲಾಗಿದೆ ಎಂದು ಸಿಟಿ ರವಿ ಸ್ಪಷ್ಟಪಡಿಸಿದರು.



ಪಕ್ಷದ ಆಂತರಿಕ ಶಿಸ್ತು ಮತ್ತು ಘನತೆಯ ದೃಷ್ಟಿಯಿಂದ ವರದಿ ಯಲ್ಲಿರುವ ಯಾವುದೇ ಸಂಗತಿಯನ್ನು ತಾವು ಸಾರ್ವಜನಿಕವಾಗಿ ಚರ್ಚಿಸಲು ಬಯಸುವುದಿಲ್ಲ ಎಂದು ಸಿ.ಟಿ. ರವಿ ಹೇಳಿದರು.

ಪರಿಷತ್ ಚುನಾವಣೆಯಲ್ಲಿ ನಡೆದಿರುವುದು ಗೋಪ್ಯ ಮತದಾನ ಆಗಿರುವುದರಿಂದ ಕೇವಲ ಸಾಂದರ್ಭಿಕ ಸಾಕ್ಷ್ಯಗಳ ಆಧಾರದ ಮೇಲೆ ಕೆಲವರನ್ನು ಅನುಮಾನಿಸಬಹುದೇ ಹೊರತು, ಯಾರನ್ನೂ ನೇರವಾಗಿ ಮತ್ತು ಖಚಿತವಾಗಿ ಆರೋಪಿ ಸ್ಥಾನದಲ್ಲಿ ನಿಲ್ಲಿಸಲು ಸಾಧ್ಯವಿಲ್ಲ. ಇದೇ ವೇಳೆ ರಾಜ್ಯ ಸರ್ಕಾರದ ಗೃಹಲಕ್ಷ್ಮಿ ಯೋಜನೆಯ ವಿರುದ್ಧ ಸಿ.ಟಿ. ರವಿ ಗಂಭೀರ ಭ್ರಷ್ಟಾಚಾರದ ಆರೋಪ ಮಾಡಿದರು. ಗೃಹಲಕ್ಷ್ಮಿ ಯೋಜನೆಯಲ್ಲಿ ಸುಮಾರು 250 ಕೋಟಿ ರೂಪಾಯಿಗೂ ಅಧಿಕ ಮೊತ್ತದ ಹಗರಣ ನಡೆದಿದ್ದು, ಪ್ರಕರಣವನ್ನು ತಕ್ಷಣವೇ ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು.

ಸರ್ಕಾರದ ಅಧೀನದಲ್ಲಿರುವ ಯಾವುದೇ ತನಿಖಾ ಸಂಸ್ಥೆಯಿಂದ ಈ ಹಗರಣದಲ್ಲಿ ನ್ಯಾಯ ಸಿಗಲು ಸಾಧ್ಯವಿಲ್ಲ. ನಕಲಿ ಬ್ಯಾಂಕ್ ಖಾತೆಗಳನ್ನು ಸೃಷ್ಟಿಸಿ ಹಣ ಲೂಟಿ ಮಾಡಿರುವುದನ್ನು ಪತ್ತೆ ಹಚ್ಚಿದ್ದು ರಾಜ್ಯ ಸರ್ಕಾರವಲ್ಲ, ಬದಲಿಗೆ ಸಿಎಜಿ ವರದಿಯಲ್ಲಿ ಈ ಮಹಾ ವಂಚನೆ ಬಯಲಾಗಿದೆ ಎಂದು ಕಿಡಿಕಾರಿದರು.

ಇಷ್ಟೊಂದು ದೊಡ್ಡ ಮಟ್ಟದ ಭ್ರಷ್ಟಾಚಾರದ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವರು ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಸಿ.ಟಿ. ರವಿ ಆಕ್ರೋಶ ಹೊರಹಾಕಿದರು.

# ಕುವೆಂಪು ಸಿರಿಗನ್ನಡ ದತ್ತಿ ಪ್ರಶಸ್ತಿಗೆ ಅಂಜಲಿ ಬೆಳಗಲ್ ಆಯ್ಕೆ



ವಿಜಯನಗರ, ಜೂ.26.ಲೇಖಕಿ ಅಂಜಲಿ ಬೆಳಗಲ್ ಇವರು ಶ್ರೀಮತಿ ರೇಣುಕಮ್ಮ ನಾಗಪ್ರೀಯ ಅವರ ಕುವೆಂಪು ಸಿರಿಗನ್ನಡ ದತ್ತಿ ಪ್ರಶಸ್ತಿ ಗೆ ಆಯ್ಕೆಯಾಗಿದ್ದಾರೆ.

ಬುದ್ಧ, ಬಸವ, ಗಾಂಧಿ ಸಾಂಸ್ಕೃತಿಕ ಟ್ರಸ್ಟ್ ಸಿದ್ದನಹಳ್ಳಿ ಇವರ ಸಹಯೋಗದೊಂದಿಗೆ ಬೆಂಗಳೂರಿನ ಶೇಷಾದ್ರಿಪುರಂ ಕಾಲೇಜ್ ನಲ್ಲಿ ಜೂ.28 ನಡೆಯಲಿರುವ ರಾಜ್ಯಮಟ್ಟದ ಜಾನಪದ ಸಮ್ಮೇಳನ – 2026 ದಲ್ಲಿ ಈ ಪ್ರಶಸ್ತಿ ವಿತರಿಸಲಾಗುತ್ತಿದೆ. ವಿಜಯ ನಗರ ಜಿಲ್ಲೆಯ ಕವಿಯತ್ರಿ ಅಂಜಲಿ ಬೆಳಗಲ್ ಅವರಿಗೆ ರಾಜ್ಯಮಟ್ಟದ ಕುವೆಂಪು ಸಿರಿಗನ್ನಡ ದತ್ತಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರು ಮತ್ತು ಬೆಂಗಳೂರು ಸಮಂಗಲಿ ಸೇವಾಶ್ರಮದ ಅಧ್ಯಕ್ಷೆ ಸುಶೀಲಮ್ಮ ಅವರು ಪ್ರದಾನ ಮಾಡಲಿದ್ದಾರೆ.

ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳು, ಬೆಂಗಳೂರು ಕರ್ನಾಟಕ ಜಾನಪದ ಪರಿಷತ್ ಅಧ್ಯಕ್ಷರಾದ ಡಾ. ಹಿ. ಚಿ. ಬೋರಲಿಂಗಯ್ಯ, ಸಮ್ಮೇಳನದ ಅಧ್ಯಕ್ಷರಾದ ಶಿವಮಲ್ಲಯ್ಯ ಇವರುಗಳು ಸೇರಿದಂತೆ ಡಾ. ಎಸ್ ರಾಮಲಿಂಗೇಶ್ವರ್ ಹಾಗೂ ನಾಡಿನ ಖ್ಯಾತ ಎಲ್ಲಾ ಹಿರಿಯ ಸಾಹಿತಿಗಳು ಉಪಸ್ಥಿತರಿರಲಿದ್ದಾರೆ.

# ಕರೆಂಟ್ ಕಟ್ ಮಾಡಿದ್ದಕ್ಕೆ ಜೆಸ್ಕಾಂ ಕಚೇರಿಗೇ ಬೆಂಕಿ



**ರಾಯಚೂರು, ಜೂ. 26:** ಬಿಲ್ ಬಾಕಿ ಉಳಿಸಿ ಕೊಂಡಿದ್ದಕ್ಕೆ ವಿದ್ಯುತ್ ಸಂಪರ್ಕ ಕಡಿತಗೊಳಿಸಿದ ಜೆಸ್ಕಾಂ ಸಿಬ್ಬಂದಿ ಕ್ರಮದಿಂದ ಕೋಪಗೊಂಡ ರೈತನೊಬ್ಬ ಜೆಸ್ಕಾಂ ಕಚೇರಿಗೇ ಬೆಂಕಿ ಇಟ್ಟ ಘಟನೆ ಜಿಲ್ಲೆಯ ಮಲ್ಲಟ ಗ್ರಾಮದಲ್ಲಿ ನಡೆದಿದೆ.

ಬಿಲ್ ಬಾಕಿ ಉಳಿಸಿಕೊಂಡಿದ್ದಕ್ಕೆ ವಿದ್ಯುತ್ ಸಂಪರ್ಕ ಕಡಿತಗೊಳಿಸಿದ ಜೆಸ್ಕಾಂ ಸಿಬ್ಬಂದಿ ಕ್ರಮದಿಂದ ಕೋಪಗೊಂಡ ರೈತನೊಬ್ಬ ಜೆಸ್ಕಾಂ ಕಚೇರಿಗೇ ಬೆಂಕಿ ಇಟ್ಟ ಘಟನೆ ರಾಯಚೂರು ಜಿಲ್ಲೆ ಸಿರವಾರ ತಾಲೂಕಿನ ಮಲ್ಲಟ ಗ್ರಾಮದ ಜೆಸ್ಕಾಂ ಉಪ ಕಚೇರಿಯಲ್ಲಿ ನಡೆದಿದೆ.

ಹಳ್ಳಿಹೊಸೂರು ಗ್ರಾಮದ ಶಿವಪ್ಪ ಬಸನಗೌಡ ಗಡಿಗಿ ಎಂಬಾತ 11 ಸಾವಿರ ರು.ಗಳ ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿದ್ದ. ಬಾಕಿ ಬಿಲ್ ಹಣ ಪಾವತಿಸುವಂತೆ ಹಲವು ಬಾರಿ ನೋಟಿಸ್ ನೀಡಲಾಗಿತ್ತು. ಆದರೂ, ಬಾಕಿ ಬಿಲ್ ಹಣ ಪಾವತಿಸಿರಲಿಲ್ಲ. ಹೀಗಾಗಿ, ಜೆಸ್ಕಾಂ ಸಿಬ್ಬಂದಿ ರಿಚರ್ಡ್ ಎಂಬುವರು ಮೇಲಧಿಕಾರಿಗಳ ಸೂಚನೆ ಮೇರೆಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಿದ್ದರು.

ಇದರಿಂದ ಆಕ್ರೋಶಗೊಂಡ ಶಿವಪ್ಪ ಬುಧವಾರ ಮಲ್ಲಟ ಗ್ರಾಮದ ಜೆಸ್ಕಾಂ ಉಪ ಕಚೇರಿಗೆ ನುಗ್ಗಿ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ. ಹಲ್ಲೆಗೆ ಹೆದರಿ ಸಿಬ್ಬಂದಿ ತಪ್ಪಿಸಿಕೊಂಡು ಕಚೇರಿಯಿಂದ ಹೊರಗೆ ಬರುತ್ತಿದ್ದಂತೆ ಕಚೇರಿಗೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ, ಪುಂಡಾಟ ಮೆರೆದಿದ್ದಾನೆ.

ಇದರಿಂದಾಗಿ ಕಚೇರಿಯ ದಾಖಲೆಗಳು, ಕಂಪ್ಯೂಟರ್, ಲ್ಯಾಪ್‌ಟಾಪ್, ಬ್ಯಾಟರಿ ಮತ್ತು ನಗದು ಸೇರಿದಂತೆ ಸುಮಾರು 1 ಲಕ್ಷ ರು. ಮೌಲ್ಯದ ಸಾರ್ವಜನಿಕ ಸ್ವಾಮ್ಯದ ಆಸ್ತಿ ಸುಟ್ಟು ಭಸ್ಮವಾಗಿದೆ. ಅದೃಷ್ಟವಶಾತ್ ಯಾವುದೇ ಜೀವಹಾನಿ ಸಂಭವಿಸಿಲ್ಲ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಸಿರವಾರ ಪೊಲೀಸರು ಆತನನ್ನು ಬಂಧಿಸಿದ್ದಾರೆ. ಘಟನೆ ಕುರಿತು ತನಿಖೆ ಮುಂದುವರಿದಿದೆ.

## ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಜಂಟಿ ಕಾರ್ಯಾಚರಣೆ

# ಹಠಾತ್ ದಾಳಿ ಸಂಡೂರಿನಲ್ಲಿ ಇಬ್ಬರು ಬಾಲಕಾರ್ಮಿಕರ ರಕ್ಷಣೆ

**ಬಳ್ಳಾರಿ,ಜೂ.26.**ಸಂಡೂರು ತಾಲೂಕಿನ ಚೋರನೂರು ಹೋಬಳಿ ವ್ಯಾಪ್ತಿಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಜಂಟಿ ಆಶ್ರಯದಲ್ಲಿ ಗುರುವಾರ ಹಠಾತ್ ದಾಳಿ ನಡೆಸಿ, ಇಬ್ಬರು ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಯಶಸ್ವಿಯಾಗಿ ರಕ್ಷಿಸಲಾಗಿದೆ.

ಇದೇ ವೇಳೆ, ಇನ್ನು ಮುಂದೆ ಅಂಗಡಿ ಮತ್ತು ಉದ್ದಿಮೆಗಳಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಯಾವುದೇ ಕಾರಣಕ್ಕೂ ಕೆಲಸಕ್ಕೆ ನೇಮಿಸಿಕೊಳ್ಳಬಾರದು ಎಂದು ಮಾಲೀಕರಿಗೆ ಎಚ್ಚರಿಕೆ ನೀಡಿ, ಪೋಸ್ಟರ್‌ಗಳನ್ನು ಹಂಚುವ ಮೂಲಕ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಬಾಲಕಾರ್ಮಿಕ ಯೋಜನೆ,



ಸಂಡೂರು ತಾಲೂಕಿನ ಚೋರನೂರು ಹೋಬಳಿ ವ್ಯಾಪ್ತಿಯ ಸುಮಾರು 25 ಉದ್ದಿಮೆ ಹಾಗೂ ಅಂಗಡಿ ಮುಂಗಟ್ಟುಗಳ ಮೇಲೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರು ಜಂಟಿಯಾಗಿ ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ಕಾನೂನು ಬಾಹಿರವಾಗಿ ಕೆಲಸ ಮಾಡುತ್ತಿದ್ದ ಇಬ್ಬರು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ಪತ್ತೆ ಹಚ್ಚಿ, ಕೆಲಸದಿಂದ ಮುಕ್ತಿಗೊಳಿಸ ಲಾಗಿದೆ.

ರಕ್ಷಿಸಲ್ಪಟ್ಟ ಮಕ್ಕಳನ್ನು ಅವರು ಈ ಹಿಂದೆ ವ್ಯಾಸಂಗ ಮಾಡುತ್ತಿದ್ದ ಶಾಲೆಗೆ ಮರು ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ.

ಮಕ್ಕಳ ವಯಸ್ಸಿನ ದಾಖಲಾತಿಗಳನ್ನು ಪಡೆದುಕೊಂಡಿರುವ ಅಧಿಕಾರಿಗಳು, ಬಾಲಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಬಾಲಕಾರ್ಮಿಕ ಕಾಯ್ದೆಯಡಿ ಪ್ರಕರಣ ದಾಖಲಿಸಲು ಮುಂದಾಗಿದ್ದಾರೆ.

ಕಂದಾಯ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಮತ್ತು ಚೈಲ್ಡ್ ಲೈನ್ ಸಹಯೋಗದಲ್ಲಿ ಈ ಜಂಟಿ ಕಾರ್ಯಾಚರಣೆ ನಡೆದಿದೆ.

ಈ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಗ್ರೇಡ್–2 ತಹಶೀಲ್ದಾರ್ ಸುಧಾ, ಸಂಡೂರಿನ ಕಾರ್ಮಿಕ ನಿರೀಕ್ಷಕ ಮಂಜುನಾಥ ತೊಂಡೆ ಹಾಳ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ. ಮೌನೇಶ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹೆಚ್. ಎನ್. ಸುರೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕ ರಾದ ಸುನೀತಾ, ಮಕ್ಕಳ ರಕ್ಷಣಾ ಘಟಕದ ಅರುಳ್ ಹಾಗೂ ಮಕ್ಕಳ ಸಹಾಯ ವಾಣಿ ಸಿಬ್ಬಂದಿಯಾದ ಚಂದ್ರಕಲಾ ಸೇರಿದಂತೆ ಮತ್ತಿತರ ಅಧಿಕಾರಿಗಳು ಹಾಜರಿದ್ದರು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರು ತಿಳಿಸಿದ್ದಾರೆ.

# ಶಕ್ತಿಕೇಂದ್ರ ವಿಧಾನಸೌಧ ಶಾಸಕರ ಖರೀದಿ, ಮಾರಾಟಕ್ಕೆ ಸಾಕ್ಷಿಯಾಗಿರುವುದು ದುರಂತ: ಎಚ್.ವಿಶ್ವನಾಥ್



**ಮಂಡ್ಯ, ಜೂ.26:** 'ಕೆಂಗಲ್ ಹನುಮಂತಯ್ಯನವರು ಜನಸೇವೆಗಾಗಿ ಕಟ್ಟಿಸಿದ ಆಡಳಿತದ ಶಕ್ತಿಕೇಂದ್ರ ವಿಧಾನಸೌಧವು ಇಂದು ವ್ಯಾಪಾರ ಕೇಂದ್ರವಾಗಿದೆ. ಶಾಸಕರ ಖರೀದಿ ಮತ್ತು ಮಾರಾಟಕ್ಕೆ ಸಾಕ್ಷಿಯಾಗಿರುವುದು ದುರಂತ' ಎಂದು ಮಾಜಿ ಸಚಿವ ಎಚ್.ವಿಶ್ವನಾಥ್ ವಿಷಾದಿಸಿದರು.

ನಗರದ ಕರ್ನಾಟಕ ಸಂಘದ ಕೆ.ವಿ.ಎಸ್ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಹಿರಿಯ ಪತ್ರಕರ್ತ ಪಿ.ಎನ್.ಜವರಪ್ಪಗೌಡ ಪ್ರಶಸ್ತಿ ಪ್ರದಾನ ಮತ್ತು ಪುಸ್ತಕ ಬಿಡುಗಡೆ ಸಮಾರಂಭದಲ್ಲಿ 'ರಾಜಕೀಯ ಪರಿಚಾರಕ ಪಿ.ಎನ್. ಜವರಪ್ಪಗೌಡ' ಕೃತಿ ಬಿಡುಗಡೆ ಮಾಡಿ ಅವರು ಮಾತನಾಡಿದರು.

'ಇಡೀ ವಿಧಾನಸೌಧ ದುಡ್ಡಿನ ಹಿಂದೆ ಓಡುತ್ತಿದೆ. ರಾಜಕಾರಣಿಗಳು ಇಂದು ಸೇವಕರಾಗಿ ಉಳಿದಿಲ್ಲ. ಶೇ 80ರಷ್ಟು ಶಾಸಕರು ರಿಯಲ್ ಎಸ್ಟೇಟ್ ಉದ್ಯಮಿಗಳಾಗಿದ್ದಾರೆ. ಸಮಸ್ತ ಕನ್ನಡಿಗರ ಅಭಿವೃದ್ಧಿಯ ನಾಡುಗುಡಿಯಾದ ವಿಧಾನಸೌಧದ ಈ ದುಸ್ಥಿತಿಗೆ ಇಂದಿನ ರಾಜಕಾರಣವೇ ಕಾರಣ' ಎಂದು ಬೇಸರ ವ್ಯಕ್ತಪಡಿಸಿದರು.

'ಸ್ವಾತಂತ್ರ್ಯ ನಂತರ ರಾಜಕೀಯ ಪ್ರವೇಶದ ಬಗ್ಗೆ ಟಾಟಾ–ಬಿರ್ಲಾ ಅವರು ಪ್ರಸ್ತಾಪಿಸಿದಾಗ ನೆಹರು ಅವರು ತೀವ್ರವಾಗಿ ವಿರೋಧಿಸಿದ್ದರು. ಅಣೆಕಟ್ಟೆ, ಕಟ್ಟಡಗಳು, ಶಿಕ್ಷಣ ಸಂಸ್ಥೆಗಳನ್ನು ಕಟ್ಟಿ ಎಲ್ಲದಕ್ಕೂ ಲೈಸೆನ್ಸ್ ಕೊಡುತ್ತೇವೆ. ಆದರೆ, ರಾಜಕಾರಣಕ್ಕೆ ಬೇಡ. ರಾಜಕೀಯ ಶಕ್ತಿ ಮತ್ತು ಹಣದ ಶಕ್ತಿ ಒಂದೇ ಕಡೆ ಇದ್ದರೆ ಪ್ರಜಾಪ್ರಭುತ್ವ ಮಾರಾಟವಾಗುತ್ತದೆ ಎಂದಿದ್ದರು. ಅದೀಗ ನಿಜವಾಗುತ್ತಿದೆ' ಎಂದು ಹೇಳಿದರು.

'ಅಕ್ಷರ ಮತ್ತು ಆರೋಗ್ಯವು ಈ ದೇಶದ ಅಭಿವೃದ್ಧಿಯ ಸೂಚ್ಯಂಕವಾಗಿದೆ. ಮಹಿಳೆಯರಿಗೆ ರೂ.2 ಸಾವಿರ ಕೊಡುವ ಬದಲು, ಸರ್ವರಿಗೂ ಉಚಿತ ಶಿಕ್ಷಣ ಮತ್ತು ಆರೋಗ್ಯ ಸೇವೆ ನೀಡಿದ್ದರೆ ಸಾಕಿತ್ತು. ಆರೋಗ್ಯ ಸಮಸ್ಯೆಯಿಂದ ಹೈಟೆಕ್ ಆಸ್ಪತ್ರೆಗೆ ಹೋದರೆ ಆ ವ್ಯಕ್ತಿ ತನ್ನ ಹೆಸರಿನಲ್ಲಿರುವ ಜಮೀನನ್ನು ಮಾರಿಕೊಳ್ಳಬೇಕಾದ ಪರಿಸ್ಥಿತಿ ಬರುತ್ತದೆ' ಎಂದು ಸಂಕಟ ವ್ಯಕ್ತಪಡಿಸಿದರು.

# ಮಹಿಳೆಯರ ಸ್ವಾವಲಂಬಿ ಜೀವನಕ್ಕೆ ಕೌಶಲ್ಯಾಭಿವೃದ್ಧಿ ತರಬೇತಿ ಅಗತ್ಯ : ರಾಜೇಂದ್ರ ಶೆಟ್ಟಿ ಅಭಿಮತ




**ಅಂಕೋಲಾ, ಜೂ.26:** : ಕೌಶಲ್ಯಾಭಿವೃದ್ಧಿ ತರಬೇತಿಗಳ ಉಪಯೋಗ ಇ ವನ್ನು ಸಾರ್ವಜನಿಕರು ಹೆಚ್ಚು ಹೆಚ್ಚು ಪಡೆದು ಸ್ವಾಲಂಭಿಗಳಾಗಬೇಕು. ಈ ಮೂಲಕ ಸ್ವಯಂ ಉದ್ಯೋಗವನ್ನು ಮಾಡಲು ಸಾಧ್ಯವಾಗುತ್ತದೆ. ಅದರಲ್ಲಿಯೂ ಮಹಿಳೆಯರ ಪಾತ್ರ ಮಹತ್ವದ್ದು ಎಂದು ಅಂಕೋಲಾ ಅರ್ಬನ್ ಬ್ಯಾಂಕ್ ಅಧ್ಯಕ್ಷ ರಾಜೇಂದ್ರ ಶಾಂಬಾ ಶೆಟ್ಟಿ ಹೇಳಿದರು.

ಪಟ್ಟಣದ ಅರ್ಬನ್ ಬ್ಯಾಂಕ್ ಮಹಡಿಯಲ್ಲಿ ಭಾರತೀಯ ವಿಕಾಸ ಟ್ರಸ್ಟ್ ಮಣಿಪಾಲ್, ಸಂಗಮ ಸೇವಾ ಸಂಸ್ಥೆ ಅಂಕೋಲಾ ಶ್ರೀ ಶಾರದಾಂಬಾ ಮಹಿಳಾ ಮಂಡಳ ಇವರ ಸಹಯೋಗದಲ್ಲಿ ನಡೆದ ಏಳು ದಿನಗಳ ಬ್ಯೂಟಿ ಪಾರ್ಲರ್ ಹಾಗೂ ಸಾರಿಬಾಕ್ಸ್ ಫೋಲ್ಡರ್ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತೀಯ ವಿಕಾಸ ಟ್ರಸ್ಟ್ ನ ರಾಘವೇಂದ್ರ ಆಚಾರ್ಯ, ಶ್ರೀ ಶಾರದಾಂಬಾ ಮಹಿಳಾ ಮಂಡಳಿಯ ಅಧ್ಯಕ್ಷೆ ಸುಧಾ ಜಿ. ಶೆಟ್ಟಿ, ಸಂಗಮ ಸೇವಾ ಸಂಸ್ಥೆಯ ಜಯಾ ಗೌಡ ಮಾತನಾಡಿದರು. ವರ್ಷಿಣಿ ಶೆಟ್ಟಿ ಪ್ರಾರ್ಥಿಸಿದರು. ಯೋಗಿತಾ ಎಸ್. ಶೆಟ್ಟಿ ಸ್ವಾಗತಿಸಿದರು. ಸುಧಾ ಪ್ರಶಾಂತ ಶೆಟ್ಟಿ, ಪೂಜಾ ಮುಂತಾದವರು ಶಿಬಿರಾರ್ಥಿಗಳ ಪರವಾಗಿ ಅನಿಸಿಕೆಗಳನ್ನು ಹಂಚಿಕೊಂಡರು.

## ಪದ್ಮಾವತಿ ಅಮ್ಮನವರ ಎರಡನೇ ದಿನ ತೆಪ್ಪೋತ್ಸವ ಸಂಪನ್ನ


# ಪದ್ಮಸರೋವರದಲ್ಲಿರುವ ಕೃಷ್ಣಸ್ವಾಮಿಯ ದಿವ್ಯ ತೆಪ್ಪ ವಿಹಾರ

**ತಿರುಪತಿ, ಜೂ.26:**ತಿರುಚಾನೂರಿನ ಶ್ರೀ ಪದ್ಮಾವತಿ ಅಮ್ಮನವರ ದೇವಾಲಯದ ವಾರ್ಷಿಕ ತೆಪ್ಪೋತ್ಸವವು ಎರಡನೇ ದಿನವಾದ ಶುಕ್ರವಾರ ಭವ್ಯತೆಯಿಂದ ಆರಂಭವಾಯಿತು. ಮೊದಲ ದಿನ, ರುಕ್ಮಿಣಿ ಮತ್ತು ಸತ್ಯಭಾಮೆಯವರೊಂದಿಗೆ ಕೃಷ್ಣಸ್ವಾಮಿಯು ಪದ್ಮಸರೋವರದಲ್ಲಿ ಸುಂದರವಾಗಿ ಅಲಂಕರಿಸಲ್ಪಟ್ಟ ತೆಪ್ಪದಲ್ಲಿ ಮೂರು ಪ್ರದಕ್ಷಿಣೆಗಳನ್ನು ಮಾಡಿ ಭಕ್ತರಿಗೆ ದಿವ್ಯ ಮಂಗಲ ದರ್ಶನವನ್ನು ನೀಡಿದರು.

**ಕೃಷ್ಣಸ್ವಾಮಿಗೆ ಸಮಾರಂಭವಾಗಿ ಅಭಿಷೇಕ**

ಬೆಳಿಗ್ಗೆ ಸುಪ್ರಭಾತದೊಂದಿಗೆ ಪ್ರಾರಂಭವಾದ ದೈನಂದಿನ ಆಚರಣೆಗಳ ನಂತರ, ಮಧ್ಯಾಹ್ನ ಶ್ರೀ ಕೃಷ್ಣಸ್ವಾಮಿಯ ಮುಖ ಮಂಟಪದಲ್ಲಿ ಸ್ವಾಮಿಗೆ ವಿಶೇಷ ಅಭಿಷೇಕವನ್ನು ಮಾಡಲಾಯಿತು. ಹಾಲು, ಮೊಸರು, ಜೇನುತುಪ್ಪ, ಶ್ರೀಗಂಧ ಮತ್ತು ಮಸಾಲೆಗಳೊಂದಿಗೆ ನಡೆಸಲಾದ ಈ ಪವಿತ್ರ ಅಭಿಷೇಕವು ಭಕ್ತರನ್ನು ಆಧ್ಯಾತ್ಮಿಕ ಆನಂದದಲ್ಲಿ ಮುಳುಗಿಸಿತು.

ಪದ್ಮಸರೋವರದಲ್ಲಿ ದೈವಿಕ ತೇಲುವ ಮೆರವಣಿಗೆಸಂಜೆ, ಸ್ವಾಮಿ ಮತ್ತು ದೇವಿಯರ ವಿಧ್ಯುಕ್ತ ಮೂರ್ತಿಗಳನ್ನು ಮಂಗಳವಿದ್ಯೆಯ ಸಂಗೀತದ ನಡುವೆ ಪದ್ಮಪುಷ್ಕರಿಣಿಗೆ ಕೊಂಡೊಯ್ಯಲಾಯಿತು. ನಂತರ, ಸಂಜೆ 6.30 ರಿಂದ 7.15 ರವರೆಗೆ ನಡೆದ ತೇಲುವ ಮೆರವಣಿಗೆ ಭಕ್ತರನ್ನು ಆಕರ್ಷಿಸಿತು. ಪದ್ಮಸರೋವರದಲ್ಲಿ ವಿದ್ಯುತ್ ದೀಪಗಳ ಬೆಳಕಿನಲ್ಲಿ ನಡೆದ ಈ ದೈವಿಕ ಮೆರವಣಿಗೆ ಆಧ್ಯಾತ್ಮಿಕ ಮೋಡಿಯನ್ನು ಪಡೆಯಿತು.



ತೇಲುವ ಮೆರವಣಿಗೆಯ ನಂತರ, ಕೃಷ್ಣಸ್ವಾಮಿ ದೇವಾಲಯದ ನಾಲ್ಕು ಮದವೀಡುಗಳ ಮೂಲಕ ಮೆರವಣಿಗೆ ನಡೆಸಿ ಭಕ್ತರನ್ನು ತಮ್ಮ ಕರುಣೆಯಿಂದ ಆಶೀರ್ವದಿಸಿದರು.

# ಅವೈಜ್ಞಾನಿಕ ರಾಜ್ಯಪತ್ರ ವಾಪಸ್‌ಗೆ ಶಶಿಲ್ ನಮೋಶಿ ಆಗ್ರಹ

**ಕಲಬುರಗಿ, ಜೂ. 26:** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ದೀರ್ಘಕಾಲದಿಂದ ಕಾಡುತ್ತಿರುವ ಶಿಕ್ಷಕರ ಕೊರತೆ ನೀಗಿಸಬೇಕೆಂಬ ಒಂದೇ ಕಾರಣ, ಶಿಕ್ಷಣ ಇಲಾಖೆಯ ಸಚಿವರು ಇಲ್ಲದಿರುವ ಈ ಸಂದರ್ಭದಲ್ಲಿ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಹೆಚ್ಚುವರಿ ಹೊಣೆ ನೀಡಲು ಮುಂದಾಗಿರುವುದು ಅತ್ಯಂತ ಅವೈಜ್ಞಾನಿಕ ನಿರ್ಧಾರ ಎಂದು ವಿಧಾನ ಪರಿಷತ್ ಶಿಕ್ಷಕರ ಮತಕ್ಷೇತ್ರದ ಸದಸ್ಯರಾಗಿರುವ ಶಶಿಲ್‌ನಮೋಶಿ ಹೇಳಿದ್ದಾರೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಪದವಿಪೂರ್ವ ಕಾಲೇಜು ಉಪನ್ಯಾಸಕರು 9, 10ನೇ ತರಗತಿಗಳಿಗೆ ಕಡ್ಡಾಯವಾಗಿ ಬೋಧನೆ ಮಾಡಬೇಕೆಂದು ಸರ್ಕಾರ ತುರ್ತಾಗಿ ವಿಶೇಷ ರಾಜ್ಯಪತ್ರ ಹೊರಡಿಸಿದೆ. ಇದರಿಂದಾಗಿ ನೇರ ನೇಮಕಾತಿ ಹಾಗೂ ಬಡ್ತಿ ಹೊಂದಿದ ಸಾವಿರಾರು ಉಪನ್ಯಾಸಕರಿಗೆ ದೊಡ್ಡ ಆಘಾತ ನೀಡಿದೆ ಎಂದಿದ್ದಾರೆ.

ಕರ್ನಾಟಕ ಸಾಮಾನ್ಯ ಸೇವೆಗಳು ಪದವಿಪೂರ್ವ ಶಿಕ್ಷಣ ಇಲಾಖೆ ವೃಂದ ನೇಮಕಾತಿ ನಿಯಮ 2013ಕ್ಕೆ ತಿದ್ದುಪಡಿ ತರುವುದರ ಮೂಲಕ ಸರ್ಕಾರ ನಿಗದಿಪಡಿಸುವ ಶಿಕ್ಷಣ ಸಂಸ್ಥೆಗಳಲ್ಲಿ ಪಿಯು ಉಪನ್ಯಾಸಕರು ಪ್ರೌಢಶಾಲಾ ಹಂತದ ವಿದ್ಯರ್ಥಿಗಳಿಗೆ ಪಾಠ ಮಾಡಬೇಕಾಗುತ್ತದೆ. ಆದರೆ ಹಳೆಯ ನಿಯಮಾವಳಿಗಳ ಪ್ರಕಾರ ಪಿಯು ಉಪನ್ಯಾಸಕರಿಗೆ ಕೇವಲ ಪ್ರಥಮ ಹಾಗೂ ದ್ವಿತಿಯ ತರಗತಿಗಳಿಗೆ ಮಾತ್ರ ಬೋಧಿಸುವ ಹಕ್ಕು ಮತ್ತು ಜವಾಬ್ದಾರಿ ಇತ್ತು. ಈಗಿನ ತಿದ್ದುಪಡಿಯಿಂದಾಗಿ ಹೈಸ್ಕೂಲ್ ಹಂತಕ್ಕೂ ಇವರ ಸೇವೆ ವಿಸ್ತರಣೆಯಾಗಲಿದೆ. ಈ ನಿಯಮ ಜಾರಿಯಾದರೆ ಈಗಾಗಲೇ ಪ್ರೌಢಶಾಲೆಗಳಿಗೆ ನೇಮಕವಾದ ಶಿಕ್ಷಕರಿಗೂ ಕೆಲಸ ಕೈ ತಪ್ಪಲಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರು 9 ಹಾಗೂ 10 ನೇ ತರಗತಿಗೆ ಬೋಧನೆ ಮಾಡಿದರೆ ಶೈಕ್ಷಣಿಕ ಹಂತಗಳ ವೈಜ್ಞಾನಿಕ ವಿನ್ಯಾಸಕ್ಕೆ ಧಕ್ಕೆಯುಂಟಾಗಲಿದೆ. ಪದವಿಪೂರ್ವ ಉಪನ್ಯಾಸಕರು ಸ್ನಾತಕೋತ್ತರ ಪದವಿ ಹಾಗೂ ಬಿ.ಇಡಿ ಕೋರ್ಸ್ ವಿದ್ಯಾರ್ಹತೆ ಹೊಂದಿದ್ದು, ಗೆಜೆಟೆಡ್–ಬಿ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರೌಢಶಾಲಾ ಶಿಕ್ಷಕರು ಪದವಿ ಮತ್ತು ಬಿ.ಇಡಿ ಆಧಾರದಲ್ಲಿ ಗ್ರೂಪ್–ಸಿ ಹುದ್ದೆಯಲ್ಲಿದ್ದಾರೆ. ಈ ಎರಡು ಹುದ್ದೆಗಳ ನೇಮಕಾತಿ, ವೇತನ ಶ್ರೇಣಿ ಹಾಗೂ ಆಡಳಿತಾತ್ಮಕ ಹಕ್ಕುಗಳಲ್ಲಿ ವ್ಯತ್ಯಾಸಗಳಿದ್ದು, ಇದು ಉಪನ್ಯಾಸಕರ ವೃತ್ತಿ ಜೀವನದ ಗೌರವಕ್ಕೆ ಧಕ್ಕೆ ತರಲಿದೆ. ಈಗಾಗಲೇ 16 ಗಂಟೆ ಇದ್ದ ಕಾರ್ಯಭಾರದ ಅವಧಿಯನ್ನು 20 ಗಂಟೆಗೆ ಹೆಚ್ಚಿಸಲಾಗಿದೆ. ಈಗ 9 ಹಾಗೂ 10ನೇ ತರಗತಿಗೆ ಬೋಧನೆ ಮತ್ತಷ್ಟು ಹೊರೆಯಾಗಲಿದೆ. ಇಂತಹ ಅವೈಜ್ಞಾನಿಕ ರಾಜ್ಯ ಪತ್ರ ಹೊರಡಿಸಿ 7 ದಿನಗಳಲ್ಲಿ ಟಿಪಣೆ ಸಲ್ಲಿಸಲೂ ಸೂಚಿಸಿದೆ. ಹೀಗಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾರತಾ ಇಲಾಖೆ ತಿದ್ದುಪಡಿ ಕೂಡಲೇ ರದ್ದುಪಡಿಸಬೇಕೆಂದು ಮನವಿ ಸಲ್ಲಿಸಲಾಗಿದೆ. ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಮುಂದಿನ ಹೋರಾಟಗಳಿಗೆ ತಮ್ಮ ಬೆಂಬಲವಿದೆ ಎಂದರು.




**ಈ ವಿಶೇಷ ರಾಜ್ಯಪತ್ರ ಹೊರಡಿಸುವಾಗ ಸರ್ಕಾರ ಶಿಕ್ಷಣ ತರ ಸಲಹೆ ಪಡೆಯಬೇಕಾಗಿತ್ತು. ಶಿಕ್ಷರ ಕ್ಷೇತ್ರದ, ಪದವಿಧರ ಕ್ಷೇತ್ರದ ಶಾಸಕರು, ಉಪನ್ಯಾಸಕರ ಸಂಘದ ಪದಾಧಿಕಾರಿಗಳ ಜತೆ ಸಭೆ ನಡೆಸಬೇಕಾಗಿತ್ತು. ಯಾವುದೆ ಸಲಹೆ, ಸೂಚನೆ ಇಲ್ಲದೆ ಏಕಾಏಕಿ ನಿರ್ಣಯ ತೆಗೆದುಕೊಳ್ಳುವುದು ಸಮಂಜಸವಲ್ಲ.**

# ಟಿಟಿಡಿಯ ಅನ್ನಪ್ರಸಾದ ಟ್ರಸ್ಟಿಗೆ 45 ಲಕ್ಷ ರೂ. ದೇಣಿಗೆ ನೀಡಿದ ಸಾಯಿ ಬಾಲಾಜಿ ಡೆವಲಪರ್ಸ್‌ನ ಆಕುಲ ರವಿಕುಮಾರ್

**ತಿರುಮಲ, ಜೂನ್ 26.** ಹೈದರಾಬಾದ್ ಮೂಲದ ಸಾಯಿ ಬಾಲಾಜಿ ಡೆವಲಪರ್ಸ್ ಶುಕ್ರವಾರ ಟಿಟಿಡಿ ಶ್ರೀ ವೆಂಕಟೇಶ್ವರ ಅನ್ನಪ್ರಸಾದ ಟ್ರಸ್ಟ್‌ಗೆ 45 ಲಕ್ಷ ರೂ. ದೇಣಿಗೆ ನೀಡಿದೆ.

ಈ ಸಂದರ್ಭದಲ್ಲಿ ಕಂಪನಿಯ ಪಾಲುದಾರ ಅಕುಲ ರವಿ ಕುಮಾರ್ ಅವರು ತಿರುಮಲದಲ್ಲಿರುವ ಟಿಟಿಡಿ ಹೆಚ್ಚುವರಿ ಇಒ ಶಿಬಿರ ಕಚೇರಿಯಲ್ಲಿ ಹೆಚ್ಚುವರಿ ಇಒ ಸಿ.ಎಚ್. ವೆಂಕಯ್ಯ ಚೌಧರಿ ಅವರಿಗೆ ದೇಣಿಗೆ ಡಿಡಿಗಳನ್ನು ಹಸ್ತಾಂತರಿಸಿದರು.



# ಸಮರ್ಥನಂ ಅಂಗವಿಕಲರ ಸಂಸ್ಥೆಯಲ್ಲಿ

## ವಿಕಲಚೇತನರಿಗೆ ಉಚಿತ ಕಂಪ್ಯೂಟರ್ ತರಬೇತಿ




**ಬಳ್ಳಾರಿ ಜೂ 26.** ಸಮರ್ಥನಂ ಅಂಗವಿಕಲರ ಸಂಸ್ಥೆಯಲ್ಲಿ ನಿರುದ್ಯೋಗಿ ವಿಕಲಚೇತನ ಯುವಕ/ಯುವತಿಯರಿಗಾಗಿ 3 ತಿಂಗಳ ಅವಧಿಯ ಉಚಿತವಾಗಿ ಕಂಪ್ಯೂಟರ್, ಇಂಗ್ಲೀಷ್ ತರಬೇತಿ ನೀಡಲಾಗುವುದು.

ಎಸ್.ಎಸ್.ಎಲ್.ಸಿ.ಯಲ್ಲಿ ತೇರ್ಗಡೆ ಹೊಂದಿದ ಹಾಗೂ ಪಿ.ಯು.ಸಿ/ಪದವಿಯಲ್ಲಿ ಉತ್ತೀರ್ಣ/ಅನುತ್ತೀರ್ಣ ಹೊಂದಿದ ವಿಕಲಚೇತನ ವಿದ್ಯಾರ್ಥಿಗಳಿಗೆ ಕಂಪ್ಯೂಟರ್, ಟ್ಯಾಲಿ, ಬಿ.ಪಿ.ಓ. ಕಾಲ್ ಸೆಂಟರ್, ಸ್ಪೋಕನ್ ಇಂಗ್ಲೀಷ್, ವ್ಯಕ್ತಿತ್ವ ವಿಕಸನ ಇತ್ಯಾದಿ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸಲು ಅವಶ್ಯಕವಾದ ಕೌಶಲ್ಯಗಳನ್ನು ಕಲಿಸಿಕೊಡಲಾಗುತ್ತದೆ. ತರಬೇತಿಯ ಸಮಯದಲ್ಲಿ ಉಚಿತ ಊಟ ಮತ್ತು ವಸತಿ ಸೌಲಭ್ಯಗಳನ್ನು ಕಲ್ಪಿಸಲಾಗುವುದು.

ಆಸಕ್ತ ವಿಕಲಚೇತನರು ತಮ್ಮ ವಿದ್ಯಾಭ್ಯಾಸ ಅಂಕಪಟ್ಟಿ, ವರ್ಗಾವಣೆ ಪತ್ರ, ಅಂಗವಿಕಲರ ಗುರುತಿನ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ನಕಲು ಪ್ರತಿಗಳ ಮತ್ತು ಪಾಸ್ಪೋರ್ಟ್ ಅಳತೆಯ 8 ಭಾವಚಿತ್ರಗಳೊಂದಿಗೆ, ದಿನಾಂಕ: 04.07.2026 ರೊಳಗಾಗಿ ಹೆಸರು ನೊಂದಾಯಿಸಿಕೊಳ್ಳಲು ಕೋರಲಾಗಿದೆ.

ತರಬೇತಿಯು ದಿನಾಂಕ: 01.07.2026 ಪ್ರಾರಂಭಗುತ್ತದೆ. ಕಂಪ್ಯೂಟರ್ ತರಬೇತಿ ಸೌಲಭ್ಯ ಪಡೆದುಕೊಳ್ಳಲು ಹಾಗೂ ಹೆಚ್ಚಿನ ವಿವರಗಳಿಗಾಗಿ ಸಮರ್ಥನಂ ಅಂಗ ವಿಕಲರ ಸಂಸ್ಥೆ ನಂ: 17/1 ಮದ್ದಿಕೇರಿ ಭೀಮಯ್ಯ ಶಾಲೆ ಪಕ್ಕದಲ್ಲಿ, ಮೋಕ ರಸ್ತೆ, ಗಾಂಧಿನಗರ, ಬಳ್ಳಾರಿ.

ಮೋ: +91 9148793888/ 9480812138 ಸಂಪರ್ಕಿಸಲು ಮನವಿ ಮಾಡಿದ್ದಾರೆ.

# ಸಹಕಾರ ಭಾರತಿ ಬಲಿಷ್ಠವಾದರೆ ಕ್ಷೇತ್ರದ ಉನ್ನತಿ: ನರಸಿಂಹ ಕಾಮತ್

**ಕಲಬುರಗಿ, ಜೂ. 26:** ಸಹಕಾರ ಭಾರತಿ ಸಂಘಟನಾತ್ಮಕವಾಗಿ ಬಲಿಷ್ಠವಾದಾಗ ಮಾತ್ರ ಕ್ಷೇತ್ರದ ಹಲವಾರು ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗಲಿದೆ ಎಂದು ಸಹಕಾರ ಭಾರತಿ ಸಂಸ್ಥೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಸಾಣೂರು ನರಸಿಂಹ ಕಾಮತ್ ಅವರು ಹೇಳಿದರು.

ನಗರದ ಕರ್ನಾಟಕ ಸೌಹಾರ್ದ ಸಂಯುಕ್ತ ಸಹಕಾರ ಪ್ರಾಂತೀಯ ಕಚೇರಿ ಸಭಾ ಭವನದಲ್ಲಿ ಆಯೋಜಿಸಿದ್ದ ಸಹಕಾರ ಭಾರತಿ ಜಿಲ್ಲಾ ಅಭ್ಯಾಸ ವರ್ಗ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಕ್ಷೇತ್ರಕ್ಕೆ ಪ್ರತ್ಯೇಕ ಸಚಿವಾಲಯ ರಚನೆಯಾಗಿ ಐದು ವರ್ಷವಾಗಿದೆ.

ಹೊಸ ಸಹಕಾರಿ ನೀತಿ ಮತ್ತು ಸಹಕಾರ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆ ತರಲು ಕೇಂದ್ರ ಸರ್ಕಾರ ಹಲವು ಮಹತ್ವದ ಕಾರ್ಯಯೋಜನೆ ಜಾರಿಗೊಳಿಸುತ್ತಿದೆ ಎಂದು ತಿಳಿಸಿದರು.

ಕಳೆದ ಅಕ್ಟೋಬರ್‌ನಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಸಹಕಾರ ಭಾರತಿಯ ಪೂರ್ಣ ಪ್ರಮಾಣದ ಜಿಲ್ಲಾ ಸಮಿತಿ ರಚನೆ ಆಗಿರುವುದು ಸಂತಸದ ಸಂಗತಿ. ಫ್ಯಾಕ್ಸ್ ಮಿಲ್ಕ್, ಗೃಹ ನಿರ್ಮಾಣ ಹಾಗೂ ಗ್ರಾಹಕ ಪ್ರಕೋಷ್ಠಗಳು ಸಕ್ರಿಯ ಕಾರ್ಯನಿರ್ವಹಿಸುತ್ತಿದ್ದು, ಪ್ರತ್ಯೇಕ ಜಿಲ್ಲಾ ಮಹಿಳಾ ಸಮಿತಿಯೂ ರಚನೆ ಆಗಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.



ಅಧ್ಯಕ್ಷತೆ ವಹಿಸಿದ್ದ ಸಹಕಾರ ಭಾರತಿ ಜಿಲ್ಲಾಧ್ಯಕ್ಷ ಕೆ.ಬಿ.ಶಟಗಾರ ಮಾತನಾಡಿ, ಜಿಲ್ಲೆಯ ಸಹಕಾರ ಕ್ಷೇತ್ರದ ಅಭಿವೃದ್ಧಿಗೆ ಸಂಟನೆ ಇನ್ನಷ್ಟು ಸಕ್ರಿಯವಾಗಿ ಕಾರ್ಯನಿರ್ವಹಿಸುವ ಅಗತ್ಯವಿದರು. ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಉತ್ತರ ಪ್ರಾಂತ ಪ್ರಚಾರ ಪ್ರಮುಖ ಕೃಷ್ಣ ಜೋಶಿ ಮಾತನಾಡಿ, ಸಹಕಾರ ಕ್ಷೇತ್ರದ ಬಗ್ಗೆ ಜನಸಾಮಾನ್ಯರಲ್ಲಿ ಇರುವ ಅಪನಂಬಿಕೆ ನಿವಾರಿಸಲು ಪಾರದರ್ಶಕ, ಪ್ರಾಮಾಣಿಕ ಮತ್ತು ಉತ್ತಮ ಆಡಳಿತ ಅತ್ಯಗತ್ಯ. ಸಹಕಾರ ಭಾರತಿ ಕಾರ್ಯಕರ್ತರು ಸಂಘಟನೆ ಜತೆ ತಾವು ಪ್ರತಿನಿಧಿಸುವ ಸಂಸ್ಥೆಗಳ ಗೌರವ ಮತ್ತು ನತೆ ಎತ್ತಿ ಹಿಡಿಯುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಕಿವಿಮಾತು ಹೇಳಿದರು.

ಶಿವಮೊಗ್ಗ ಜಿಲ್ಲೆಯ ಸಾಗರದ ಬಿ.ವಿ. ರವೀಂದ್ರನಾಥ, ಕಲಬುರಗಿ ವಿಭಾಗ ಕಾರ್ಯದರ್ಶಿ ರಾಜಕುಮಾರ ಮಾನ್ವಿ ಹಾಗೂ ರಾಜ್ಯ ಕಾನೂನು ಪ್ರಕೋಷ್ಠದ ಪ್ರಮುಖ ಸಂಜೀವ ಮಹಾಜನ್ ಮಾತನಾಡಿದರು. ಸಹಕಾರ ಭಾರತಿ ರಾಜ್ಯ ಗ್ರಾಹಕ ಪ್ರಕೋಷ್ಠ ಸಹ ಸಂಚಾಲಕ ಎಸ್.ಎಸ್.ಪಾಟೀಲ್ ಪ್ರಾಸ್ತಾವಿಕ ಮಾತನಾಡಿದರು.

**ಕೇಂದ್ರ ಸರ್ಕಾರ ಸಹಕಾರ ಕ್ಷೇತ್ರದಲ್ಲಿ ಹೊಸ ಹೊಸ ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ಪರಿಣಾಮಕಾರಿ ಅನುಷ್ಠಾನ ಮತ್ತು ಕ್ಷೇತ್ರದ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಸಹಕಾರ ಭಾರತಿ ಸಂಘಟನೆ ಇನ್ನಷ್ಟು ಬಲಿಷ್ಠವಾಗುವ ಅಗತ್ಯವಿದೆ.**

**– ಸಾಣೂರು ನರಸಿಂಹ ಕಾಮತ್, ರಾಜ್ಯ ಪ್ರಧಾನ ಕಾರ್ಯದರ್ಶಿ, ಸಹಕಾರ ಭಾರತಿ.**

# ಮಾದಕ ವಸ್ತುಗಳ ವಿರುದ್ಧ ಸಮರಕ್ಕೆ ಕೈಜೋಡಿಸಿ ಕಲಬುರಗಿ ಪೊಲೀಸ್ ಕಮೀಷನರ್ ಕರೆ

**ಕಲಬುರಗಿ, ಜೂ. 26;** ಮಾದಕ ವಸ್ತುಗಳ ಸೇವನೆ ಮತ್ತು ಮಾರಾಟದ ವಿರುದ್ಧ ಸಮೂಹ ಹೋರಾಟ ಅಗತ್ಯವಾಗಿದ್ದು, ಯುವಜನರು ಈ ದುಶ್ಚಟದಿಂದ ದೂರವಿರುವುದಷ್ಟೇ ಅಲ್ಲ, ಸುತ್ತಮುತ್ತ ಇಂತಹ ಚಟುವಟಿಕೆಗಳು ಕಂಡುಬಂದರೆ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಕರೆ ನೀಡಿದರು.




ಅಂತರರಾಷ್ಟ್ರೀಯ ಮಾದಕ ವಸ್ತು ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನದ ಅಂಗವಾಗಿ ನಗರ ಪೊಲೀಸ್ ಹಾಗೂ ಯುನೈಟೆಡ್ ಆಸ್ಪತ್ರೆ ಸಹಯೋಗದಲ್ಲಿ ನಗರದ ಸರ್ದಾರ ವಲ್ಲಭಭಾಯ್ ಪಟೇಲ್ ವೃತ್ತದಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಗರದಲ್ಲಿ ಜನವರಿ 2025ರಿಂದ ಇದುವರೆಗೆ 600 ಪ್ರಕರಣ ದಾಖಲಾಗಿದ್ದು, 'ಸನ್ಮಿತ್ರ' ಉಪಕ್ರಮದಡಿ 150ಕ್ಕೂ ಹೆಚ್ಚು ಯುವಕರಲ್ಲಿ ಸುಧಾರಣೆಯ ಲಕ್ಷಣ ಕಂಡು ಬಂದಿರುವುದು ಹೊಸ ಬೆಳವಣಿಗೆಯಾಗಿದ್ದು, ಯುವಕರು ಇದೇ ರೀತಿ ತಮ್ಮ ವತ್ನೆಯಲ್ಲಿ ಬದಲಿಸಿಕೊಳ್ಳುವುದು ಅಗತ್ಯ ಎಂದರು.

ಮಾದಕ ವಸ್ತು ಸರಬರಾಜು ಮಾಡುವವರ ವಿರುದ್ಧ ಮಾತ್ರವಲ್ಲದೆ, ಅವುಗಳನ್ನು ಸೇವಿಸುವವರ ಮೇಲೂ ಎನ್ಡಿಪಿಎಸ್ ಕಾಯ್ದೆಯಡಿ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ ಎಂದ ಅವರು 2025ರ ಜನವರಿಯಿಂದ ಇದುವರೆಗೆ ಕಲಬುರಗಿ ನಗರದಲ್ಲಿ ಮಾದಕ ವಸ್ತು ಸೇವಕರು ಮತ್ತು ಪೆಡ್ಲರ್ಗಳ ವಿರುದ್ಧ ಸುಮಾರು 600 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ತಿಳಿಸಿದರು.

ಮಾದಕ ವ್ಯಸನಕ್ಕೆ ಒಳಗಾದವರು ಮತ್ತು ಮಾದಕ ವಸ್ತು ಜಾಲದಲ್ಲಿ ತೊಡಗಿರುವವರನ್ನು ಗುರುತಿಸಿ ಅವರನ್ನು ಮತ್ತೆ ಸಾಮಾನ್ಯ ಬದುಕಿನತ್ತ ತರಲು 'ಸನ್ಮಿತ್ರ' ಎಂಬ ವಿಶೇಷ ಉಪಕ್ರಮ ಆರಂಭಿಸಲಾಗಿದೆ ಎಂದು ಶರಣಪ್ಪ ಹೇಳಿದರು. ಈ ಯೋಜನೆಯಡಿ ಸಂಬಂಧಿತ ವ್ಯಕ್ತಿಗಳಿಗೆ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಿ, ಅವರು ಸಂಪೂರ್ಣವಾಗಿ ಸುಧಾರಿಸುವವರೆಗೆ ನಿಗಾ ವಹಿಸಲಾಗುತ್ತಿದೆ. ಈ ಮೂಲಕ ಈಗಾಗಲೇ ಮಾದಕ ಜಾಲಕ್ಕೆ ಸಿಲುಕಿದ್ದ 150ಕ್ಕೂ ಹೆಚ್ಚು ಯುವಕರಲ್ಲಿ ಬದಲಾವಣೆಯ ಲಕ್ಷಣಗಳು ಕಂಡುಬಂದಿವೆ ಎಂದರು.

18ರಿಂದ 25 ವರ್ಷದ ವಯಸ್ಸು ಜೀವನ ರೂಪಿಸಿಕೊಳ್ಳುವ ಅತ್ಯಂತ ಮಹತ್ವದ ಹಂತ. ಈ ಅವಧಿಯಲ್ಲಿ ಯುವಕರು ತಮ್ಮ ಗುರಿ ಮತ್ತು ಭವಿಷ್ಯದ ಕಡೆ ಗಮನಹರಿಸಬೇಕು, ಕೆಟ್ಟ ಚಟಗಳಿಗೆ ಬಲಿಯಾಗಬಾರದು ಎಂದು ಅವರು ಕಿವಿಮಾತು ಹೇಳಿದರು. ಮಾದಕ ವಸ್ತುಗಳ ವಿರುದ್ಧದ ಹೋರಾಟದಲ್ಲಿ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು, ಸಮಾಜಸೇವಕರು ಮತ್ತು ಸಾರ್ವಜನಿಕರ ಪಾತ್ರ ಅತ್ಯಂತ ಮುಖ್ಯ. ಶೈಕ್ಷಣಿಕ ಸಂಸ್ಥೆಗಳ ಸುತ್ತಮುತ್ತ, ವಸತಿ ಪ್ರದೇಶಗಳಲ್ಲಿ ಅಥವಾ ಬೇರೆಡೆ ಮಾದಕ ವಸ್ತು ಸೇವನೆ ಅಥವಾ ಮಾರಾಟಕ್ಕೆ ಸಂಬಂಧಿಸಿದ ಯಾವುದೇ ಅನುಮಾನಾಸ್ಪದ ಚಟುವಟಿಕೆ ಕಂಡುಬಂದರೆ ತಕ್ಷಣವೇ 112 ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬೇಕು ಎಂದು ಅವರು ಮನವಿ ಮಾಡಿದರು. ಮಾಹಿತಿ ನೀಡುವವರ ಗುರುತನ್ನು ಸಂಪೂರ್ಣ ಗೌಪ್ಯವಾಗಿಡಲಾಗುವುದು ಎಂದ ಅವರು, ಸಾರ್ವಜನಿಕರಿಂದ ದೊರೆಯುತ್ತಿರುವ ಮಾಹಿತಿಯ ಆಧಾರದ ಮೇಲೆ ಪೊಲೀಸರು ಗಸ್ತು ತೀವ್ರಗೊಳಿಸಿದ್ದು, ಮಾದಕ ವಸ್ತು ಸರಬರಾಜಿನಲ್ಲಿ ತೊಡಗಿರುವವರ ವಿರುದ್ಧ ವಿಶೇಷ ಕಾನೂನುಗಳಡಿ ಮುನ್ನೆಚ್ಚರಿಕಾ ಕ್ರಮಗಳನ್ನೂ ಕೈಗೊಂಡಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಯುನೈಟೆಡ್ ಆಸ್ಪತ್ರೆಯ ಕನ್ಸಲ್ಟೆಂಟ್ ನ್ಯೂರೋಸರ್ಜನ್ ಹಾಗೂ ಸ್ಪೈನ್ ಸರ್ಜನ್ ಡಾ. ವಿನಯಸಾಗರ ಶರ್ಮಾ, ಮಾದಕ ವ್ಯಸನವು ವ್ಯಕ್ತಿಯ ದೈಹಿಕ, ಮಾನಸಿಕ ಹಾಗೂ ಭಾವನಾತ್ಮಕ ಆರೋಗ್ಯವನ್ನು ಹಾಳುಮಾಡುತ್ತದೆ ಎಂದು ಎಚ್ಚರಿಸಿದರು. 'ಒಮ್ಮೆ ಸೇವಿಸಿ ನೋಡೋಣ' ಎನ್ನುವ ಮನೋಭಾವವೂ ಅಪಾಯಕಾರಿಯಾಗಿದ್ದು, ಮಾದಕ ವಸ್ತುಗಳಿಂದ ಸಿಗುವ ಕ್ಷಣಿಕ ಉಲ್ಲಾಸದ ಹಿಂದೆ ಹೋಗುವ ಅಭ್ಯಾಸ ಕೊನೆಗೆ ವ್ಯಕ್ತಿಯನ್ನು ಸಂಪೂರ್ಣವಾಗಿ ವ್ಯಸನದ ಬಲೆಗೆ ತಳ್ಳುತ್ತದೆ ಎಂದು ಹೇಳಿದರು.

ಮಾದಕ ವ್ಯಸನದಿಂದ ವ್ಯಕ್ತಿಯ ವಿವೇಕ ಕುಂಠಿತಗೊಳ್ಳುವುದರ ಜೊತೆಗೆ ಕುಟುಂಬ ಮತ್ತು ಸಮಾಜದ ಮೇಲೂ ಗಂಭೀರ ದುಷ್ಪರಿಣಾಮ ಉಂಟಾಗುತ್ತದೆ ಎಂದು ಅವರು ಹೇಳಿದರು. ಯುವಕರು ದೃಢವಾಗಿ ಮಾದಕ ವಸ್ತುಗಳಿಗೆ 'ಬೇಡ' ಎಂದು ಹೇಳಬೇಕು ಹಾಗೂ ತಮ್ಮ ಸುತ್ತಮುತ್ತ ಇಂತಹ ಚಟುವಟಿಕೆಗಳು ಕಂಡುಬಂದರೆ ತಕ್ಷಣ ಸಂಬಂಧಪಟ್ಟವರಿಗೆ ಮಾಹಿತಿ ನೀಡಬೇಕು ಎಂದು ಅವರು ಸಲಹೆ ನೀಡಿದರು.

## ಬಸವಾದಿ ಶರಣರ ಹಿಂದೂ ಸಮಾವೇಶ

# ಹೈಕೋರ್ಟ್ ತೀರ್ಪಿನಿಂದ ಆತಂಕ ದೂರ: ಗುಂಡುರೆಡ್ಡಿ



**ಬೀದರ, ಜೂ. 26:** ಜಿಲ್ಲೆಯ ಬಸವಕಲ್ಯಾಣದಲ್ಲಿ ಜೂ.28ರಂದು ಹಮ್ಮಿಕೊಂಡಿರುವ ಬಸವಾದಿ ಶರಣರ ಹಿಂದೂ ಸಮಾವೇಶಕ್ಕೆ ಅವಕಾಶ ನೀಡಬಾರದು ಮತ್ತು ಸಮಾವೇಶದಲ್ಲಿ ಪಲ್ಗೊಳ್ಳಲು ಕನ್ಹೇರಿ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮಿಗಳು ಬಸವ ಪಂಥದವರಿಗೆ ಪಮಾನಿಸಿದ್ದು ಅವರಿಗೆ ಈ ಸಮಾವೇಶದಲ್ಲಿ ಭಾಗವಹಿಸದಂತೆ ತಡೆ ನೀಡುವಂತೆ ಆಗ್ರಹಿಸಿ ಬಸವ ಪಂಥದ ಮಠಾಧಿಪತಿಗಳು ನ್ಯಾಯಾಲಯದ ಮೊರೆ ಹೋಗಿದ್ದರು.

ಎರಡೂ ಪಂಗಡಗಳ ವಾದವನ್ನು ಆಲಿಸಿದ ಕಲಬುರಗಿ ಹೈಕೋರ್ಟ್ ಪೀಠವು, ಬಸವಕಲ್ಯಾಣದಲ್ಲಿ ಸಮಾವೇಶ ನಡೆಸಲು ಷರತ್ತುಬದ್ಧ ಅನುಮತಿ ನೀಡಿದೆ. ಅಲ್ಲದೇ ಇದೇ ಸಂದರ್ಭದಲ್ಲಿ ವಿವಾದಾತ್ಮ ಭಾಷಣ ಮಾಡದಂತೆ ಕಾಡಸಿದ್ದೇಶ್ವರ ಸ್ವಾಮಿಗಳಿಗೆ ತಾಕೀತು ಮಾಡಿದೆ. ನ್ಯಾಯಾಲಯವು ಸಮಾವೇಶದಲ್ಲಿ ನಿಗದಿತ ಸಂಖ್ಯೆಯಷ್ಟು ಜನರನ್ನು ಸೇರಿಸಿ ಕಾರ್ಯಕ್ರಮ ನಡೆಸಬಹುದು ಎಂದು ತೀರ್ಪು ನೀಡಿದ್ದರಿಂದ ಆತಂಕ ದೂರವಾಗಿದೆ ಎಂದು ಸಮಿತಿ ಕಾರ್ಯಾಧ್ಯಕ್ಷ ಗುಂಡುರೆಡ್ಡಿ ಕಮಲಾಪುರ ತಿಳಿಸಿದರು.

ಸಮಾವೇಶಕ್ಕೆ ಅನುಮತಿ ಇಲ್ಲ ಎಂದು ಕೆಲವರು ಊಹಾಪೋಹ ಎಬ್ಬಿಸಿದ್ದರು. ಅದರೂ ನಮಗೆ ಗೆಲುವು ಸಿಕ್ಕಂತಾಗಿದೆ ಎಂದು ಕಾರ್ಯಕ್ರಮ ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ಗುಂಡುರೆಡ್ಡಿ ಕಮಲಾಪುರೆ ಅವರ ನೇತೃತ್ವದಲ್ಲಿ ನಗರದ ಡಾ.ಅಂಬೇಡ್ಕರ್ ವೃತ್ತದಲ್ಲಿ ಸಮಾವೇಶ ನಡೆಸುವುದಕ್ಕೆ ಕೋರ್ಟ್ ತೀರ್ಪು ನೀಡಿದ್ದರಿಂದ ಪಟಾಕಿ ಸಿಡಿಸಿ ಸಂಭ್ರಮಾಚರಣೆ ನಡೆಸಿದ ಬಳಿಕ ಅವರು ಮಾತನಾಡಿದರು.

ಕನ್ಹೇರಿ ಸ್ವಾಮೀಜಿ ಅವರಿಗೂ ಕಾರ್ಯಕ್ರಮದಲ್ಲಿ ಭಾಗವಹಿಸುವುದಕ್ಕೆ ಅಭ್ಯಂತರ ಇಲ್ಲದಂತಾಗಿದೆ. ಅವರನ್ನೊಳಗೊಂಡು 300 ಮಠಾಧಿಪತಿಗಳು ಸಮಾವೇಶದಲ್ಲಿ ಪಾಲ್ಗೊಳ್ಳುವರು. ಎಲ್ಲ ಸಮುದಾಯಗಳ ಜನರು ಸಮಾವೇಶದಲ್ಲಿ ಭಾಗವಹಿಸುವರು. ಲಿಂಗಾಯತ– ವೀರಶೈವ ಲಿಂಗಾಯತ ಮತ್ತು ಇತರೆ ಜಾತಿಗಳೆಂಬ ಭೇದವಿಲ್ಲ. ಹಿಂದೂ ನಾವೆಲ್ಲ ಒಂದು, ನಾವೆಲ್ಲ ಬಂಧು ಎಂಬುದು ಸಮಾವೇಶದ ಧ್ಯೇಯವಾಕ್ಯ ನಮ್ಮದಾಗಿದೆ ಎಂದರು. ಸಂಭ್ರಮಾಚರಣೆಯಲ್ಲಿ ವಿವಿಧ ಸಂಘಟನೆಗಳ ಕಾರ್ಯಕರ್ತರು ಹಾಗೂ ಮುಖಂಡರು ಪಾಲ್ಗೊಂಡಿದ್ದರು.


**ಬಸವಲಿಂಗ ಪಟ್ಟದ್ದೇವರ ಹರ್ಷ**

ಅದೃಶ್ಯ ಕಾಡಸಿದ್ದೇಶ್ವರ ಮಠದ ಕನ್ಹೇರಿ ಸ್ವಾಮೀಜಿ ಅವರಿಗೆ ಜೂನ್ 28ರಂದು ಬಸವಕಲ್ಯಾಣದಲ್ಲಿ ಆಯೋಸಿರುವ ಬಸವಾದಿ ಶಿವಶರಣರ ಹಿಂದೂ ಸಮಾವೇಶದಲ್ಲಿ ಮಾತನಾಡಲು ನಿರ್ಬಂಧಿಸಿ ಹೈಕೋರ್ಟ್ ತೀರ್ಪು ನೀಡಿದ್ದರಿಂದ ಸ್ವಾಮೀಜಿಗೆ ಬಸವಭೂಮಿಯಲ್ಲಿ ಸೋಲು ಆಗಿದ್ದು ನಮ್ಮ ಹೋರಾಟಕ್ಕೆ ಜಯವಾಗಿದೆ ಎಂದು ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ರಾಜ್ಯ ಘಟಕದ ಅಧ್ಯಕ್ಷ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ, ಬಸವಾದಿ ಶಿವಶರಣರ ಹಾಗೂ ಬಸವಾನುಯಾಯಿಗಳ ಕುರಿತು ಹೀಯಾಳಿಸಿ ಮಾತನಾಡುವ ಕನ್ಹೇರಿ ಸ್ವಾಮೀಜಿ ಬಸವ ಭೂಮಿಯಲ್ಲಿ ಕಾಲಿಡಬಾರದು ಎಂದು ನಾವು ಒತ್ತಾಯಿಸಿದ್ದೇವು. ಕೋರ್ಟ್ ತೀರ್ಪಿನಂತೆ ಅವರು ಇಲ್ಲಿ ಮಾತೇ ಆಡಲಿಲ್ಲವೆಂದರೆ ಅವರು ಇಲ್ಲಿಗೆ ಬಂದಾದರೂ ಏನು ಉಪಯೋಗ, ಜೀವವೇ ಇಲ್ಲದಂತೆ ಎಂದರು.

# ಬೀದರ್–ಲಾತೂರ–ಮುಂಬಯಿ ಹೊಸ ಎಕ್ಸಪ್ರೆಸ್ ರೈಲು ಅರಂಭ

**ಬೀದರ್, ಜೂ. 26:** ಕೇದ್ರ ರೈಲ್ವೆಯು ಬಹುನಿರೀಕ್ಷಿತ ಬೀದರ–ಲಾತೂರ–ಮುಂಬೈ ಮತ್ತು ಮುಂಬೈ–ಲಾತೂರ–ಬೀದರ್ ನಡುವೆ ಹೊಸದಗಿ ಎಕ್ಸ್‌ಪ್ರೆಸ್ ರೈಲು ಆರಂಭಿಸಲಿದ್ದು, ಈ ರೈಲಿಗೆ ಹೆಚ್ಚುವರಿ ಮೂರು ಬೋಗಿಗಳನ್ನು ಸೇರಿಸಲು ನಿರ್ಧರಿಸಿರುವುದಾಗಿ ತಿಳಿಸಿದೆ. ಈ ಬದಲಾವಣೆಯಿಂದಾಗಿ ಒಟ್ಟು 24 ಬೋಗಿಗಳಾಗಲಿದ್ದು, ಪ್ರಯಾಣಿಕರಿಗೆ 182 ಹೆಚ್ಚಿನ ಆಸನಗಳು ಲಭ್ಯವಾಗಲಿವೆ, ಇದರಿಂದ ಪ್ರಯಾಣ ಇನ್ನಷ್ಟು ಸುಗಮವಾಗಲಿದೆ.



24 ಬೋಗಿಗಳೊಂದಿಗೆ ಬೀದರ–ಲಾತೂರ–ಮುಂಬೈ ಮತ್ತು ಮುಂಬೈ–ಬೀದರ್ ಎಕ್ಸ್‌ಪ್ರೆಸ್ ರೈಲುಗಳನ್ನು ಓಡಿಸಲಿದ್ದು, ಪ್ರಯಾಣಿಕರಿಗೆ 182 ಹೆಚ್ಚಿನ ಆಸನಗಳನ್ನು ಒದಗಿಸಲು ಹೆಚ್ಚುವರಿ 3 ಬೋಗಿಗಳನ್ನು ಅಳವಡಿಸಲಾಗಿದೆ ಎಂದು ರೈಲ್ವೆ ಇಲಾಖೆ ಅಧಿಕೃತವಾಗಿ ತಿಳಿಸಿದೆ.

ಅನುಕೂಲಕರ ಪ್ರಯಾಣವನ್ನು ಸುಗಮಗೊಳಿಸುವ ಪ್ರಯಾಣಿಕರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ರೈಲ್ವೆ ಮುಂಬೈ– ಲಾತೂರ್ ಮತ್ತು ಮುಂಬೈ–ಬೀದರ್ ಎಕ್ಸಪ್ರೆಸ್ ರೈಲುಗಳನ್ನು 3 ಹೆಚ್ಚುವರಿ ಬೋಗಿಗಳೊಂದಿಗೆ ಓಡಿಸಲು ನಿರ್ಧರಿಸಿದೆ.

ಸದ್ಯ ರೈಲಿಗೆ 24 ಬೋಗಿಗಳನ್ನು ಅಳವಡಿಸಲಾಗಿದೆ ಎಂದು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆ ತಿಳಿಸಿದೆ.

ರೈಲು ಸಂಖ್ಯೆ 22107 ಮುಂಬೈ–ಲಾತೂರ್ ಎಕ್ಸಪ್ರೆಸ್ ಮತ್ತು ಜೂನ್ 26 ರಿಂದ ರೈಲು ಸಂಖ್ಯೆ 22108 ಲಾತೂರ್ – ಮುಂಬೈ ಎಕ್ಸಪ್ರೆಸ್ ಮತ್ತು ರೈಲು ಸಂಖ್ಯೆ 22143 ಮುಂಬೈ–ಬೀದರ್ ಎಕ್ಸ್‌ಪ್ರೆಸ್ ಮತ್ತು ರೈಲು ಸಂಖ್ಯೆ 22144 ಬೀದರ್–ಮುಂಬೈ ಎಕ್ಸ್‌ಪ್ರೆಸ್ ಸಂಚಾರ ಜಾರಿಗೆ ಬರಲಿದೆ.

## ನಗರದಲ್ಲಿ ಪ್ರವಾಹ ಉಂಟಾಗದಂತೆ ಕ್ರಮ: ಮಣ್ಣು ಕುಸಿತ ತಡೆಗೆ ಪಿಚ್ಚಿಂಗ್ ಕೆಲಸ

# ಕಾಮಗಾರಿಗೆ ಅಗತ್ಯ ಬಿದ್ದರೆ ಸಿಎಸ್‌ಆರ್ ಫಂಡ್: ಡಾ.ಎಂ.ಬಿ. ಪಾಟೀಲ ಭರವಸೆ

**ವಿಜಯಪುರ,ಜೂ.26:** ಕಳೆದ ವರ್ಷದ ಮಳೆಗಾಲದಲ್ಲಿ ನಗರದಲ್ಲಿ ಪ್ರವಾಹ ಉಂಟಾಗಿದ್ದರಿಂದ ಪ್ರವಾಹ ನಿಯಂತ್ರಣ ನಿಧಿಯಡಿ ಹಾಗೂ ಮಹಾನಗರ ಪಾಲಿಕೆ ವಿಜಯಪುರದಿಂದ ಕೈಗೊಂಡ ಹಲವು ಅಭಿವೃದ್ಧಿ ಕಾರ್ಯಗಳನ್ನು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಡಾ.ಎಂ.ಬಿ. ಪಾಟೀಲ ಶುಕ್ರವಾರ ಪರಿಶೀಲಿಸಿದರು.

ಕಳೆದ ವರ್ಷ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದರಿಂದ ನಗರದ ಕೆಲವು ಮನೆಗಳಲ್ಲಿ ನೀರು ನುಗ್ಗಿ ಹಾನಿಯಾಗಿತ್ತು. ಇದು ಮತ್ತೆ ಪುನರಾವರ್ತನೆಯಾಗಬಾರದೆಂದೇ ಕೋಟೆ ಗೋಡೆ ಕಂದಕ ಹಾಗೂ ಕಾಲುವೆಗಳ ಹೂಳು ತೆಗೆಯುವ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಕಂದಕಗಳಲ್ಲಿ ಮಣ್ಣು ಕುಸಿಯಬಾರೆಂದು ಪಿಚ್ಚಿಂಗ್ ಮಾಡಲಾಗುತ್ತಿದೆ. ಇಲ್ಲಿಯವರೆಗೆ ಇದಕ್ಕೆಂದೇ 6 ಕೋಟಿ ರೂ. ವೆಚ್ಚದ ಕಾಮಗಾರಿ ಕೈಗೊಳ್ಳಲಾಗಿದೆ. ಕೆಲವು ಕಾಮಗಾರಿಗಳ ಬದಲಾವಣೆ ಮಾಡಿ ಈ ಕಾಮಗಾರಿಗೆ ಅನುದಾನ ಹೊಂದಾಣಿಕೆ ಮಾಡಲಾಗಿದೆ. ಬಿಡಿಎ ಹಾಗೂ ಪಾಲಿಕೆಯಿಂದ ಕಾಮಗಾರಿ ಬದಲಾವಣೆ ಮಾಡಿ ಅನುದಾನ ಒದಗಿಸಲಾಗುತ್ತಿದೆ. ಆದಾಗ್ಯೂ ಅಗತ್ಯ ಬಿದ್ದರೆ ನನ್ನ ಮತಕ್ಷೇತ್ರದ ಕೆಲ ಕಾಮಗಾರಿ ಬದಲಾವಣೆ ಮಾಡಿ ಇದಕ್ಕೆ ಅನುದಾನ ಕೊಡಿಸುವುದಾಗಿ ಸಚಿವರು ಹೇಳಿದರು. ಇನ್ನೂ ಅನುದಾನದ ಅಗತ್ಯ ಬಿದ್ದರೆ, ಯಾವುದಾದರೂ ಕಂಪನಿಯನ್ನು ಸಂಪರ್ಕಿಸಿ, ಆ ಕಂಪನಿಯ ಸಿಎಸ್ ಆರ್ ಅನುದಾನವನ್ನೂ ಕಾಮಗಾರಿಗೆ ಕೊಡಿಸುವುದಾಗಿ ಸಚಿವರು ಹೇಳಿದರು.



ನಗರದಲ್ಲಿ ಅದೆಷ್ಟೇ ಮಳೆಯಾದರೂ ನಗರ ಭಾಗದಲ್ಲಿ ಪ್ರವಾಹ ಉಂಟಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದ್ದು,ಕಂದಕ ಸೇರಿದಂತೆ ಇತರೆ ಸ್ಥಳಗಳಲ್ಲಿ ಶಾಶ್ವತವಾದ ಕಾಮಗಾರಿಗಳನ್ನು ಮಾಡಲಾಗುತ್ತಿದೆ. ನಗರ ಭಾಗದ ರಸ್ತೆಗಳ ಕಾಮಗಾರಿಗೆ 150 ಕೋಟಿ ಹಣ ಮಂಜೂರು ಮಾಡಲಾಗಿದೆ. ಈ ಮೊತ್ತದಲ್ಲಿ ರಸ್ತೆಗಳ ಕೆಲಸ ಕಾಮಗಾರಿಗಳು ನಡೆಯುತ್ತವೆ ಎಂದ ಅವರು, ನಗರದಲ್ಲಿ ಪ್ರವಾಹ ತಡೆ ಕಾಮಗಾರಿ ಕೈಗೆತ್ತಿಕೊಂಡಿದ್ದಕ್ಕೆ ಪಾಲಿಕೆ ಸದಸ್ಯರು ಹಾಗೂ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗುತ್ತಿದೆ ಎಂದು ಸಚಿವರು ಇದೇ ವೇಳೆ ಹೇಳಿದರು.

ಕಳೆದ ಸಲ ಖುದ್ದಾಗಿ ವೀಕ್ಷಿಸಿದ್ದೆ.: ಶಿವಾಜಿ ವೃತ್ತದಿಂದ ಬಿದರಿ ಆಸ್ಪತ್ರೆಯವರೆಗೆ 3 ಕಿ.ಮೀ ಕಾಮಗಾರಿ ತೆಗೆದುಕೊಳ್ಳಲು ಸೂಚಿಸಲಾಗಿದೆ. ನಗರದ ಹೊರ ಭಾಗದಿಂದ ನೀರು ಒಳಗಡೆ ಬರುವುದನ್ನು ತಪ್ಪಿಸಲಿಕ್ಕೆ ಪ್ರಯತ್ನ ಮಾಡುತ್ತಿದ್ದೇವೆ ಎಂದರು. ಎಷ್ಟೇ ಮಳೆಯಾದರೆ ನಗರದ ಜನತೆಗೆ ತೊಂದರೆಯಾಗದಂತೆ ನೋಡಿಕೊಳ್ಳುತ್ತೇವೆ. ಸ್ವತಃ ಜಿಲ್ಲಾಧಿಕಾರಿ, ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು ಈ ಕಾಮಗಾರಿ ಉಸ್ತುವಾರಿ ನೋಡುತ್ತಿದ್ದಾರೆ ನಗರದಲ್ಲಿ ಒಟ್ಟು 168 ಕೋಟಿ ರೂ. ವೆಚ್ಚದ ಕಾಮಗಾರಿಗಳನ್ನು ನಗರದಲ್ಲಿ ಪ್ರಗತಿಯಲ್ಲಿದ್ದು ಇಷ್ಟು ಮೊತ್ತದ ಕಾಮಗಾರಿಗಳು ಪೂರ್ಣಗೊಂಡರೆ, ನಗರದಲ್ಲಿ ಕಿಂಚಿತ್ ಪ್ರವಾಹ ಬಂದರೂ ಸಮಸ್ಯೆಯಾಗದು ಎಂದರು.







# ಹಾರ್ಮುಜ್ ಜಲಸಂಧಿ: ಸಿಂಗಾಪುರ ಹಡಗಿನ ಮೇಲೆ ಇರಾನ್ ದಾಳಿ– ವಿಶ್ವಸಂಸ್ಥೆಯ ಕಾರ್ಯಾಚರಣೆ ಸ್ಥಗಿತ

**ವಾಷಿಂಗ್ಟನ್/ ಟೆಹ್ರಾನ್, ಜೂ.26::** ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಸಿಂಗಾಪುರ ಧ್ವಜ ಹೊತ್ತ ಸರಕು ಹಡಗಿನ ಎವರ್ ಲಪ್ಲಿ ಮೇಲೆ ದಾಳಿ ಮಾಡಿದ ನಂತರ, ಹಾರ್ಮುಜ್ ಜಲಸಂಧಿಯಲ್ಲಿ ಸಿಲುಕಿರುವ 11,000 ಕ್ಕೂ ಹೆಚ್ಚು ನಾವಿಕರಿಗೆ "ತಕ್ಷಣದ ಸ್ಥಳಾಂತರಿಸುವ ಕಾರ್ಯಾಚರಣೆ"ಯನ್ನು ವಿಶ್ವಸಂಸ್ಥೆಯ ಅಂತರರಾಷ್ಟ್ರೀಯ ಸಾಗರ ಸಂಸ್ಥೆ ಸ್ಥಗಿತಗೊಳಿಸಿದೆ. ನಿರ್ಣಾಯಕ ಹಡಗು ಮಾರ್ಗವನ್ನು ಮತ್ತೆ ತೆರೆಯುವ ಮತ್ತು ಕೊಲ್ಲಿಯಲ್ಲಿ ಸಮುದ್ರ ಸಂಚಾರ ಮತ್ತು ಸಮುದ್ರ ಭಯದ ಸ್ಥಿರೀಕರಣವನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಹೊಸದಾಗಿ ಸಹಿ ಮಾಡಲಾದ ಅಮೆರಿಕ–ಇರಾನ್ ಒಪ್ಪಂದದ ಬಾಳಿಕೆಯನ್ನು ಇದು ಪರೀಕ್ಷಿಸುತ್ತದೆ.

"ಏಕಮುಖ ದಾಳಿ ಡ್ರೋನ್" ಹಡಗನ್ನು ಡಿಕ್ಕಿ ಹೊಡೆದಿದೆ ಎಂದು ವರದಿಯಾಗಿದೆ, ಅದು ಹಡಗಿನ ಪಶ್ಚಿಮ ಭಾಗಕ್ಕೆ ಕುಶಲತೆಯಿಂದ ಚಲಿಸಿತು, ಇದು ಹಡಗಿನ ಸ್ಟಾರ್ಬೋರ್ಡ್ ಬದಿಯಲ್ಲಿರುವ ಅದರ ಸೇತುವೆಯನ್ನು ಹಾನಿಗೊಳಿಸಿತು ಎಂದು ಅಓಓ ವರದಿ ಮಾಡಿದೆ. "ಯಾವುದೇ ಸಾವುನೋವುಗಳು ಸಂಭವಿಸಿಲ್ಲ" ಮತ್ತು ವರದಿಯಾದ ಪರಿಸರ ಹಾನಿ ಇಲ್ಲ, ಆದರೆ ಸಮುದ್ರ ಮೇಲ್ವಿಚಾರಣಾ ಸಂಸ್ಥೆಗಳು ದಾಳಿಯು ವಿಶ್ವದ ಅತ್ಯಂತ ಕಾರ್ಯತಂತ್ರದ ಸೂಕ್ಷ್ಮ ಜಲಮಾರ್ಗಗಳಲ್ಲಿ ಒಂದರಲ್ಲಿ ಕಾರ್ಯಾಚರಣೆಯನ್ನು ಅಡ್ಡಿಪಡಿಸಿದೆ ಎಂದು ದೃಢಪಡಿಸಿದೆ.

"ಟೆಹ್ರಾನ್ ಅನುಮೋದಿಸಿದ ನಿರ್ದಿಷ್ಟ ಮಾರ್ಗಗಳನ್ನು" ಅನುಸರಿಸಿದರೆ ಮಾತ್ರ ಹಡಗುಗಳಿಗೆ ಸುರಕ್ಷಿತ ಮಾರ್ಗವನ್ನು ನೀಡಲಾಗುವುದು ಎಂದು ಇರಾನ್ ಎಚ್ಚರಿಸಿದ ಕೆಲವೇ ಗಂಟೆಗಳ ನಂತರ ಈ ಘಟನೆ ಸಂಭವಿಸಿದೆ, ಇದು ಇತ್ತೀಚಿನ ಕದನ ವಿರಾಮ ಚೌಕಟ್ಟಿನ ಅಡಿಯಲ್ಲಿ ಜಲಸಂಧಿಯನ್ನು ಮತ್ತೆ ತೆರೆಯಲಾಗಿದೆ ಎಂಬ ವಾಷಿಂಗ್ಟನ್ನ ಹೇಳಿಕೆಯನ್ನು ನೇರವಾಗಿ ಪ್ರಶ್ನಿಸಿತು.



ಒಮಾನ್‌ನ ದಹಿತ್ ಬಂದರಿನ ಆಗ್ನೇಯಕ್ಕೆ 7.5 ನಾಟಿಕಲ್ ಮೈಲುಗಳಷ್ಟು ದೂರದಲ್ಲಿ "ಅಪರಿಚಿತ ಉತ್ಕ್ಷೇಪಕ" ದಿಂದ ಹಡಗಿನೊಂದು ಡಿಕ್ಕಿ ಹೊಡೆದಿದೆ ಎಂದು ಯುಕೆ ಮಾರಿಟೈಮ್ ಟ್ರೇಡ್ ಆಪರೇಷನ್ಸ್ (ಯುಕೆಎಂಟಿಒ) ಪ್ರತ್ಯೇಕವಾಗಿ ವರದಿ ಮಾಡಿದೆ. ಯಾವುದೇ ಸಾವುನೋವುಗಳು ವರದಿಯಾಗಿಲ್ಲ.

ಐಎಂಓ ಪ್ರಧಾನ ಕಾರ್ಯದರ್ಶಿ ಆರ್ಸೆನಿಯೊ ಡೊಮಿಂಗ್ಯೂಜ್ ಅವರು ಹಲವಾರು ಹಡಗುಗಳನ್ನು ಈಗಾಗಲೇ ಸ್ಥಳಾಂತರಿಸಲಾಗಿದೆ ಎಂದು ಹೇಳಿದರು ಆದರೆ ಕಾರ್ಯಾಚರಣೆಯನ್ನು ಮುಂದುವರಿಸುವ ಮೊದಲು ಏಜೆನ್ಸಿ "ಅಗತ್ಯ ಸುರಕ್ಷತಾ ಖಾತರಿಗಳು" ಸ್ಥಳದಲ್ಲಿಯೇ ಇರುವುದನ್ನು ಖಚಿತಪಡಿಸಿಕೊಳ್ಳಬೇಕಾಗಿದೆ ಎಂದು ಹೇಳಿದರು.

"ನಾವಿಕರ ಸುರಕ್ಷತೆಯು ಅತ್ಯಂತ ಮುಖ್ಯವಾದುದು ಎಂದು ನಾನು ಯಾವಾಗಲೂ ಪುನರುಚ್ಚರಿಸಿದ್ದೇನೆ" ಎಂದು ಡೊಮಿಂಗ್ಯೂಜ್ ಹೇಳಿದರು. "ಆದ್ದರಿಂದ, ಸಂಘಟಿತ ವಿಧಾನ ಮತ್ತು ಸಂಚರಣ ಸುರಕ್ಷತೆಯನ್ನು ಖಚಿತಪಡಿಸಿ ಕೊಳ್ಳಲು, ಹೆಚ್ಚಿನ ಸ್ಪಷ್ಟತೆ ಪಡೆಯುವವರೆಗೆ ಸ್ಥಳಾಂತರಿಸುವ ಯೋಜನೆಯನ್ನು ವಿರಾಮಗೊಳಿಸಲಾಗುತ್ತದೆ."

"ಇಂದು ಓಮನ್ ಕೊಲ್ಲಿಯಲ್ಲಿ ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋದ ಹಡಗಿನ ಮೇಲೆ ದಾಳಿ ನಡೆದ ಬಗ್ಗೆ ನನಗೆ ಮಾಹಿತಿ ನೀಡಲಾಗಿದೆ. ಈ ಹಡಗು IMOಯ ಸ್ಥಳಾಂತರಿಸುವ ಚೌಕಟ್ಟಿನ ಅಡಿಯಲ್ಲಿ ಸಾಗಲಿಲ್ಲ. ನಾವಿಕರ ಸುರಕ್ಷತೆಯು ಅತ್ಯಂತ ಮುಖ್ಯವಾದುದು ಎಂದು ನಾನು ಯಾವಾಗಲೂ ಪುನರುಚ್ಚರಿಸಿದ್ದೇನೆ. ಆದ್ದರಿಂದ, ಸಂಘಟಿತ ವಿಧಾನ ಮತ್ತು ಸಂಚರಣ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು, ಹೆಚ್ಚಿನ ಸ್ಪಷ್ಟತೆ ಪಡೆಯುವವರೆಗೆ ಸ್ಥಳಾಂತರಿಸುವ ಯೋಜನೆಯನ್ನು ವಿರಾಮಗೊಳಿಸಲಾಗುತ್ತದೆ" ಎಂದು ಡೊಮಿಂಗ್ಯೂಜ್ ಹೇಳಿದರು.

ಅಂತರರಾಷ್ಟ್ರೀಯ ಸಮನ್ವಯ ಸಂಸ್ಥೆಗಳು ಗೊತ್ತುಪಡಿಸಿದ ಮಾರ್ಗಗಳಲ್ಲಿ ಜಲಸಂಧಿಯನ್ನು ದಾಟುವ ಪ್ರಯತ್ನಗಳು "ಸ್ವೀಕಾರಾರ್ಹವಲ್ಲ ಮತ್ತು ಸಂಪೂರ್ಣವಾಗಿ ಅಪಾಯಕಾರಿ" ಎಂದು ಖಖಉಅ ಎಚ್ಚರಿಸಿದ ನಂತರ ಮತ್ತು ಹಡಗುಗಳು ಇರಾನಿನ ಅಧಿಕಾರಿಗಳೊಂದಿಗೆ ನೇರವಾಗಿ ಸಮನ್ವಯ ಸಾಧಿಸಬೇಕು ಎಂದು ಹೇಳಿದ ನಂತರ ಈ ದಾಳಿ ಸಂಭವಿಸಿದೆ.

ಘಟನೆಯ ಸಮಯದಲ್ಲಿ ಎವರ್ ಲಪ್ಲಿ ನಾಲ್ಕು ಇತರ ಹಡಗುಗಳ ಫ್ಲೋಟಿಲ್ಲಾವನ್ನು ಮುನ್ನಡೆಸುತ್ತಿತ್ತು ಎಂದು ವರದಿಗಳು ಸೂಚಿಸಿವೆ.

ಈ ಮುಷ್ಕರವು, ಜಾಗತಿಕ ತೈಲದ ಸುಮಾರು ಐದನೇ ಒಂದು ಭಾಗದಷ್ಟು ಹರಿಯುವ ಜಲಮಾರ್ಗದ ಮೇಲೆ ಒತ್ತಡ ಹೇರುವ ಇರಾನ್ನ ನಿರಂತರ ಸಾಮರ್ಥ್ಯವನ್ನು ಒತ್ತಿಹೇಳುತ್ತದೆ – ಇದು ಜಾಗತಿಕ ತೈಲದ ಸುಮಾರು ಐದನೇ ಒಂದು ಭಾಗದಷ್ಟು ಹರಿಯುವ ಒಂದು ಚಾಕ್ಪಾಯಿಂಟ್ – ಅದು ನಿರಂತರ ಸಾಗಣೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಹಗೆತನವನ್ನು ಕಡಿಮೆ ಮಾಡಲು ಉದ್ದೇಶಿಸಲಾದ ಚೌಕಟ್ಟಿನ ಒಪ್ಪಂದದಲ್ಲಿ ಭಾಗವಹಿಸಿದ್ದರೂ ಸಹ.

ಜೂನ್ 17 ರಂದು ಸಹಿ ಹಾಕಿದ ಒಪ್ಪಂದದ ಅಡಿಯಲ್ಲಿ, ವಾಷಿಂಗ್ಟನ್ ಮತ್ತು ಟೆಹ್ರಾನ್ ಪರಮಾಣು ನಿರ್ಬಂಧಗಳು, ನಿರ್ಬಂಧಗಳ ಪರಿಹಾರ ಮತ್ತು ಪ್ರಾದೇಶಿಕ ಭದ್ರತಾ ವ್ಯವಸ್ಥೆಗಳ ಕುರಿತು ವಿಶಾಲ ಮಾತುಕತೆಗಳು ಮುಂದುವರಿಯುವಾಗ ಜಲಸಂಧಿಯನ್ನು 60 ದಿನಗಳವರೆಗೆ ಮತ್ತೆ ತೆರೆಯಲು ಬದ್ಧವಾಗಿವೆ.

# ಇಸ್ರೇಲ್ ದಾಳಿ: ಲೆಬನಾನ್‌ನಲ್ಲಿ ಸಾವಿನ ಸಂಖ್ಯೆ 4,230ಕ್ಕೆ

**ಬೈರುತ್, ಜೂ.26:** ಲೆಬನಾನ್‌ನ ಸಾರ್ವಜನಿಕ ಆರೋಗ್ಯ ಸಚಿವಾಲಯ ಗುರುವಾರ ಬಿಡುಗಡೆ ಮಾಡಿದ ನವೀಕರಿಸಿದ ಅಂಕಿಅಂಶಗಳ ಪ್ರಕಾರ, ಮಾರ್ಚ್ 2 ರಂದು ಇರಾನ್ ಬೆಂಬಲಿತ ಹಿಜ್‌ಬುಲ್ಲಾ ಉಗ್ರರೊಂದಿಗೆ ದೇಶದ ಸಮಾನಾಂತರ ಸಂಘರ್ಷ ಪ್ರಾರಂಭವಾದಾಗಿನಿಂದ ಲೆಬನಾನ್‌ನಲ್ಲಿ ಇಸ್ರೇಲಿ ಮಿಲಿಟರಿ ಕಾರ್ಯಾಚರಣೆಗಳಿಂದ ಸಾವನ್ನಪ್ಪಿದವರ ಸಂಖ್ಯೆ 4,230 ಕ್ಕೆ ಏರಿದೆ. ಸಚಿವಾಲಯದ ಪ್ರಕಾರ, ಅದರ ಹಿಂದಿನ ನವೀಕರಣದ ನಂತರ 19 ಕ್ಕೂ ಹೆಚ್ಚು ಹೆಚ್ಚುವರಿ ಸಾವುಗಳು ದಾಖಲಾಗಿವೆ, ಗಾಯಗೊಂಡವರ ಸಂಖ್ಯೆಯೂ ಆರು ರಿಂದ 12,179 ಕ್ಕೆ ಏರಿದೆ. ಅಮೆರಿಕ–ಇರಾನ್ ಒಡಂಬಡಿಕೆ ಸಂಬಂಧಿಸಿದ ದುರ್ಬಲವಾದ ಕದನ ವಿರಾಮವನ್ನು ಕಾಪಾಡಿಕೊಳ್ಳುವ ಪ್ರಯತ್ನಗಳ ನಡುವೆ, ಇಸ್ರೇಲ್–ಲೆಬನಾನ್ ಮುಂಭಾಗದಲ್ಲಿ ಘಟನೆಗಳನ್ನು ಸ್ವತಂತ್ರವಾಗಿ ಮೇಲ್ವಿಚಾರಣೆ ಮಾಡಲು ವಿನ್ಯಾಸಗೊಳಿಸಲಾದ ಹೊಸ ಕಾರ್ಯವಿಧಾನವನ್ನು ಯುಎಸ್ ಪರಿಚಯಿಸಿದ ನಂತರ ಇತ್ತೀಚಿನ ಅಂಕಿಅಂಶಗಳು ಬಂದಿವೆ. ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರು, ಎರಡೂ ಕಡೆಯ ಹಕ್ಕುಗಳನ್ನು ಮಾತ್ರ ಅವಲಂಬಿಸುವ ಬದಲು ನೈಜ ಸಮಯದಲ್ಲಿ ಭದ್ರತಾ ಘಟನೆಗಳನ್ನು ನಿರ್ಣಯಿಸಲು CENTCOM ಸಿಬ್ಬಂದಿ ಈಗ IDF (ಇಸ್ರೇಲ್ ರಕ್ಷಣಾ ಪಡೆಗಳು) ಮತ್ತು LAF (ಲೆಬನಾನಿನ ಸಶಸ್ತ್ರ ಪಡೆಗಳು) ಎರಡರೊಂದಿಗೂ ನೇರವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

"ಯಾವುದೇ ಘಟನೆ ಸಂಭವಿಸಿದಾಗ, ನಾವು ಬೇರೆಯವರ ಮಾತನ್ನು ನಂಬುವುದಿಲ್ಲ" ಎಂದು ರುಬಿಯೊ ಹೇಳಿದರು.